ಸಂಪುಟ: 04 ಸಂಚಿಕೆ: 323 ಪುಟಗಳು: 08 ಮಂಗಳವಾರ 04 ಫೆಬ್ರವರಿ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
9448225696 +91 8035841833 ₹5

ಮುಂಜಾನೆ ಮಾತು

ಎಲ್ಲಾ ಹೇಳುತ್ತಾರೆ ಮನುಷ್ಯ ಕಾಲಿ ಕೈಯಲ್ಲಿ ಬರುತ್ತಾನೆ ಕಾಲಿ ಕೈನಲ್ಲಿ ಹೋಗುತ್ತಾನೆ ಎಂದು, ಆದರೆ ಮನುಷ್ಯ ಬರುವಾಗ ಭಾಗ್ಯದ ಜೊತೆ ಬರುತ್ತಾನೆ ಹೋಗುವಾಗ ಕರ್ಮದ ಫಲ ಕೊಂಡು ಹೋಗುತ್ತಾನೆ.

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ಸಿಎಂ ಸಲಹೆಗಾರ ಪಾಟೀಲ್ ರಾಜೀನಾಮೆ ಬಗ್ಗೆ ನನಗೆ ಗೊತ್ತಿಲ್ಲ

• ಉದಯವಾಹಿನಿ, ಬೆಂಗಳೂರು

ಸಿಎಂ ಸಲಹೆಗಾರ ಶಾಸಕ ಬಿ.ಆರ್.ಪಾಟೀಲ್ ರಾಜೀನಾಮೆ ಯಾಕೆ ಕೊಟ್ಟಿದ್ದಾರೆ ಎಂದು ನನಗೆ ಗೊತ್ತಿಲ್ಲ, ಸಿಎಂ ಅವರು ಬಿ.ಆರ್. ಪಾಟೀಲ್ ಜೊತೆ ಮಾತನಾಡುತ್ತಾರೆ ಎಂದು ಗೃಹ ಸಚಿವ ಜಿ.ಪರಮೇಶ್ವರ್ ಹೇಳಿದರು.ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿಎಂ ಸಲಹೆಗಾರ ಬಿ.ಆರ್ ಪಾಟೀಲ್ ರಾಜೀನಾಮೆ ವಿಚಾರಕ್ಕೆ ಪ್ರತಿಕ್ರಿಯಿಸಿ, ಅವರ ರಾಜೀನಾಮೆ ವಿಚಾರ ಗೊತ್ತಿಲ್ಲ, ಸಿಎಂ ಮತ್ತು ಅವರಿಗೆ ಬಿಟ್ಟ ವಿಚಾರ ಅದು. ಸಿಎಂ ಅವರು ಪಾಟೀಲ್ ಅವರ ಜೊತೆ ಮಾತಾಡ್ತಾರೆ. ಸಿಎಂ ಅವರು ಏನು ಹೇಳುತ್ತಾರೆ ನೋಡೋಣ ಎಂದರು. ಗ್ಯಾರಂಟಿಗಳಿಂದ ಅನುದಾನ ಸಿಗುತ್ತಿಲ್ಲ ಎಂಬ ಬಿ.ಆರ್.ಪಾಟೀಲ್ ಆರೋಪದ ಬಗ್ಗೆ ನನಗೆ ಗೊತ್ತಿಲ್ಲ, ಸಿಎಲ್‌ಪಿ ಸಭೆ ಆದ ಮೇಲೆ ಸಿಎಂ ಅವರು ಎಲ್ಲಾ ಶಾಸಕರಿಗೆ 10 ಕೋಟಿ ರೂ. ಅನುದಾನ ರಿಲೀಸ್ ಮಾಡಿದ್ದರು. ಅದಾದ ಬಳಿಕ ಅನುದಾನದ ವಿಚಾರವನ್ನು ಯಾರು ಮಾತಾಡಿರಲಿಲ್ಲ, ಈಗ ಬಿ.ಆರ್ ಪಾಟೀಲ್ ಮಾತನಾಡಿರುವ ಬಗ್ಗೆ ಗೊತ್ತಿಲ್ಲ ಎಂದು ಸ್ಪಷ್ಟಪಡಿಸಿದರು.

ವಿಮಾನ ನಿಲ್ದಾಣ: ಹೆಚ್‌ಡಿಡಿ ಮನವಿಗೆ ಕೇಂದ್ರದಿಂದ ಸ್ಪಂದನೆ

• ಉದಯವಾಹಿನಿ, ನವದೆಹಲಿ

ಮಾಹಿತಿ ತಂತ್ರಜ್ಞಾನ ಹಾಗೂ ಜೈವಿಕ ತಂತ್ರಜ್ಞಾನಕ್ಕೆ ಬೆಂಗಳೂರು ನಗರ ಜಾಗತಿಕ ಹಬ್ ಆಗಿದ್ದು, ಸುಲಭ ಸಂಪರ್ಕಕ್ಕೆ ಮತ್ತೊಂದು ವಿಮಾನ ನಿಲ್ದಾಣ ನಗರಕ್ಕೆ ಅಗತ್ಯವಿದೆ ಎಂದು ಮಾಜಿ ಪ್ರಧಾನಿ ಹೆಚ್.ಡಿ ದೇವೇಗೌಡರು ಪ್ರತಿಪಾದಿಸಿದರು. ರಾಜ್ಯಸಭೆಯಲ್ಲಿ ಮಾತನಾಡಿದ ಮಾಜಿ ಪ್ರಧಾನಿಗಳು, ಕರ್ನಾಟಕ ಸರ್ಕಾರ ಈಗಾಗಲೇ ಮತ್ತೊಂದು ವಿಮಾನ ನಿಲ್ದಾಣ ನಿರ್ಮಾಣಕ್ಕೆ ಪ್ರಸ್ತಾವನೆ ಸಲ್ಲಿಸಿದೆ. ಸರ್ಕಾರ ಈಗಾಗಲೇ ನಾಗರಿಕ ವಿಮಾನಯಾನ ಸಚಿವರನ್ನು ಸಂಪರ್ಕಿಸಿ ಈ ಬಗ್ಗೆ ಚರ್ಚೆ ನಡೆಸಿದೆ. ಬೆಂಗಳೂರು ನಗರಕ್ಕೆ, ಅದರಲ್ಲಿಯೂ ರಾಜ್ಯದ ಅಭಿವೃದ್ಧಿ ದೃಷ್ಟಿಯಿಂದ ಮತ್ತೊಂದು ವಿಮಾನ ನಿಲ್ದಾಣದ ಅಗತ್ಯವಿದೆ ಎಂದು ಒತ್ತಿ ಹೇಳಿದರು. ಈ ನಿಟ್ಟಿನಲ್ಲಿ ಕೇಂದ್ರವು ಕರ್ನಾಟಕದಲ್ಲಿ ಮತ್ತೊಂದು ವಿಮಾನ ನಿಲ್ದಾಣವನ್ನು ನಿರ್ಮಿಸುವ ಬಗ್ಗೆ ಗಮನ ಹರಿಸಬೇಕು. ಕರ್ನಾಟಕಕ್ಕೆ ಸಂಬಂಧಿಸಿ ನಾನು ಮಂಜೂರು ಮಾಡಿದ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವು ಈಗ ಪ್ರಯಾಣಿಕರ ದಟ್ಟಣೆಯಿಂದ ವಿಪರೀತ ಒತ್ತಡ ಎದುರಿಸುತ್ತಿದೆ. ಹೀಗಾಗಿ ಬೆಂಗಳೂರಿನಲ್ಲಿ ಇನ್ನೂ ಒಂದು ವಿಮಾನ ನಿಲ್ದಾಣದ ಅಗತ್ಯವಿದೆ ಎಂದು ಅವರು ಹೇಳಿದರು. ಬೆಂಗಳೂರಿಗೆ ಮತ್ತೊಂದು ವಿಮಾನ ನಿಲ್ದಾಣ ಅಗತ್ಯವಿದೆ ಎಂಬ ಮಾಜಿ ಪ್ರಧಾನಿಗಳ ಮಾತಿಗೆ ವಿಮಾನಯಾನ ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿ ಸಮ್ಮತಿ ಸೂಚಿಸಿದರು.

ಹಾಸ್ಟೆಲ್‌ಗೆ ಭೇಟಿ ನೀಡುವುದು ಕಡ್ಡಾಯ: ಸಚಿವ ತಂಡರಗಿ

• ಉದಯವಾಹಿನಿ, ಬೆಂಗಳೂರು

ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳು ಹಾಸ್ಟೆಲ್‌ಗಳಿಗೆ ಭೇಟಿ ನೀಡದಿರುವುದು ನನ್ನ ಗಮನಕ್ಕೆ ಬಂದಿದೆ. ಕೇವಲ ಕಚೇರಿಯಲ್ಲಿ ಕುಳಿತು ಕಾಲಹರಣ ಮಾಡುವುದನ್ನು ನಾನು ಸಹಿಸುವುದಿಲ್ಲ. ಇನ್ನು ಮುಂದೆ ಕಡ್ಡಾಯವಾಗಿ ಆಯಾ ಜಿಲ್ಲೆಯ ಪ್ರತಿಯೊಂದು ಹಾಸ್ಟೆಲ್‌ಗಳಿಗೆ ಭೇಟಿ ನೀಡಿ, ಆಹಾರ ಗುಣಮಟ್ಟ ಹಾಗೂ ಶುಚಿತ್ವಗಳ ಬಗ್ಗೆ ಪರಿಶೀಲನೆ ನಡೆಸಬೇಕು. ಈ ಕೆಲಸ ನಿರಂತರವಾಗಿ ನಡೆಯಬೇಕು. ಜಿಲ್ಲಾ ಕಲ್ಯಾಣಾಧಿಕಾರಿಗಳು ಹಾಸ್ಟೆಲ್‌ಗಳಿಗೆ ಭೇಟಿ ನೀಡಿದ ವೇಳೆ ಅಲ್ಲಿಯೇ ಊಟ ಸೇವಿಸಬೇಕು. ಇದರಿಂದ ಅಲ್ಲಿನ ಆಹಾರದ ಗುಣಮಟ್ಟ ಸೇರಿದಂತೆ ಇನ್ನಿತರ ವಿಚಾರಗಳು ಗಮನಕ್ಕೆ ಬರಲಿವೆ ಎಂಬುದಾಗಿ ಸಚಿವ ಶಿವರಾಜ್ ತಂಡರಗಿ ಹೇಳಿದರು.

ಉತ್ಸವದಲ್ಲಿ ಪಾಲ್ಗೊಳ್ಳದಂತೆ ಸರ್ಕಾರ ಮೌಖಿಕ ಸೂಚನೆ

• ಉದಯವಾಹಿನಿ, ಸೇಡಂ

'ಪಕ್ಷಾತೀತವಾದ ಭಾರತೀಯ ಸಂಸ್ಕೃತಿ ಉತ್ಸವದಲ್ಲೂ ರಾಜ್ಯ ಸರ್ಕಾರ ರಾಜಕಾರಣ ಮಾಡಿದೆ. ಯಾವುದೇ ಶಾಲಾ ಮಕ್ಕಳು, ಸರ್ಕಾರಿ ಅಧಿಕಾರಿಗಳು ಪಾಲ್ಗೊಳ್ಳದಂತೆ ಮೌಖಿಕ ಸೂಚನೆ ಕೊಟ್ಟಿದೆ. ಅದೇ ಸೂಚನೆ ಲಿಖಿತವಾಗಿ ಕೊಡುವ ಧೈರ್ಯವನ್ನೂ ಸರ್ಕಾರ ತೋರಿಲ್ಲ' ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ವ್ಯಂಗ್ಯವಾಡಿದರು. 'ಇದು ಧೈರ್ಯವಿಲ್ಲದ ಹಾಗೂ ನಮ್ಮ ವಿಚಾರಧಾರೆ ವಿರೋಧವುಳ್ಳ ಸರ್ಕಾರವಾಗಿದೆ. ಮಕ್ಕಳಲ್ಲಿ ಯಾಕೆ ವಿಷ ಬೀಜ ಬಿತ್ತಬೇಕು' ಎಂದು ಪ್ರಶ್ನಿಸಿದರು. 'ಕೊತ್ತಲ ಬಸವೇಶ್ವರ ವಿದ್ಯಾ ಸಂಸ್ಥೆ ಕಳೆದ ಎರಡೂರು ದಶಕಗಳಲ್ಲಿ ಏನು ಮಾಡಿದೆ ಎಂಬುದನ್ನಾದರೂ ಸರ್ಕಾರ ಅಧ್ಯಯನ ಮಾಡಬೇಕಿತ್ತು.ಸ್ಥಳೀಯ ಶಾಸಕರೂ ಅದರ ಆಧಾರದಲ್ಲಿ ಸರ್ಕಾರಕ್ಕೆ ಮನವರಿಕೆ ಮಾಡಬೇಕಿತ್ತು' ಎಂದು ಅಭಿಪ್ರಾಯಪಟ್ಟರು. 'ಸರ್ಕಾರದ ನಿರ್ಧಾರದಿಂದ ನಮಗೆ ದುಃಖವಾಗಿದೆ' ಎಂದ ಅವರು 'ಕಲಬುರಗಿಯಲ್ಲೂ ಈ ಉತ್ಸವಕ್ಕೆ ವಿರೋಧ ಮಾಡಿರುವುದು ಯಾವುದಕ್ಕಾಗಿ ಭಾರತೀಯ ವಿಚಾರ ಧಾರೆ, ಕೃಷಿ ಪದ್ಧತಿ, ಆರೋಗ್ಯ ಪದ್ಧತಿ, ಕಲೆಯನ್ನೇ ಜನಕ್ಕೆ ಹೇಳಿಕೊಡುವುದು ತಪ್ಪೇ' ಎಂದು ಕೇಳಿದರು.

ಸುಗ್ರೀವಾಜ್ಞೆ ಜಾರಿ ಮಾಡುವ ಹೊತ್ತಲ್ಲೂ ಕಿರುಕುಳ ನಿರಂತರವಾಗಿ ಮುಂದುವರೆದಿದ್ದು , ರಾಜ್ಯದಲ್ಲಿ ಮತ್ತೆ ಐವರು ಆತ್ಮಹತ್ಯೆಗೆ ಶರಣಾಗಿದ್ದಾರೆ. ಮೈಕ್ರೋ ಫೈನಾನ್ಸ್ ವಿರುದ್ಧ ಸುಗ್ರೀವಾಜ್ಞೆ ಜಾರಿ ವಿಳಂಬ ಹಿನ್ನಲೆ ಸಾವಿನ ಸರಣಿ ನಿಲ್ಲುತ್ತಿಲ್ಲ. ಸಾಲದ ಬಾಧೆಗೆ ಗ್ರಾ.ಪಂ ಮಾಜಿ ಸದಸ್ಯ ನೇಣಿಗೆ ಕೊರಳೊಡ್ಡಿದ್ದಾರೆ. ಗೌರಿಬಿದನೂರು ನರಸಿಂಹಯ್ಯ ಆಟೋ ಓಡಿಸಿಕೊಂಡು ಬದುಕಿನ ಬಂಡಿ ಸಾಗಿಸ್ತಿದ್ದ. ಮೂರ್ನಾಲ್ಕು ಮೈಕ್ರೋ ಕಂಪನಿಗಳಲ್ಲಿ 3 ಲಕ್ಷ ರೂ. ಸಾಲ ಮಾಡಿಕೊಂಡಿದ್ದ. ಸಾಲ ತೀರಿಸಲು ಎರಡೂರು ಬಾರಿ ಆಟೋವನ್ನೂ ಅಡವಿಟ್ಟಿದ್ದ. ಕೊನೆಗೆ ಫೈನಾನ್ಸ್‌ನವರ ಕಿರುಕುಳ ಹೆಚ್ಚಾಗ್ತಿದ್ದಂತೆಯೇ, ರಸ್ತೆ ಬದಿಯೇ ನೇಣಿಗೆ ಶರಣಾಗಿದ್ದಾರೆ. ಹಾಸನ, ಹಾವೇರಿಯಲ್ಲಿ ಮತ್ತಿಬ್ಬರು ರೈತರು ಮೈಕ್ರೋ ಫೈನಾನ್ಸ್ ಕಿರುಕುಳಕ್ಕೆ ಬಲಿಯಾಗಿದ್ದಾರೆ. ದಾವಣಗೆರೆಯಲ್ಲಿ ಬ್ಯಾಂಕ್‌ನವರು 2 ಬಾರಿ ನೋಟಿಸ್ ಕೊಟ್ಟಿದ್ದಕ್ಕೆ ಹೆದರಿ, ರೈತ ಸುರೇಶ್ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಮೈಕ್ರೋ ಫೈನಾನ್ಸ್ ಉಪಟಳ ಸರ್ಕಾರ ಕಳವಳ



ಮೈಕ್ರೋ ಫೈನಾನ್ಸ್‌ಗಳಿಂದ ಬಡವರ ಮೇಲಿನ ದೌರ್ಜನ್ಯ ತಡೆಗೆ ಸುಗ್ರೀವಾಜ್ಞೆ

ಮೈಕ್ರೋ ಫೈನಾನ್ಸ್ ವಿರುದ್ಧದ ಸುಗ್ರೀವಾಜ್ಞೆ ಡ್ರಾಫ್ಟ್ ರಾಜ್ಯಪಾಲರಿಗೆ ರವಾನೆ: ಜೈಲು

ಶಿಕ್ಷೆಯಲ್ಲಿ ಬದಲಾವಣೆ ಮೈಕ್ರೋ ಫೈನಾನ್ಸ್‌ಗೆ ಅಂಕುಶ, ಸುಗ್ರೀವಾಜ್ಞೆ ಸಿದ್ಧ: ಡಿಕೆಶಿ

• ಉದಯವಾಹಿನಿ, ಬೆಂಗಳೂರು

ಬಡವರ ರಕ್ಷಣೆ ನಮ್ಮ ಸರ್ಕಾರದ ಕರ್ತವ್ಯ. ಸಾಲ ವಸೂಲಿ ಹೆಸರಲ್ಲಿ ಮೈಕ್ರೋ ಫೈನಾನ್ಸ್‌ಗಳಿಂದ ಬಡವರಿಗೆ ಆಗುತ್ತಿರುವ ಕಿರುಕುಳ ತಪ್ಪಿಸಲು ನಮ್ಮ ಸರ್ಕಾರ ಸುಗ್ರೀವಾಜ್ಞೆ ರೂಪಿಸಿದೆ ಎಂದು ಡಿಸಿಎಂ ಡಿಕೆಶಿವಕುಮಾರ್ ತಿಳಿಸಿದರು. ಸದಾಶಿವನಗರ ನಿವಾಸದ ಬಳಿ ಮಾತನಾಡಿ, ಸಾಲ ವಸೂಲಿ ಮಾಡಲು ರೌಡಿಗಳ ಮೂಲಕ ಬೆದರಿಸಿ, ಕಾನೂನು ಕೈಗೆ ತೆಗೆದುಕೊಂಡು, ಬಡವರ ಮೇಲೆ ದಬ್ಬಾಳಿಕೆ ನಡೆಸಲು ನಮ್ಮ ಸರ್ಕಾರ ಅವಕಾಶ ನೀಡುವುದಿಲ್ಲ. ಇದನ್ನು ನಿಯಂತ್ರಿಸಲು ಪೊಲೀಸರಿಗೆ ಹೆಚ್ಚಿನ ಅಧಿಕಾರ ನೀಡಲಾಗುವುದು. ಈಗಾಗಲೇ ಬೆಳಗಾವಿ, ಬೀದರ್, ಮೈಸೂರು, ರಾಮನಗರ ಸೇರಿದಂತೆ ಅನೇಕ ಜಿಲ್ಲೆಗಳಲ್ಲಿ ಇಂತಹ ಪ್ರಕರಣಗಳಲ್ಲಿ ಎಫ್‌ಐಆರ್ ದಾಖಲಾಗಿವೆ. ಇಂತಹ ಪ್ರಕರಣಗಳಲ್ಲಿ ಕಠಿಣ ಕ್ರಮ ಕೈಗೊಳ್ಳುವಂತೆ ಸಿಎಂ ಹಾಗೂ ಸಹಕಾರ ಸಚಿವರು ಸೂಚಿಸಿದ್ದಾರೆ. ಇದನ್ನು ನಿಯಂತ್ರಿಸಲು ಸುಗ್ರೀವಾಜ್ಞೆ ಸಿದ್ಧಪಡಿಸಲಾಗಿದ್ದು, ಒಂದೆರಡು ದಿನಗಳಲ್ಲಿ ರಾಜ್ಯಪಾಲರಿಗೆ ಕಳುಹಿಸಲಾಗುವುದು ಎಂದು ತಿಳಿಸಿದರು. ಪ್ರತಿ ಜಿಲ್ಲಾ ಕಚೇರಿಯಲ್ಲಿ ಇಂತಹ ಕಿರುಕುಳ ಪ್ರಕರಣಗಳಿಗೆ ದೂರು ನೀಡಲು ಸಹಾಯವಾಣಿ ಆರಂಭಿಸಲಾಗಿದೆ. ಇಂತಹ ಪ್ರಕರಣಗಳು ನಿಮ್ಮ ಗಮನಕ್ಕೆ ಬಂದರೆ ಕೂಡಲೇ ಈ ಸಹಾಯವಾಣಿಗೆ ಸಂಪರ್ಕಿಸಿ, ಬಡವರಿಗೆ ನೆರವಾಗಬೇಕು ಎಂದು ಕಾಂಗ್ರೇಸ್ ಪಕ್ಷ ಹಾಗೂ ಇತರ ಪಕ್ಷಗಳ ಕಾರ್ಯಕರ್ತರಿಗೂ ಮನವಿ ಮಾಡುತ್ತೇನೆ. ಮುಖ್ಯಮಂತ್ರಿಗಳು ತಮ್ಮ ವಿಶ್ರಾಂತಿ ಬಳಿಕ ಸದ್ಯದಲ್ಲೇ ಪೊಲೀಸ್ ಅಧಿಕಾರಿಗಳು, ಆಯುಕ್ತರ ಜತೆ ಸಭೆ ನಡೆಸಲಿದ್ದಾರೆ. ನಂತರ ಜಿಲ್ಲಾಧಿಕಾರಿಗಳ ಜತೆ ಪ್ರತ್ಯೇಕ ಸಭೆ ನಡೆಸಲಿದ್ದಾರೆ ಎಂದು ತಿಳಿಸಿದ್ದಾರೆ.

ವಿತ್ತ ಸಚಿವೆ ರಾಜ್ಯಕ್ಕೆ ಕೊಟ್ಟಿರುವ ಕೊಡುಗೆಗಳ ಪಟ್ಟಿ ನೀಡಲಿ: ಕರ್ನಾಟಕ ದಿವಾಳಿಯಾಗಿದೆ ಎಂಬ ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರ ಹೇಳಿಕೆಗೆ ಪ್ರತಿಕ್ರಿಯಿಸುತ್ತಾ, ಕೇಂದ್ರ ಸರ್ಕಾರ ಎಷ್ಟು ಲಕ್ಷ ಕೋಟಿಗಟ್ಟಲೆ ಸಾಲ ಮಾಡಿದೆ ಎಂಬುದನ್ನು ಅರಿಯಬೇಕು. ನಮ್ಮ ರಾಜ್ಯ ಸರ್ಕಾರ ಅಷ್ಟು ದೊಡ್ಡ ಪ್ರಮಾಣದ ಸಾಲ ಮಾಡಿಲ್ಲ, ನಾವು ಈ ಗ್ಯಾರಂಟಿ ಯೋಜನೆ ಘೋಷಣೆ ಮಾಡಿದಾಗ ಪ್ರಧಾನಮಂತ್ರಿಗಳು ಕೂಡ ನಮ್ಮ ರಾಜ್ಯ ದಿವಾಳಿಯಾಗಲಿದೆ ಎಂದು ಹೇಳಿದ್ದರು. ನಂತರ ನಡೆದ ಎಲ್ಲಾ ರಾಜ್ಯಗಳ ಚುನಾವಣೆಯಲ್ಲಿ ಅವರು ಗ್ಯಾರಂಟಿ ಯೋಜನೆ ನಕಲು ಮಾಡಿ ಯೋಜನೆಗಳನ್ನು ಘೋಷಿಸಿದ್ದಾರೆ. ನಮ್ಮ ಸರ್ಕಾರ ಬೆಲೆ ಏರಿಕೆ ಹಾಗೂ ನಿರುದ್ಯೋಗ ಸಮಸ್ಯೆಯಿಂದ ಬಳಲಿದ್ದ ಜನಸಾಮಾನ್ಯರಿಗೆ ನೆರವಾಗಲು ಗ್ಯಾರಂಟಿ ಯೋಜನೆ ಘೋಷಣೆ ಮಾಡಿದೆಯೇ ಹೊರತು, ಮತಕ್ಕಾಗಿ ಅಲ್ಲ. ನಮ್ಮ ಸರ್ಕಾರದ ಆರ್ಥಿಕ ಪರಿಸ್ಥಿತಿ ಹಾಗೂ ದಿವಾಳಿ ವಿಚಾರ ಪಕ್ಕಕ್ಕಿರಲಿ. ಕೇಂದ್ರ ಸರ್ಕಾರದ ಬಜೆಟ್‌ನಲ್ಲಿ ಕರ್ನಾಟಕ ರಾಜ್ಯಕ್ಕೆ ಅವರು ಯಾವ ಕೊಡುಗೆ ನೀಡಿದ್ದಾರೆ ಎಂದು ಮೊದಲು ಪಟ್ಟಿ ನೀಡಲಿ ಎಂದು ತಿರುಗೇಟು ನೀಡಿದರು.ನಾಲಿಗೆಯಿಂದ ಒಂದು ಮಾತು ಬಂದರೆ ಅದನ್ನು ಉಳಿಸಿಕೊಂಡು, ಅದರಂತೆ ನಡೆಯಬೇಕು. ಇದನ್ನು ನೋಡಿದರೆ ನನಗೆ ನಾಚಿಕೆಯಾಗುತ್ತದೆ. ಅವರು ಮೊದಲು ತಮ್ಮ ಮಾತನ್ನು ಉಳಿಸಿಕೊಳ್ಳಲಿ ಎಂದು ತಿಳಿಸಿದರು.

ಮೈಕ್ರೋ ಫೈನಾನ್ಸ್ ಅಟ್ಟಹಾಸಕ್ಕೆ ಅಂಕುಶ

ಫೈನಾನ್ಸ್ ಕಿರುಕುಳಕ್ಕೆ ಐವರು ಸಾವು



ಕಿರುಕುಳ ತಡೆಗೆ ಹೊಸ ಮಸೂದೆ ಸುಗ್ರೀವಾಜ್ಞೆಗೆ ಸಿಎಂ ಒಪ್ಪಿಗೆ

ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಕಿರುಕುಳಕ್ಕೆ ಕಡಿವಾಣ ಹಾಕಲು, ಕರ್ನಾಟಕ ಮೈಕ್ರೋ ಫೈನಾನ್ಸ್ (ದಬ್ಬಾಳಿಕೆ ಮತ್ತು ಅಮಾನವೀಯ ಕ್ರಮಗಳ ನಿಯಂತ್ರಣ) ಮಸೂದೆಯನ್ನು ಸುಗ್ರೀವಾಜ್ಞೆ ಮೂಲಕ ಜಾರಿಗೆ ತರಲು ಸಿಎಂ ಸಿದ್ದರಾಮಯ್ಯ ಒಪ್ಪಿಗೆ ನೀಡಿದ್ದು, ರಾಜಭವನಕ್ಕೆ ಸರ್ಕಾರ ಸುಗ್ರೀವಾಜ್ಞೆ ಕಳುಹಿಸಿದೆ. ಸುಗ್ರೀವಾಜ್ಞೆಯ ಪ್ರಕಾರ, ತಪ್ಪಿತಸ್ಥರಿಗೆ 10 ವರ್ಷಗಳ ಕಾಲ ಶಿಕ್ಷೆ ವಿಧಿಸಲು ಅವಕಾಶವಿದೆ. ಅಲ್ಲದೇ 5 ಲಕ್ಷದವರೆಗೆ ದಂಡ ವಿಧಿಸಲು ಪ್ರಸ್ತಾಪವಿದೆ. ಇನ್ನು ಅನಧಿಕೃತವಾಗಿ ಸಾಲ ನೀಡಿದ್ದರೇ ಅದನ್ನು ಮನ್ನಾ ಮಾಡಲಾಗುವುದು. ನೋಂದಣಿ ರಹಿತ ಮೈಕ್ರೋ ಫೈನಾನ್ಸ್‌ಗಳ ಅಸಲು, ಬಡ್ಡಿ ಕೂಡ ಮನ್ನಾ ಆಗಲಿದೆ. ಖಾಸಗಿ ಬಡ್ಡಿದಾರರಿಗೂ ಕಡಿವಾಣ ಬೀಳಲಿದೆ.

ತಪ್ಪಿತಸ್ಥರಿಗೆ 10ವರ್ಷದವರೆಗೆ ಕಠಿಣ ಶಿಕ್ಷೆ, 5 ಲಕ್ಷದವರೆಗೆ ದಂಡ

ಮೈಕ್ರೋ ಫೈನಾನ್ಸ್ ಉಪಟಳ

ಮೈಕ್ರೋ ಫೈನಾನ್ಸ್ ನವರ ಉಪಟಳ ಜಾಸ್ತಿಯಾಗಿದ್ದು, ಅವರಲ್ಲಿ ಯಾರೇ ಆಗಲಿ ನಿಮ್ಮ ಮನೆ ಬಳಿಗೆ ಬಂದು ಕಿರುಕುಳ ನೀಡಿದರೆ ತಕ್ಷಣವೇ ನನಗೆ ದೂರವಾಣಿ ಕರೆ ಮಾಡಿ' ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಹೇಳಿದರು. 'ರೌಡಿಗಳನ್ನು ಕರೆದುಕೊಂಡು ಬಂದು ಗಲಾಟೆ ಮಾಡಿದರೆ ತಕ್ಷಣ ನನಗೆ ಕರೆ ಮಾಡಿ, ನಾನಿದ್ದೇನೆ. ನಿಮ್ಮ ಜೀವ ಬಹಳ ಮುಖ್ಯ. ಯಾವುದೇ ಕಾರಣಕ್ಕೂ ಜೀವ ತೆಗೆದುಕೊಳ್ಳುವ ಕೆಲಸ ಮಾಡಬೇಡಿ' ಎಂದು ಧೈರ್ಯ ಹೇಳಿದರು. ಬಡ್ಡಿ, ಚಕ್ರಬಡ್ಡಿ ವಿಧಿಸಿ ಜನರಿಗೆ ಹಿಂಸೆ ಕೊಡುತ್ತಿದ್ದಾರೆ. ಇದು ಅಮಾನವೀಯ. ಅಸಲು ತೀರುವುದೇ ಇಲ್ಲ. ಹಳ್ಳಿಗಳ ಯುವಕರು ಆನ್‌ಲೈನ್ ಗೇಮ್‌ಗಳ ಚಟಕ್ಕೆ ಸಿಕ್ಕಿಕೊಳ್ಳುತ್ತಿದ್ದಾರೆ. ಅಲ್ಲಿಯೂ ಸಾಲಕ್ಕೆ ಅವರು ಸಿಕ್ಕಿಕೊಂಡು ಕೊನೆಗೆ ಸಾವಿಗೆ ಶರಣಾಗುತ್ತಿದ್ದಾರೆ ಎಂದು ಸಚಿವರು ಕಳವಳ ವ್ಯಕ್ತಪಡಿಸಿದರು.

ಅಶೋಕ್ ಬಳಿ ಶಾಸ್ತ್ರ ಕೇಳಲು ಹೋಗುತ್ತೇನೆ

ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಅವರು ಸಿಎಂ ಬದಲಾವಣೆಯ ದಿನಾಂಕ ಘೋಷಣೆ ಮಾಡಿರುವ ಬಗ್ಗೆ ಕೇಳಿದಾಗ, ನನಗೂ ಜ್ಯೋತಿಷ್ಯ ಕೇಳುವ ಚಟ ಇದೆ. ಈಗ ಅಶೋಕ್ ಅವರು ಜ್ಯೋತಿಷ್ಯ ಹೇಳುವ ಬೋರ್ಡ್ ಹಾಕಿಕೊಂಡಿದ್ದಾರೆ. ಸಮಯ ಬಿಡುವು ಮಾಡಿಕೊಂಡು ನಾನು ಅವರ ಬಳಿ ಹೋಗಿ ಶಾಸ್ತ್ರ ಕೇಳುತ್ತೇನೆ ಎಂದು ಲೇವಡಿ ಮಾಡಿದರು.

ಮತ್ತೆ ರಾಜ್ಯಾಧ್ಯಕ್ಷನಾಗಿ ಪಕ್ಷ ಬಲಪಡಿಸ್ತೇನೆ : ವಿಜಯೇಂದ್ರ

• ಉದಯವಾಹಿನಿ, ಶಿವಮೊಗ್ಗ

ಒಂದು ವಾರದ ಬಳಿಕ ಎಲ್ಲಾವೂ ಸರಿಯಾಗಲಿದೆ. ಮತ್ತೆ ರಾಜ್ಯಾಧ್ಯಕ್ಷನಾಗಿ ಪಕ್ಷ ಬಲಪಡಿಸ್ತೇನೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ವಿಶ್ವಾಸ ವ್ಯಕ್ತಪಡಿಸಿದರು.

ಶಿವಮೊಗ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿಯಲ್ಲಿ ಆಂತರಿಕ ಪ್ರಜಾಪ್ರಭುತ್ವದ ವ್ಯವಸ್ಥೆ ಇದೆ. ಯಾವುದೇ ರಾಜಕೀಯ ಪಕ್ಷದಲ್ಲಿ ಈ ವ್ಯವಸ್ಥೆಯಿಲ್ಲ, ವ್ಯವಸ್ಥಿತವಾಗಿ ಸಂಘಟನೆ ಚುನಾವಣೆ ನಡೆಯುತ್ತದೆ ಎಂದರೆ ಅದು ಬಿಜೆಪಿಯಲ್ಲಿ ಮಾತ್ರ ಸಾಧ್ಯ. ಮಂಡಲ ಮಟ್ಟದಿಂದ ಹಿಡಿದು ಜಿಲ್ಲಾ ಮಟ್ಟ, ರಾಜ್ಯಾಧ್ಯಕ್ಷರ ಚುನಾವಣೆ ಮತ್ತು ರಾಷ್ಟ್ರೀಯ ಅಧ್ಯಕ್ಷರ ಚುನಾವಣೆ ಎಲ್ಲಾವೂ ಕೂಡ ವ್ಯವಸ್ಥಿತವಾಗಿ ನಡೆಯುತ್ತಿವೆ. ಕೇಂದ್ರದ ವರಿಷ್ಠರು ನಿರ್ಧಾರ ಮಾಡಿದಂತೆ ಎಲ್ಲಾವೂ ನಡೆಯುತ್ತಿದೆ ಎಂದು ಹೇಳಿದರು.ಯತ್ನಾಳ್ ಬಣದ ಕುರಿತು ಪ್ರತಿಕ್ರಿಯಿಸಿ, ಬಿಜೆಪಿಯ ಹಿರಿಯ ಮುಖಂಡ ಬಸನಗೌಡ ಪಾಟೀಲ್ ಯತ್ನಾಳ್ ಅವರ ನೇತೃತ್ವದ ಬಣ ರಾಜ್ಯಾಧ್ಯಕ್ಷರ ಹುದ್ದೆಗೆ ಸ್ಪರ್ಧಿಸುವ ತಯಾರಿ ನಡೆಸಿದೆ ಎಂದರು. ಇದೇ ವೇಳೆ ಪಕ್

ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

ಯಥೇಚ್ಛಸಿ ತಥಾ ಕುರು

ಯಥಾ ಇಚ್ಛಸಿ ತಥಾ ಕುರು = ಬಯಸಿದಂತೆ ಮಾಡು. ಭಗವದ್ಗೀತೆಯಲ್ಲಿ ಕೃಷ್ಣ ಅರ್ಜುನನಿಗೆ ಹೇಳಿದ ಮಾತು. ಕೌರವರೊಂದಿಗೆ ಯುದ್ಧ ಪಾಂಡವರ ತೀರ್ಮಾನ, ಕೃಷ್ಣನದ್ದಲ್ಲ. ಕೃಷ್ಣನನ್ನು ಸಾರಥಿಯನ್ನಾಗಿಸಿಕೊಂಡವ ಅರ್ಜುನ. ಯುದ್ಧಭೂಮಿಗೆ ಬಂದು ಎದುರಾಳಿಗಳನ್ನು ಕಂಡು ಹಿಂದಿನದನ್ನು ನೆನೆದು ಇವರೆಲ್ಲ ನನ್ನವರು, ಇವರೊಂದಿಗೆ ಯುದ್ಧ ಮಾಡಲಾರೆ ಎಂದು ಕೈ ಚೆಲ್ಲಿದ. ಈಗ ಕೃಷ್ಣ ಅನಿವಾರ್ಯವಾಗಿ ಅರ್ಜುನನಿಗೆ ತಿಳುವಳಿಕೆ ನೀಡಬೇಕಾಯಿತು. ಧರ್ಮ ತತ್ತ್ವಜ್ಞಾನ ಕರ್ತವ್ಯಗಳ ಹೊಣೆಗಾರಿಕೆ ಎಲ್ಲವನ್ನೂ ನಿರೂಪಿಸಿದ. **ಅಂತಿಮವಾಗಿ ಹದಿನೆಂಟನೆಯ ಅಧ್ಯಾಯದ ಮಾತಿದು:** ಇದುವರೆಗೆ ಅತಿರಹಸ್ಯವಾದ ಜ್ಞಾನ– ತಿಳುವಳಿಕೆಯನ್ನು ನಾ ನಿನಗೆ ಹೇಳಿದ್ದೇನೆ. ಇದನ್ನೆಲ್ಲ ಮೊದಲು ನೀನು ಸರಿಯಾಗಿ ತಿಳಿದು ನೋಡು. ಆ ಬಳಿಕ ನಿನಗೆ ಹೇಗೆ ತೋರುವುದೋ ಹಾಗೆ ಸರಿ ಎನಿಸಿದುದನ್ನು ಮಾಡು ಎಂದು. ಮಾಡಬೇಕಾದುದನ್ನು ಹಾಗೂ ಮಾಡಬಾರದ್ದನ್ನು ಎರಡನ್ನೂ ತಿಳಿಸಿದ. ಆದರೆ ಹೀಗೇ ಮಾಡೆಂದು ಆದೇಶಿಸಲಿಲ್ಲ. ಇದುವೇ ಹಿಂದು ಧರ್ಮದ ವಿಶಾಲತೆ – ವಿಶೇಷತೆ. ಧರ್ಮಸ್ಥಾಪಕ ಧರ್ಮಗುರು ಹೀಗೆ ಹೇಳಿದ್ದಾನಾದ್ದರಿಂದ ಹೀಗೆ ಮಾಡಲೇಬೇಕು ಎಂಬ ಅಂಧಾನುಕರಣೆ ಇಲ್ಲಿಲ್ಲ. ಸಂಶೋಧನೆ ಅಭಿವ್ಯಕ್ತಿ ವೈಚಾರಿಕ ಸ್ವಾತಂತ್ರ್ಯ ಇಲ್ಲಿದೆ. ಆದ್ದರಿಂದಲೇ ಇಲ್ಲಿ ಒಪ್ಪಲಾಗಿದೆ ಅನೇಕ ಅವತಾರ ಋಷಿ ಸಂತ ಗುರು ಸಮುದಾಯ. ಮೈದಳೆದಿವೆ ಅನೇಕ ಮತ ಪಂಥ ಸಂಪ್ರದಾಯ.

ಸರಕು ಸಾಗಣೆ ವಾಹನ ಡಿಕ್ಕಿ

• **ಉದಯವಾಹಿನಿ, ಬೆಂಗಳೂರು**

ಬ್ಯಾಡರಹಳ್ಳಿ ಪೊಲೀಸ್ ಠಾಣೆ ಬಳಿ ಬೈಕ್ ಮತ್ತು ಸರಕು ಸಾಗಣೆ ವಾಹನದ ನಡುವೆ ಸಂಭವಿಸಿದ ಅಪಘಾತದಲ್ಲಿ ಜಗದೀಶ್ (24) ಎಂಬುವರು ಮೃತಪಟ್ಟಿದ್ದು, ಇಬ್ಬರು ಗಾಯಗೊಂಡಿದ್ದಾರೆ. ಮಾಗಡಿ ಮುಖ್ಯ ರಸ್ತೆಯ ತುಂಗಾ ನಗರ ನಿವಾಸಿಯಾದ ಜಗದೀಶ್, ಸಹೋದ್ಯೋಗಿಗಳಾದ ರವಿ ಮತ್ತು ಸುನಿಲ್ ಎಂಬುವರ ಜತೆ ಮದುವೆ ಕಾರ್ಯಕ್ರಮಕ್ಕೆ ಹೋಗಿ ಬೈಕ್‌ನಲ್ಲಿಮನೆಗೆ ವಾಪಸ್ ಬರುತ್ತಿದ್ದಾಗ ಈ ಅಪಘಾತ ಸಂಭವಿಸಿದೆ. ಬೈಕ್ ಚಾಲನೆ ಮಾಡುತ್ತಿದ್ದ ಜಗದೀಶ್, ರಸ್ತೆ ತಿರುವಿನಲ್ಲಿ ಎದುರುಗಡೆಯಿಂದ ಬರುತ್ತಿದ್ದ ಸರಕು ಸಾಗಣೆ ವಾಹನಕ್ಕೆ ಬೈಕ್ ಗುದ್ದಿಸಿದ್ದಾರೆ. ಘಟನೆಯಲ್ಲಿ ತೀವ್ರವಾಗಿ ಗಾಯಗೊಂಡ ಅವರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಹಿಂಬದಿ ಸವಾರರಾದ ರವಿ ಮತ್ತು ಸುನಿಲ್ ಎಂಬುವರು ಗಾಯಗೊಂಡಿದ್ದು, ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಜಗದೀಶ್, ರವಿ ಮತ್ತು ಸುನಿಲ್, ಒಂದೇ ಬ್ಯಾಂಕ್‌ನಲ್ಲಿ ಕೆಲಸ ಮಾಡುತ್ತಿದ್ದರು. ಆ ಮೂವರು ಸುಂಕದಕಟ್ಟೆ ಬಳಿಯ ಕಲ್ಯಾಣ ಮಂಟಪದಲ್ಲಿ ನಡೆಯುತ್ತಿದ್ದ ಸಹೋದ್ಯೋಗಿಯ ಆರತಕ್ಷತೆಗೆ ಹೋಗಿದ್ದರು ಎಂದು ಪೊಲೀಸರು ಹೇಳಿದ್ದಾರೆ. ಕಾಮಾಕ್ಷಿಪಾಳ್ಯ ಸಂಚಾರ ಠಾಣೆಯಲ್ಲಿ ದೂರು ದಾಖಲಾಗಿದೆ.

ವಿವಿಯ ಜ್ಞಾನಭಾರತಿ ಹಾಸ್ಟೆಲ್‌ನಲ್ಲಿ ವಿದ್ಯಾರ್ಥಿನಿ ನೇಣಿಗೆ ಶರಣು

• **ಉದಯವಾಹಿನಿ, ಬೆಂಗಳೂರು**

ನಗರದ ಜ್ಞಾನಭಾರತಿ ಮಹಿಳಾ ವಿದ್ಯಾರ್ಥಿ ನಿಲಯದಲ್ಲಿ ವಿದ್ಯಾರ್ಥಿನಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ನಡೆದಿದೆ. ವಿದ್ಯಾರ್ಥಿನಿಯನ್ನು ಹೆಚ್‌ಡಿ ಕೋಟೆಯ ಹೆಬ್ಬಲಗುಪ್ಪೆ ಹಳ್ಳಿಯ ಪಾವನ ಹೆಚ್‌ಎನ್ (23) ಎಂದು ಗುರುತಿಸಲಾಗಿದೆ. ಮೃತ ವಿದ್ಯಾರ್ಥಿನಿ ಕನ್ನಡ ಅಧ್ಯಯನ ಕೇಂದ್ರದಲ್ಲಿ ದ್ವಿತೀಯ ವರ್ಷದ ಸ್ನಾತಕೋತ್ತರ ಪದವಿ ವ್ಯಾಸಂಗ ಮಾಡುತ್ತಿದ್ದಳು. ಸೋಮವಾರ ಮದ್ಯಾಹ್ನ ಹಾಸ್ಟೆಲ್‌ನಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದು, ಘಟನೆಗೆ ಕಾರಣ ತಿಳಿದುಬಂದಿಲ್ಲ. ಸದ್ಯ ಸ್ಥಳಕ್ಕೆ ಪೊಲೀಸರು ಆಗಮಿಸಿದ್ದು, ಪರಿಶೀಲನೆ ನಡೆಸುತ್ತಿದ್ದಾರೆ. ಜ್ಞಾನಭಾರತಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

ಫುಟ್‌ಪಾತ್ ಮೇಲೆ ವಾಹನ ಚಲಾಯಿಸಿದ್ರೆ ಡಿಎಲ್ ಅಮಾನತು

• **ಉದಯವಾಹಿನಿ, ಬೆಂಗಳೂರು**

ಫುಟ್‌ಪಾತ್ ಮೇಲೆ ವಾಹನ ಚಲಾಯಿಸುವವರಿಗೆ ಬಿಸಿ ಮುಟ್ಟಿಸಲು ಟ್ರಾಫಿಕ್ ಪೊಲೀಸರು ಮುಂದಾಗಿದ್ದಾರೆ. ಇನ್ಮುಂದೆ ಫುಟ್‌ಪಾತ್‌ನಲ್ಲಿ ರೈಡಿಂಗ್ ಮಾಡಿದರೆ ಡ್ರೈವಿಂಗ್ ಲೈಸೆನ್ಸ್ (ಡಿಎಲ್) ಅಮಾನತು ಮಾಡುವ ನಿರ್ಧಾರ ಕೈಗೊಂಡಿದ್ದಾರೆ. ಫುಟ್‌ಪಾತ್ ಮೇಲೆ ಬೈಕ್, ಕಾರು ಓಡಿಸುವ ಸವಾರರಿಗೆ ಸಂಚಾರ ವಿಭಾಗದ ಪೊಲೀಸರು ಎಚ್ಚರಿಕೆ ನೀಡಿದ್ದಾರೆ. ಪಾದಾಚಾರಿ ರಸ್ತೆಯಲ್ಲಿ ವಾಹನ ಚಲಾಯಿಸಿದರೆ ಡಿಎಲ್ ಅಮಾನತು ಮಾಡುವುದಾಗಿ ಎಚ್ಚರಿಸಿದ್ದಾರೆ. ಇದರ ಜೊತೆಗೆ ಕೇಸ್ ದಾಖಲಿಸಿ ಸೂಕ್ತ ದಂಡ ವಿಧಿಸಲಿದ್ದಾರೆ. ಫುಟ್‌ಪಾತ್ ರೈಡಿಂಗ್ ಬಗ್ಗೆ ಕಠಿಣ ಕ್ರಮ ಕೈಗೊಳ್ಳಲು ಪೊಲೀಸರ ನಿರ್ಧಾರಿಸಿದ್ದಾರೆ. ಪಾದಚಾರಿಗಳ ಬಳಕೆಗೆ ಫುಟ್‌ಪಾತ್ ಇರೋದು. ಅಲ್ಲಿ ವಾಹನ ಚಲಾಯಿಸುವಂತಿಲ್ಲ ಎಂದು ಸೂಚಿಸಿದ್ದಾರೆ. ಪಾದಚಾರಿಗಳು ಹೊರತುಪಡಿಸಿ ಬೇರೆ ಯಾರೇ ಬಳಸಿದರೂ ಕ್ರಮ ಆಗಲಿದೆ. ಪಾದಚಾರಿಗಳ ಸುಗಮ ಓಡಾಟಕ್ಕೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಪೊಲೀಸರು ಕಠಿಣ ನಿಯಮ ರೂಪಿಸಿದ್ದಾರೆ.

ಬಿರಿಯಾನಿ ಪಾರ್ಸೆಲ್‌ಗಾಗಿ 15 ನಿಮಿಷ ನಿಂತ ಬಸ್: ಬಿಎಂಟಿಸಿ ವಿರುದ್ಧ ಪ್ರಯಾಣಿಕರು ಗರಂ

• **ಉದಯವಾಹಿನಿ, ಬೆಂಗಳೂರು**

ಬಿರಿಯಾನಿ ಪಾರ್ಸೆಲ್ ತೆಗೆದುಕೊಳ್ಳಲು 10 ರಿಂದ 15 ನಿಮಿಷ ಬಸ್ ನಿಲ್ಲಿಸಿದ್ದಕ್ಕೆ ಬಿಎಂಟಿಸಿ ವಿರುದ್ಧ ಪ್ರಯಾಣಿಕರು ಗರಂ ಆಗಿದ್ದಾರೆ. ಬಿಎಂಟಿಸಿ ಸಿಬ್ಬಂದಿ ಒಂದಿಲ್ಲೊಂದು ಅಚಾತುರ್ಯಗಳನ್ನು ಮಾಡುತ್ತಿದ್ದಾರೆ. ಬಿಎಂಟಿಸಿ ಬಸ್ ಟ್ಯಾನರಿ ರಸ್ತೆಯಿಂದ ಮೆಜೆಸ್ಟಿಕ್ ಕಡೆಗೆ ಬರುತ್ತಿತ್ತು. ಈ ವೇಳೆ ಟ್ಯಾನರಿ ರಸ್ತೆಯಲ್ಲಿ 10–15 ನಿಮಿಷ ಬಸ್ ನಿಲ್ಲಿಸಿ ಬಿರಿಯಾನಿ ಪಾರ್ಸೆಲ್ ತೆಗೆದುಕೊಂಡಿದ್ದಾರೆ. ಇದನ್ನು ಕಂಡ ಪ್ರಯಾಣಿಕರು ಬಿಎಂಟಿಸಿ ವಿರುದ್ಧ ಎಕ್ಸ್ ಖಾತೆಯಲ್ಲಿ ವಿಡಿಯೋ ಹಂಚಿಕೊಂಡು ದೂರಿದ್ದಾರೆ. ಇದು ಕೊನೆಯ ಬಸ್, ಮೆಜೆಸ್ಟಿಕ್ ಕಡೆಗೆ ಬಂದು ಬೇರೆ ಕಡೆಗೆ ಹೋಗಬೇಕು. ಈ ರೀತಿ ಬಿರಿಯನಿಗಾಗಿ ಬಸ್ ನಿಲ್ಲಿಸಿಕೊಂಡು ಸಮಸ್ಯೆ ಮಾಡುತ್ತಿದ್ದಾರೆ ಎಂದು ಪೋಸ್ಟ್‌ನಲ್ಲಿ ಬೇಸರ ವ್ಯಕ್ತಪಡಿಸಿದ್ದಾರೆ. ಕೆಲ ದಿನಗಳ ಹಿಂದೆ ಹೆಬ್ಬಾಳ ಫ್ಲೈಓವರ್ ಬಳಿ ಚಾಲಕ ಮತ್ತು ನಿರ್ವಾಹಕ ಪರಸ್ಪರ ಕಿತ್ತಾಡಿದ್ದರು. ಕಿತ್ತಾಟ ಜೋರಾಗುತ್ತಿದ್ದಂತೆ ಪ್ರಯಾಣಿಕರು ಬೇರೆ ಬಸ್ಸು ಹತ್ತಿ ಪ್ರಯಾಣಿಸಿದ್ದರು.

ಪಿಎಸ್‌ಐ ನೇಮಕಾತಿ ಅಕ್ರಮ

• **ಉದಯವಾಹಿನಿ, ಬೆಂಗಳೂರು**

ರಾಜ್ಯದಲ್ಲಿ ಸಂಚಲನ ಸೃಷ್ಟಿ ಮಾಡಿದ್ದ ಪ್ರಕರಣದಲ್ಲಿ ರಾಜ್ಯದ ಮಾಜಿ ಉಪಮುಖ್ಯಮಂತ್ರಿ ಅಶ್ವಥ್ ನಾರಾಯಣ ಅವರನ್ನು ವಿಶೇಷ ತನಿಖಾ ತಂಡದ ಪೊಲೀಸರು ವಿಚಾರಣೆ ನಡೆಸಿದ್ದಾರೆ. ನೇಮಕಾತಿ ಹಗರಣದಲ್ಲಿ ಮಾಗಡಿಮೂಲದವರು ಅತಿ ಹೆಚ್ಚಾಗಿ ಮತ್ತು ಸಂಬಂಧಿಕರು ಆಯ್ಕೆ ಆಗಿದ್ದಾರೆ. ಇದನ್ನೆಲ್ಲಾ ಅಶ್ವಥ್ ನಾರಾಯಣ ಮಾಡಿಸಿದ್ದಾರೆ ಎಂದು ಕಾಂಗ್ರೇಸ್ ಆರೋಪ ಮಾಡಿತ್ತು. ಕಾಂಗ್ರೇಸ್ ಸರ್ಕಾರ ಪಿಎಸ್‌ಐ ಹಗರಣದ ಮರುತನಿಖೆಗೆ ಆದೇಶಿಸಿತ್ತು. ಈ ಬಗ್ಗೆ ತನಿಖೆ ನಡೆಸುತ್ತಿರುವ ಎಸ್‌ಐಟಿ ಅಶ್ವಥ್ ನಾರಾಯಣ ಅವರಿಗೆ ನೋಟಿಸ್ ನೀಡಿ ವಿಚಾರಣೆ ನಡೆಸಿದೆ. ವಿಚಾರಣೆಗೆ ಹಾಜರಾದ ಅಶ್ವಥ್ ನಾರಾಯಣ ಇದಕ್ಕೂ ನನಗೂ ಯಾವುದೇ ಸಂಬಂಧ ಇಲ್ಲ, ಇದೊಂದು ರಾಜಕೀಯ ಪ್ರೇರಿತ ಎಂದು ಹೇಳಿಕೆ ನೀಡಿದ್ದಾರೆ.

ಪತ್ರಕರ್ತರಿಗೆ ಆದ್ಯತೆ ಮೇರೆಗೆ ಸರ್ಕಾರದಿಂದ ನಿವೇಶನ

ಡಿಸಿಎಂ ಡಿ.ಕೆ.ಶಿವಕುಮಾರ್ ಹೇಳಿಕೆ, 'ನಮ್ಮ ಸರ್ಕಾರ ಪತ್ರಕರ್ತರಿಗೆ ನೀಡಿರುವ ಯೋಜನೆಗಳ ಬಗ್ಗೆ ಈಗಾಗಲೇ ಪ್ರಸ್ತಾಪ

• **ಉದಯವಾಹಿನಿ, ಬೆಂಗಳೂರು**

ಸರ್ಕಾರದ ವಿವಿಧ ಯೋಜನೆಗಳ ಮೂಲಕ ಪತ್ರಕರ್ತರಿಗೆ ಆದ್ಯತೆ ಮೇರೆಗೆ ನಿವೇಶನ ಹಂಚುವ ಕಾರ್ಯಕ್ರಮ ರೂಪಿಸಲಾಗುವುದು. ಈ ಬಗ್ಗೆ ಚರ್ಚಿಸಿ ಶೀಘ್ರದಲ್ಲೇ ಅಧಿಕೃತ ಘೋಷಣೆ ಮಾಡಲಾಗುವುದು' ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

'ನಮ್ಮ ಸರ್ಕಾರ ಪತ್ರಕರ್ತರಿಗೆ ನೀಡಿರುವ ಯೋಜನೆಗಳ ಬಗ್ಗೆ ಈಗಾಗಲೇ ಪ್ರಸ್ತಾಪ ಮಾಡಲಾಗಿದೆ. ಗ್ರಾಮೀಣ ಪತ್ರಕರ್ತರಿಗೆ ಬಸ್ ಪಾಸ್ ವಿತರಣೆ ಮಾಡಲಾಗಿದೆ. ಪತ್ರಕರ್ತರಿಗೆ ಆರೋಗ್ಯ ವಿಮೆ ನೀಡಲು ಚರ್ಚೆ ನಡೆಯುತ್ತಿದೆ.

ಗ್ರಾಮೀಣ ಹಾಗೂ ನಗರ ಭಾಗದ ಪತ್ರಕರ್ತರಿಗೆ ಆದ್ಯತೆ ಮೇರೆಗೆ ನಿವೇಶನ ನೀಡುವ ಬಗ್ಗೆ ಆಲೋಚನೆ ಮಾಡಲಾಗುತ್ತಿದೆ. ಪತ್ರಕರ್ತರು ಗೌರವಯುತವಾಗಿ ಬದುಕಲು ಈ ಕ್ರಮ ಕೈಗೊಳ್ಳಲಾಗುವುದು. ನಿವೇಶನ ಹಂಚಿಕೆ ಸಂದರ್ಭದಲ್ಲಿ ಬೇರೆಯವರಿಗೆ ನೀಡುವಂತೆ ಮಾಧ್ಯಮದವರಿಗೂ ಆದ್ಯತೆ ನೀಡಲು ಚರ್ಚೆ ಮಾಡುತ್ತಿದ್ದೇವೆ. ಮುಂದಿನ ದಿನಗಳಲ್ಲಿ ಇದನ್ನು ಘೋಷಣೆ ಮಾಡುತ್ತೇವೆ. ಬೆಂಗಳೂರು ನಗರಾಭಿವೃದ್ಧಿ ಸಚಿವನಾಗಿ, ವಿವಿಧ ಯೋಜನಾ ಪ್ರಾಧಿಕಾರದ ಜವಾಬ್ದಾರಿ ವಹಿಸಿಕೊಂಡವನಾಗಿ ನಾನು ಈ ಭರವಸೆ ನೀಡುತ್ತಿದ್ದೇನೆ' ಎಂದು ಕರ್ನಾಟಕ ಮಾಧ್ಯಮ ಅಕಾಡೆಮಿ 2023 ಮತ್ತು 2024ನೇ ಸಾಲಿನ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಭಾವಹಿಸಿ ಮಾತನಾಡಿದರು. 'ನಾನು ಕೆಲವು ವರ್ಷಗಳ ಹಿಂದೆ ತಮಿಳುನಾಡಿನ ರಾಜ್ಯಪಾಲರನ್ನು ಭೇಟಿ ಮಾಡಲು ಹೋದಾಗ ಅವರು ತಮಿಳುನಾಡಿನ ಮಾಧ್ಯಮಗಳ ಸ್ನೇಹಿತರ ಬಗ್ಗೆ ನನ್ನ ಜತೆ ಚರ್ಚೆ ಮಾಡಿದ್ದರು. ಜಯಲಲಿತಾ ಅವರು ಮುಖ್ಯಮಂತ್ರಿ ಆಗಿದ್ದಾಗ ಅವರು



ಮೂರು ತಿಂಗಳ ಕಾಲ ಊಟಿ, ಕೊಡೈಕೆನಾಲ್‌ಗೆ ಹೋಗಿದ್ದರು. ಆಗ ಸ್ವತಃ ರಾಜ್ಯಪಾಲರೇ ಇದನ್ನು ಪ್ರಶ್ನಿಸಿ ಮಾಧ್ಯಮಗಳಲ್ಲಿ ಬರೆಯಿರಿ ಎಂದು ಹೇಳಿದರೂ ಮಾಧ್ಯಮಗಳು ಜಯಲಲಿತಾ ಅವರನ್ನು ಪ್ರಶ್ನೆ ಮಾಡಿರಲಿಲ್ಲವಂತೆ. ಕರ್ನಾಟಕದಲ್ಲಿ ಮಾಧ್ಯಮಗಳಿಗೆ ಇರುವಷ್ಟು ಸ್ವಾತಂತ್ರ್ಯ ದೇಶದ ಬೇರೆ ಯಾವುದೇ ರಾಜ್ಯಗಳಲ್ಲಿ ಇಲ್ಲ. ದಿನಬೆಳಗಾದರೆ ನೀವು ನಮಗೆ ಹೊಡೆಯುತ್ತಲೇ ಇರುತ್ತೀರಿ, ಟೀಕಿಸಿ ನಮ್ಮನ್ನು ಹಳ್ಳಕ್ಕೆ ಹಾಕುತ್ತಲೇ ಇರುತ್ತೀರಿ, ನಿಮಗೆ ಸಂತೋಷವಾದರೆ ನಮ್ಮನ್ನು ಮೇಲಕ್ಕೆ ಏರಿಸುತ್ತೀರಿ. ನಿಮ್ಮನ್ನು ಬಿಟ್ಟು ನಾವು ಬದುಕಲು ಸಾಧ್ಯವಿಲ್ಲ. ಪ್ರಜಾಪ್ರಭುತ್ವವ್ಯವಸ್ಥೆಯಲ್ಲಿ ಮಾಧ್ಯಮ ನಾಲ್ಕನೇ ಅಂಗ. ಸರ್ಕಾರ, ಅಧಿಕಾರಿಗಳು, ನ್ಯಾಯಾಲಯ ತಪ್ಪು ಮಾಡಿದರೆ ತಿದ್ದುವ ಕೆಲಸ ಮಾಡುವುದು ಮಾಧ್ಯಮ. ಸಂವಿಧಾನ ಜಾರಿಯಾದಾಗಿನಿಂದಲೇ ನಮ್ಮನ್ನು ತಿದ್ದುವ, ಮಾರ್ಗದರ್ಶನ ಹಕ್ಕನ್ನು ನಿಮಗೆ ನೀಡಲಾಗಿದೆ' ಎಂದರು.

ಈ ಹಿಂದಿನ ಸರ್ಕಾರ ಪ್ರತಿಷ್ಠಿತ ಟಿಎಸ್‌ಆರ್ ಪ್ರಶಸ್ತಿ, ಮೊಹರೆ ಹನುಮಂತರಾಯ ಪ್ರಶಸ್ತಿ, ಪರಿಸರ ಪತ್ರಿಕಾ ಪರಿಷತ್ ನೀಡುವ ಪ್ರಶಸ್ತಿಯನ್ನು ಅನೇಕ ವರ್ಷಗಳಿಂದ ನೀಡಿಲ್ಲ. ಅವರನ್ನು ಟೀಕಿಸಿ ಯಾವುದೇ ಪ್ರಯೋಜನವಿಲ್ಲ. ನಮ್ಮ ಸರ್ಕಾರ ಮತ್ತೆ ಇದಕ್ಕೆ ಜೀವ ನೀಡಿದೆ. ರಘುರಾಮ್ ಶೆಟ್ಟಿ ಅವರ ಹೆಸರಿನಲ್ಲಿ ಪ್ರಶಸ್ತಿ ನೀಡಬೇಕು ಎಂಬ ಬೇಡಿಕೆ ಬಗ್ಗೆ ಚರ್ಚೆ ನಡೆಯುತ್ತಿದೆ. ಬೆಲೆ ಏರಿಕೆ ಹಿನ್ನೆಲೆಯಲ್ಲಿ ಪ್ರಶಸ್ತಿ ಮೊತ್ತವನ್ನು ಹೆಚ್ಚಳ ಮಾಡಲು ಸರ್ಕಾರ ತೀರ್ಮಾನಿಸಿದೆ ಎಂದು ಹೇಳಿದರು.

ಏಕೈಕ ಗುರಿ ಎಂಬ ಮಹಾತ್ಮಾ ಗಾಂಧೀಜಿ ಅವರ ಹೇಳಿಕೆ

'ನೀವು ಸತ್ಯವನ್ನು ಬರೆಯಬಹುದು, ಸತ್ಯವನ್ನು ನುಡಿಯಬಹುದು. ಸತ್ಯಕ್ಕೆ ಗೌರವಿಸುವುದು ಪತ್ರಕರ್ತರು ಹಾಗೂ ರಾಜಕಾರಣಿಗಳ ಕರ್ತವ್ಯ. 'ಜನಸೇವೆ ಮತ್ತು ದೇಶಸೇವೆ ಪತ್ರಿಕೋದ್ಯಮದ ಏಕೈಕ ಗುರಿ ಎಂಬ ಮಹಾತ್ಮಾ ಗಾಂಧೀಜಿ ಅವರ ಹೇಳಿಕೆಯನ್ನು ಅಕಾಡೆಮಿಯ ಅಧ್ಯಕ್ಷರು ತಿಳಿಸಿದರು. ನಮ್ಮ ಸರ್ಕಾರ ಕೂಡ ಮಹಾತ್ಮಾ ಗಾಂಧೀಜಿ ಅವರು ಸ್ವಾತಂತ್ರ್ಯ ಹೋರಾಟದ ನೇತೃತ್ವ ವಹಿಸಿದ ಬೆಳಗಾವಿ ಅಧಿವೇಶನದ ಶತಮಾನೋತ್ಸವ ಕಾರ್ಯಕ್ರಮವನ್ನು ನಡೆಸಿದ್ದೇವೆ. ಇಂದಿನ ಕಾರ್ಯಕ್ರಮದಲ್ಲಿ ಪತ್ರಕರ್ತರ ಜತೆಗೆ ಅವರ ಕುಟುಂಬದವರನ್ನು ಭೇಟಿ ಮಾಡುತ್ತಿರುವುದು ಸಂತೋಷದ ವಿಚಾರ.'

ಸಿಗರೇಟ್ ನೀಡದ್ದಕ್ಕೆ ಬೇಕರಿ ಮಾಲೀಕನ ಮೇಲೆಯೇ ಹಲ್ಲೆ

• **ಉದಯವಾಹಿನಿ, ಬೆಂಗಳೂರು**

ರಾತ್ರಿ ವೇಳೆ ಬಂದು ಟೀ, ಸಿಗರೇಟು ಫ್ರೀಯಾಗಿ ನೀಡುವಂತೆ ಗಲಾಟೆ ಮಾಡಿ ಹಲ್ಲೆ ನಡೆಸಿರುವ ಘಟನೆ ಬೆಂಗಳೂರು ಉತ್ತರ ತಾಲೂಕಿನ ಚಿಕ್ಕಬಿದರಕಲ್ಲು ಗ್ರಾಮದ ರಾಘವೇಂದ್ರ ಬೇಕರಿಯಲ್ಲಿ ನಡೆದಿದೆ.

ಬೇಕರಿ ಮಾಲೀಕ ಮಂಜಯ್ಯ ಶೆಟ್ಟಿ ಹಲ್ಲೆಗೊಳಗಾಗಿದ್ದಾರೆ. ಭಾನುವಾರ ರಾತ್ರಿ 9:20ರ ಸುಮಾರಿಗೆ ಬೇಕರಿ ಮುಚ್ಚುವ ಸಮಯಕ್ಕೆ ರೌಡಿಗಳ ಗುಂಪೊಂದು ಬಂದಿದೆ. ಬೇಕರಿ ಬಳಿ ಬಂದು ಟೀ, ಸಿಗರೇಟು ಇನ್ನಿತರ ವಸ್ತುಗಳನ್ನ ಫ್ರೀಯಾಗಿ ನೀಡುವಂತೆ ಗಲಾಟೆ ಮಾಡಿ, ಹಲ್ಲೆ ನಡೆಸಿ ಪರಾರಿಯಾಗಿದ್ದಾರೆ. ಹಲ್ಲೆ ಮಾಡುವ ದೃಶ್ಯ ಬೇಕರಿಯ ಸಿಸಿಟಿವಿಯಲ್ಲಿ ಸೆರೆಯಾಗಿದ್ದು, ಹಲ್ಲೆಗೊಳಗಾದ ಬೇಕರಿ ಮಾಲೀಕ ಮಾದನಾಯಕನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದು, ಸದ್ಯ ನೆಲಮಂಗಲ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಇನ್ನೂ ಪದೇ ಪದೇ ಬೆಂಗಳೂರು ನಗರ ಹಾಗೂ ಹೊರವಲಯದಲ್ಲಿ ಕಾಂಡಿಮೆಟ್ಸ್ ಅಂಗಡಿಗಳಿಗೆ ನುಗ್ಗಿ ದಾಂಧಲೆ ನಡೆಸುವ ಪುಡಿ ರೌಡಿಗಳ ಅಟ್ಟಹಾಸ ಹೆಚ್ಚಾಗುತ್ತಿದೆ.

ಆದರೆ ಪೊಲೀಸರು ಸೂಕ್ತ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಆಗ್ರಹಿಸಿದ್ದಾರೆ. ಈ ಪ್ರಕರಣದಲ್ಲಿ ಅಂಗಡಿ ಪಕ್ಕದ ರಸ್ತೆಯ ಆನಂದ್ ಹಾಗೂ ಇನ್ನಿತರರು ಹಲ್ಲೆ ನಡೆಸಿದ್ದು, ಖಂಡನೀಯ. ಕೂಡಲೇ ಮಾದನಾಯಕನಹಳ್ಳಿ ಪೊಲೀಸರು ಆರೋಪಿಗಳನ್ನ ಬಂಧಿಸಿ ಸೂಕ್ತ ಕ್ರಮ ಕೈಗೊಳ್ಳಲು ಕಾರ್ಮಿಕ ಸಂಘಗಳ ಮುಖ್ಯಸ್ಥರು ಆಗ್ರಹಿಸಿದ್ದಾರೆ.

ಫೈನಾನ್ಸ್ ಕಿರುಕುಳ ತಡೆಯ ಸುಗ್ರೀವಾಜ್ಞೆ ರಾಜ್ಯಪಾಲರಿಗೆ ರವಾನೆ

• **ಉದಯವಾಹಿನಿ, ಬೆಂಗಳೂರು**

ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಮೈಕ್ರೋ ಫೈನಾನ್ಸ್ ಕಿರುಕುಳ ತಡೆಗೆ ಸುಗ್ರೀವಾಜ್ಞೆನೆ ಮೂಲಕ ಮಸೂದೆ ತರಲು ಒಪ್ಪಿಗೆ ಸೂಚಿಸಲಾಗಿತ್ತು. ಈ ಸುಗ್ರೀವಾಜ್ಞೆಯಲ್ಲಿ ಕೆಲ ಬದಲಾವಣೆ ಮಾಡಿದ ನಂತ್ರ ರಾಜ್ಯ ಸರ್ಕಾರ ಡ್ರಾಫ್ಟ್ ರಾಜ್ಯಪಾಲರಿಗೆ ಸಲ್ಲಿಸಲಾಗಿದೆ. ಇನ್ನೇನಿದ್ದರೂ ಅಂಕಿತ ಮಾತ್ರ ಬಾಕಿ ಉಳಿದಂತೆ ಆಗಿದೆ. ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಕಂಪನಿಗಳು ಜನರಿಗೆ ಕಿರುಕುಳ ನೀಡುವುದನ್ನು ತಪ್ಪಿಸಲು ಸುಗ್ರೀವಾಜ್ಞೆಯನ್ನು ಜಾರಿಗೆ ತರುವಂತ ನಿರ್ಧಾರವನ್ನು ಸರ್ಕಾರ ಮಾಡಿತ್ತು ಅದರಂತೆ ಸಂಪುಟ ಸಭೆಯಲ್

ಜೀವನದಿ ಕಾವೇರಿಯ ಒಡಲು ಸೇರುತ್ತಿದೆ ತ್ಯಾಜ್ಯ ನೀರು

ನಗರಸಭೆಯೊಂದು ಅದರ ಉಪನದಿಗೆ ತ್ಯಾಜ್ಯದ ನೀರು ಸೇರಿಸುತ್ತಿದೆ ಎಂಬ ಆರೋಪ

• ಉದಯವಾಹಿನಿ, ಮಡಿಕೇರಿ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಲಕಾವೇರಿಯ ಕಾವೇರಿ ಉಗಮ ಸ್ಥಾನ ಬ್ರಹ್ಮಕುಂಡಿಗೆಗೆ ಶುಕ್ರವಾರ ಪೂಜೆ ಸಲ್ಲಿಸುವ ಮೂಲಕ ಕ್ಷೇತ್ರಕ್ಕೆ ಭೇಟಿ ನೀಡಿದ ಕೆಲವೇ ಕೆಲವು ಬೆರಳೆಣಿಕೆಯಷ್ಟು ಮುಖ್ಯಮಂತ್ರಿಗಳ ಸಾಲಿನಲ್ಲಿ ಸೇರ್ಪಡೆಯಾದರು. ಆದರೆ, ಕಾವೇರಿ ನದಿ ಸ್ವಚ್ಛತೆ ಕುರಿತು ಸ್ಪಷ್ಟವಾದ, ನಿಖರವಾದ ಯೋಜನೆಯೊಂದನ್ನು ಪ್ರಕಟಿಸಿದ್ದರೆ,

ಕಾವೇರಿ ನದಿ ಸ್ವಚ್ಛತೆಗಾಗಿ ಯೋಜನೆ ರೂಪಿಸಿದ ಮೊದಲ ಮುಖ್ಯಮಂತ್ರಿ ಎನಿಸುತ್ತಿದ್ದರು. ಆದರೆ, ಅಂತಹ ಒಂದು ಸುವರ್ಣ ಅವಕಾಶವನ್ನು ಅವರು ತಪ್ಪಿಸಿಕೊಂಡರು ಎಂಬುದು ಜಿಲ್ಲೆಯ ಪರಿಸರವಾದಿಗಳ ಅಭಿಪ್ರಾಯ. ಭಾಗಮಂಡಲದಲ್ಲಿ ಪತ್ರಕರ್ತರು ಕಾವೇರಿ ನದಿ ಸ್ವಚ್ಛತೆ ಕುರಿತು ಕೇಳಿದ ಪ್ರಶ್ನೆಗೆ ಅವರು, 'ತಜ್ಞರ ಸಮಿತಿಯ ವರದಿ ಇನ್ನೂ ಬಂದಿಲ್ಲ. ಬಂದ ನಂತರ ಕ್ರಮ ಕೈಗೊಳ್ಳಲಾಗುವುದು' ಎಂದು ನದಿ ಸ್ವಚ್ಛತೆಯಂತಹ ಗಂಭೀರವಾದ ವಿಚಾರಕ್ಕೆ ಪ್ರತಿಕ್ರಿಯಿಸಿದರು. ಆದರೆ, ತಜ್ಞರ ಸಮಿತಿಯ ಕಾಲಮಿತಿ ಏನು? ಯಾವಾಗ ವರದಿ ಬರಬಹುದು? ವರದಿ ಬರುವ ಮುನ್ನ ಕಾವೇರಿ ಹಾಗೂ ಅದರ ಉಪನದಿಗಳಿಗೆ ಸೇರುತ್ತಿರುವ ತ್ಯಾಜ್ಯದ ನೀರನ್ನು ನಿಯಂತ್ರಿಸುವ ಯೋಜನೆಯನ್ನು ಪ್ರಕಟಿಸಿಬಹುದಿತ್ತು. ಕಾವೇರಿ ನದಿ ಮೂಲದಲ್ಲಿ ಪವಿತ್ರವಾಗಿ ಹುಟ್ಟಿ, ಹರಿಯುತ್ತದೆ. ಆದರೆ, ದುರಂತ ಎಂದರೆ ಕೊಡಗಿನಲ್ಲಿಯೇ ನದಿಯ ನೀರು ಮಲಿನಗೊಳ್ಳಲು ಆರಂಭಿಸುತ್ತದೆ. ಜಿಲ್ಲೆಯ ಸುಮಾರು 22 ಗ್ರಾಮ ಪಂಚಾಯಿತಿಗಳು ಹಾಗೂ ಪುರಸಭೆ ನೇರವಾಗಿಯೇ ನದಿಗೆ ತಾಜ್ಯದ ನೀರು ಸೇರಿಸುತ್ತಿದೆ. ನಗರಸಭೆಯೊಂದು ಅದರ ಉಪನದಿಗೆ ತ್ಯಾಜ್ಯದ ನೀರು ಸೇರಿಸುತ್ತಿದೆ ಎಂಬ ಆರೋಪ ಇದೆ. ನೆಲ್ಯಹುದಿಕೇರಿ ಪಟ್ಟಣದ ಕೆಲ ಹೋಟೆಲ್, ವಸತಿಗೃಹ ಸೇರಿದಂತೆ ಮನೆಗಳ ಶೌಚದ ನೀರು ಪ್ರತಿದಿನ ಕಾವೇರಿ ಸೇತುವೆಯ ಕೆಲಭಾಗದಲ್ಲಿ ಹರಿದು, ನದಿ ಸೇರುತ್ತಿದೆ. ಪಟ್ಟಣದ ಹಲವು ಮನೆಗಳ ಶೌಚದ ನೀರು, ಪಟ್ಟಣದ ಅಂಗಡಿಗಳ ತ್ಯಾಜ್ಯ ಸೇರಿದಂತೆ ವಿವಿಧ ತ್ಯಾಜ್ಯದ ನೀರು ನದಿಗೆ ಸೇರುತ್ತಿದ್ದು, ನೀರಿನ ಬಣ್ಣವೇ ಬದಲಾಗಿದೆ. ನೆಲಹುದಿಕೇರಿಯ ಎಂ.ಜಿ. ಕಾಲೊನಿಯ ತ್ಯಾಜ್ಯ ನೀರು ಸಮೀಪದ ಬೆಳೆಗಾರ ಮಾನಸ್ ಎಂಬವರ ಕಾಫಿ ತೋಟದ ಮೂಲಕ ಹರಿದು ನದಿ ಸೇರುತ್ತಿದೆ. ಇದಲ್ಲದೇ ನದಿ ದಡದ ಕೆಲ ಮನೆಗಳ ತ್ಯಾಜ್ಯವನ್ನು ನೇರವಾಗಿ ಕಾವೇರಿಗೆ ಹರಿಬಿಡಲಾಗುತ್ತಿದೆ. ಸಿದ್ದಾಪುರ ಭಾಗದಿಂದಲೂ ತ್ಯಾಜ್ಯದ ನೀರನ್ನು ನದಿಗೆ ಬಿಡಲಾಗುತ್ತಿದ್ದು, ಕಾವೇರಿ ನದಿಗೆ ಸೇರುವ ಸಣ್ಣ ಉಪನದಿಗಳಿಗೂ ಕಸ ಹಾಗೂ ತ್ಯಾಜ್ಯವನ್ನು ಎಸೆಯಲಾಗುತ್ತಿದೆ. ಸಿದ್ದಾಪುರದ ಘಟದಳ ಸಮೀಪದ ತೋಡಿನಲ್ಲೂ ಮನೆಗಳ ತ್ಯಾಜ್ಯ ಸೇರಿದಂತೆ ಮಾಂಸದ ತ್ಯಾಜ್ಯವನ್ನು ಹಾಕಲಾಗುತ್ತಿದೆ. ಸಿದ್ದಾಪುರ ವ್ಯಾಪ್ತಿಯಲ್ಲಿ ಜೀವನದಿ ಕಾವೇರಿ ಕಲುಷಿತವಾಗುತ್ತಿದ್ದರೂ, ಸಿದ್ದಾಪುರ ಹಾಗೂ ನೆಲ್ಯಹುದಿಕೇರಿ ಗ್ರಾಮ ಪಂಚಾಯಿತಿ ನಿರ್ಲಕ್ಷ್ಯ ವಹಿಸುತ್ತಿದೆ. ಪಟ್ಟಣದ ಚರಂಡಿಗಳ ಮೂಲಕ ಜನವಸತಿ ಪ್ರದೇಶದಿಂದ ಕಾವೇರಿ ಒಡಲು ಸೇರುತ್ತಿರುವ ತ್ಯಾಜ್ಯವನ್ನು ತಡೆಯುವಲ್ಲಿ ವಿಫಲವಾಗಿದೆ. ಈ ಹಿಂದೆ ನೆಲಹುದಿಕೇರಿ ಗ್ರಾಮ ಪಂಚಾಯಿತಿಗೆ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ನೋಟಿಸ್ ನೀಡಲಾಗಿತ್ತು. ವೇಳೆ ಗ್ರಾಮದಲ್ಲಿ ಇಂಗು ಗುಂಡಿಗಳನ್ನು ನಿರ್ಮಿಸಲಾಗುವುದು ಎಂದು ತಿಳಿಸಿತು. ಆದರೆ, ಈವರೆಗೂ ಇಂಗುಗುಂಡಿಗಳು ನಿರ್ಮಾಣವಾಗಿರುವುದು ಬೆರಳೆಣಿಕೆಯಷ್ಟು ಮಾತ್ರ. ಸಿದ್ದಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲೂ ಇಂಗುಗುಂಡಿಗಳ ಕೊರತೆಯಿದ್ದು, ಗ್ರಾಮಾಡಳಿತ ತ್ಯಾಜ್ಯವನ್ನು ತಡೆಯುವಲ್ಲಿ ವಿಫಲವಾಗಿದೆ. ಶೌಚದ ನೀರನ್ನು ನದಿಗೆ ಹರಿಬಿಡುವವರಿಗೆ ಕನಿಷ್ಠ ನೋಟಿಸ್ ನೀಡಲು ಕೂಡ ಗ್ರಾಮ ಪಂಚಾಯಿತಿಗಳಿಗೆ ಸಾಧ್ಯವಾಗಿಲ್ಲ.

ಪಟ್ಟಣದ ಚರಂಡಿ ನೀರು ನದಿಗೆ ಹರಿಯುತ್ತಿದ್ದು, ಕ್ರಮ

ಜೀವನದಿ ಕಾವೇರಿ ತವರಿನಲ್ಲೇ ಕಲುಷಿತಗೊಳ್ಳುತ್ತಿದ್ದು, ನದಿ ದಡದ ಪಟ್ಟಣ ಹಾಗೂ ಮನೆಗಳ ತ್ಯಾಜ್ಯ ಕಾವೇರಿ ಒಡಲು ಸೇರುತ್ತಿದೆ. ಸಿದ್ದಾಪುರ ಭಾಗದಲ್ಲಿ ಅಂಗಡಿ, ಮನೆಗಳ ತ್ಯಾಜ್ಯ ಸೇರಿದಂತೆ ವಿವಿಧ ತ್ಯಾಜ್ಯಗಳು ಕಾವೇರಿ ನದಿಗೆ ಸೇರುತ್ತಿದೆ. ಪ್ರತಿ ದಿನವೂ ನೆಲ್ಯಹುದಿಕೇರಿ ಪಟ್ಟಣದ ಚರಂಡಿ ನೀರು ನದಿಗೆ ಹರಿಯುತ್ತಿದ್ದು, ಕ್ರಮ ಕೈಗೊಳ್ಳಬೇಕಾಗಿದ್ದ ಸ್ಥಳೀಯ ಗ್ರಾಮ ಪಂಚಾಯಿತಿ ಕೈಕಟ್ಟಿಕೊಂಡು ಕುಳಿತಿದೆ.

ಇದು ಕೆಲವೇ ದೂರದಲ್ಲಿ ಹರಿಯುವ ಕಾವೇರಿ ನದಿ ಸೇರುತ್ತಿದೆ. ಸಿದ್ದಾಪುರ ಪಟ್ಟಣದ ತ್ಯಾಜ್ಯ ಹಾಗೂ ಶೌಚದ ನೀರು ಕರಡಿಗೋಡು ರಸ್ತೆಯ ಚರಂಡಿ ಮೂಲಕ ಹರಿದು, ಕಾವೇರಿ ನದಿ ಸೇರುತ್ತಿದೆ. ಮೈಸೂರು ರಸ್ತೆಯ ಜನವಸತಿ ಪ್ರದೇಶದ ತ್ಯಾಜ್ಯದ ನೀರನ್ನು ಮುಲ್ಲೆತೋಡು ಮೂಲಕ ಕಾವೇರಿಗೆ ಹರಿಬಿಡಲಾಗುತ್ತಿದೆ



ಡಾಂಬರು ಕಂಡು ದಶಕವಾಯ್ತು!

• ಉದಯವಾಹಿನಿ, ಮುಳಬಾಗಿಲು

ತಾಲ್ಲೂಕಿನ ಪಿಚ್ಚಗುಂಟ ಹಳ್ಳಿಯಿಂದ ಮಿಣಜೇನಹಳ್ಳಿವರೆಗಿನ ರಸ್ತೆ ಸುಮಾರು 10 ವರ್ಷಗಳಿಂದಲೂ ದುರಸ್ತಿ ಕಾಣದೆ ನನೆಗುದಿಗೆ ಬಿದ್ದಿದೆ. ಜನ ಮತ್ತು ವಾಹನ ಸಂಚರಿಸಲು ಪ್ರಯಾಸಪಡಬೇಕಾಗಿದೆ. ರಸ್ತೆಯನ್ನು ಡಾಂಬರು ಅಥವಾ ಸಿಮೆಂಟ್ ರಸ್ತೆಯನ್ನಾಗಿ ಮಾಡಬೇಕಾಗಿದೆ.

ಇದು ಸಾರ್ವಜನಿಕರ ಆಗ್ರಹವೂ ಹೌದು. ಯಳಗೊಂಡಹಳ್ಳಿ ಮಾರ್ಗವಾಗಿ ಹೋಗುವ ಪಿಚ್ಚಗುಂಟ್ಲಹಳ್ಳಿಯಿಂದ ಮಿಣಜೇನಹಳ್ಳಿ ಮೂಲಕ ನೆರೆಯ ಕೆಜಿಎಫ್ ಹಾಗೂ ಬಂಗಾರಪೇಟೆ ತಾಲ್ಲೂಕುಗಳಿಗೆ ಸಂಪರ್ಕ ಕಲ್ಪಿಸುವ ಮುಖ್ಯ ರಸ್ತೆ ಇದಾಗಿದೆ. ಡಾಂಬರು ಕಿತ್ತು ಹೋಗಿ ಮಣ್ಣಿನ ರಸ್ತೆಯಾಗಿ ಬದಲಾಗಿ ಸುಮಾರು ಹತ್ತು ವರ್ಷವೇ ಕಳೆದಿದೆ. ರಸ್ತೆ ಉದ್ದಕ್ಕೂ ಮೊಣಕಾಲುದ್ದದ ಗುಂಡಿಗಳು ಬಿದ್ದಿವೆ. ಇಂತಹ ದುರ್ಗಮ ರಸ್ತೆಯಲ್ಲಿ ಪ್ರತಿದಿನ ವಿದ್ಯಾರ್ಥಿಗಳು, ವಯೋವೃದ್ಧರು, ಮಹಿಳೆಯರು, ಬಾಣಂತಿಯರು, ಗರ್ಭಿಣಿಯರು ಹಾಗೂ ಸಾರ್ವಜನಿಕರು ಪ್ರತಿನಿತ್ಯ ಸಂಚರಿಸಬೇಕು. ಜನರಿಗೂ ಇದೇ ವಾಡಿಕೆ ಆಗಿದೆ. ವಾಹನ ಓಡಾಟದಿಂದ ಜಲ್ಲಿಕಲ್ಲು ರಸ್ತೆ ಬದಿಗೆ ಸರಿದಿದೆ. ರಸ್ತೆ ಉದ್ದಕ್ಕೂ ಕೇವಲ ಮಣ್ಣು ತುಂಬಿಕೊಂಡಿದ್ದು ದಿನವೂ ವಾಹನಗಳಿಗೆ ದೂಳಿನ ಮಜ್ಜನವಾಗುತ್ತದೆ.

ಉದಯವಾಹಿನಿ ಚಿತ್ರ

ರಸ್ತೆಯಲ್ಲಿ ಸುಮಾರು ಮೂರು, ನಾಲ್ಕು ಅಡಿಯಷ್ಟು ಆಳದ ಗುಂಡಿಗಳು ಬಿದ್ದಿದ್ದು, ವಾಹನಗಳು ಗುಂಡಿಗಳಲ್ಲಿ ಹತ್ತಿ, ಇಳಿದು ಇನ್ನು ಇದೇ ರಸ್ತೆ ಒಂದು ಭಾಗದಲ್ಲಿ ಆಳವಾದ ಕಲ್ಲು ಬಂಡೆಗಳು ಹಾಗೂ ಜಲ್ಲಿ ಕಲ್ಲುಗಳ ಕ್ರಷರ್ ಇವೆ. ಬೇಸಿಗೆ ಕಾಲದಲ್ಲಿ ರಸ್ತೆ ದೂಳು ಗಾಳಿಯಲ್ಲಿ ಹರಡಿ ಕೆಲವರಿಗೆ ಕೆಮ್ಮು, ನೆಗಡಿ ಪ್ರಾರಂಭವಾದರೆ ಮತ್ತೆ ಕೆಲವರಿಗೆ ಚರ್ಮದ ಮೇಲೆ ದೂಳು ಬಿದ್ದು ಸಣ್ಣ ಸಣ್ಣ ಗುಳ್ಳೆಗಳು ಎದ್ದೇಳುತ್ತವೆ. ಹೀಗಾಗಿ ರಸ್ತೆ ದೂಳು ರೋಗಗಳಿಗೆ ಕಾರಣವಾಗಿದೆ. ಪ್ರತಿನಿತ್ಯ ಶಾಲಾ ವಾಹನದಲ್ಲಿ ಹಾಗೂ ಕೆಲವೊಮ್ಮೆ ಬಸ್‌ಗಳಲ್ಲಿ ಶಾಲೆಗಳಿಗೆ ಹೋಗಿ ಬರುವಾಗ ಆಳವಾದ ಗುಂಡಿಗಳಲ್ಲಿ ವಾಹನಗಳು ಇಳಿದು ಹತ್ತುವಾಗ ಕೆಳಗೆ ಬೀಳುವಂತೆ ವಾಲುತ್ತವೆ. ಆ ಸಮಯದಲ್ಲಿ ಎಲ್ಲಿ ಬಿದ್ದು ಪ್ರಾಣಕ್ಕೆ ಗಂಡಾಂತರ ಬರಬಹುದೋ ಎಂಬ ಭಯವಾಗುತ್ತದೆ ಎಂದು ವಿದ್ಯಾರ್ಥಿಗಳು ಆತಂಕ ವ್ಯಕ್ತಪಡಿಸಿದ್ದಾರೆ. ಹನುಮಪ್ಪ ಲೋಕೋಪಯೋಗಿ ಇಲಾಖೆ ಎಂಜಿನಿಯರ್?2.5ಕೋಟಿ ವೆಚ್ಚದಲ್ಲಿ ಕಾಮಗಾರಿ ಪ್ರಾರಂಭವಾಗಲಿದೆ. ಮೊದಲ ಪ್ರಾಶಸ್ತ್ರದಲ್ಲಿಯೇ ರಸ್ತೆ ಡಾಂಬರೀಕರಣ ನಡೆಸಲು ಶಾಸಕರು ತಿಳಿಸಿದ್ದಾರೆ. ಹಳ್ಳ ದಿನ್ನೆ ಕಲ್ಲು ಜಲ್ಲಿ ದೂಳು ಮತ್ತಿತರ ಸಮಸ್ಯೆಗಳೇ ತುಂಬಿಕೊಂಡಿರುವ ರಸ್ತೆಯಲ್ಲಿ ಬಾಣಂತಿ ತಾಯಂದಿರು ಹಾಗೂ ಗರ್ಭಿಣಿಯರು ಸಂಚಾರ ಮಾಡಲು ಆಗದ ಸ್ಥಿತಿ ಇದೆ. ಸ್ವಲ್ಪ ಯಾಮಾರಿದರೂ ಪ್ರಾಣಕ್ಕೆ ಸಂಚಕಾರ ಬರಲಿದೆ. ಡಾಂಬರು ಇಲ್ಲದ ರಸ್ತೆಗೆ ಇನ್ನಾದರೂ ಇಲಾಖೆ ಅಥವಾ ಜನಪ್ರತಿನಿಧಿಗಳು ಡಾಂಬರು ಭಾಗ್ಯ ಕಲ್ಪಿಸಿದರೆ ಜನರ ಬದುಕು ಸುಗುಮವಾಗಲಿದೆ.

ಭಾರೀ ಗಾತ್ರದ ಟಿಪ್ಪರ್ ಲಾರಿಗಳು ಜಲ್ಲಿ, ಎಂ-ಸ್ಯಾಂಡ್ ಮತ್ತಿತರ ಕಲ್ಲಿನ ಸಾಮಗ್ರಿ ಸಾಗಿಸುವ ಕಾರಣದಿಂದ ರಸ್ತೆ ಹಾಳಾಗಿದೆ. ರಸ್ತೆ ಮೇಲೆ ದೂಳು ಹೊಗೆಯಂತೆ ಆವರಿಸಿಕೊಳ್ಳುತ್ತದೆ. ಇನ್ನು ರಸ್ತೆಯಲ್ಲಿ ನಿರ್ಮಾಣವಾಗಿರುವ ಗುಂಡಿಗಳು ಮಳೆಗಾಲದಲ್ಲಿ ಮಳೆ ನೀರಿನಿಂದ ತುಂಬಿಕೊಂಡಿರುತ್ತವೆ. ಆ ಸಂದರ್ಭದಲ್ಲಿ ರಸ್ತೆ ಯಾವುದು ಅಥವಾ ಗುಂಡಿ ಯಾವುದು ಎಂದು ತಿಳಿಯದ ಸ್ಥಿತಿ ನಿರ್ಮಾಣವಾಗಿದೆ ಎನ್ನುತ್ತಾರೆ ಪ್ರಯಾಣಿಕರು

ವಿಸಿ ನಾಲೆಗೆ ಕಾರು ಪಲ್ಟಿ ಓರ್ವ ಸಾವು, ಇಬ್ಬರು ನಾಪತ್ತೆ

• ಉದಯವಾಹಿನಿ, ಮಂಡ್ಯ

ಚಾಲಕನ ನಿಯಂತ್ರಣ ತಪ್ಪಿ ವಿಸಿ ನಾಲೆಗೆ ಕಾರು ಬಿದ್ದು ಇಬ್ಬರು ಸಾವನ್ನಪ್ಪಿರುವ ಘಟನೆ ಮಂಡ್ಯ ತಾಲೂಕಿನ ತಿಬ್ಬನಹಳ್ಳಿ ಗ್ರಾಮದಲ್ಲಿ ನಡೆದಿದೆ. ಕಾರು ಮಾಲೀಕ ಫಯಾಜ್ ಅಲಿಯಾಸ್ ಬ್ಯಾಟರಿ ಸಾವನ್ನಪ್ಪಿದ್ದು, ಅಸ್ಲಂ ಪಾಷ, ಪೀರ್ ಖಾನ್ ನಾಪತ್ತೆಯಾಗಿದ್ದಾರೆ. ಕಾರಿನಲ್ಲಿದ್ದ ನಯಾಜ್ ಎಂಬಾತನನ್ನ ರಕ್ಷಣೆ ಮಾಡಲಾಗಿದೆ. ಕಾರಿನಲ್ಲಿದ್ದ ನಾಲ್ವರು ಮಂಡ್ಯದ ಹಾಲಹಳ್ಳಿ ಸ್ಲಂನ ನಿವಾಸಿಗಳು ಎಂದು ಹೇಳಲಾಗಿದೆ. ಶಿವಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ. ಸ್ಥಳೀಯರ ಸಹಾಯದಿಂದ ಪೊಲೀಸರು ಕಾರನ್ನು ಮೇಲೆತ್ತಿದ್ದಾರೆ. ನಾಲೆಗೆ ತಡೆಗೋಡೆ ಇಲ್ಲದ ಕಾರಣ ದುರಂತರ ಸಂಭವಿಸಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಘಟನೆ ಕುರಿತು ಮಾಹಿತಿ ನೀಡಿರುವ ಮಂಡ್ಯ ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ, ಕಾರಿನಲ್ಲಿ ಇದ್ದವರು ಮಂಡ್ಯದ ಹಾಲಹಳ್ಳಿ ಸ್ಲಂನವರು. ಓರ್ವ ಸಾವನ್ನಪ್ಪಿದ್ದಾನೆ. ಮತ್ತೋರ್ವನನ್ನ ರಕ್ಷಣೆ ಮಾಡಲಾಗಿದೆ. ಉಳಿದ ಇಬ್ಬರು ನಾಪತ್ತೆಯಾಗಿದ್ದಾರೆ ಎಂದು ತಿಳಿಸಿದ್ದಾರೆ. ಓವರ್‌ಟೇಕ್ ಮಾಡುವ ವೇಳೆ ಈ ಘಟನೆ ಜರುಗಿದೆ. ಸದ್ಯ ಅಗ್ನಿಶಾಮಕದಳದೊಂದಿಗೆ ಕಾರ್ಯಾಚರಣೆ ನಡೆಯುತ್ತಿದೆ. ನೀರು ಹೆಚ್ಚಿರುವ ಕಾರಣ ಕಾರ್ಯಾಚರಣೆ ಕಷ್ಟವಾಗುತ್ತಿದೆ. ನೀರನ್ನು ನಿಲ್ಲಿಸಲು ನೀರಾವರಿ ಇಂಜಿನಿಯರ್‌ಗೆ ತಿಳಿಸಿದ್ದೇವೆ. ಕೆಲವೊಂದು ಕಡೆ ತಡೆಗೋಡೆ ಇದೆ, ಕೆಲವು ಕಡೆ ಈಗ ನಿರ್ಮಾಣವಾಗುತ್ತಿದೆ. ಇನ್ನೂ ಕೆಲವೆಡೆ ತಡೆಗೋಡೆ ನಿರ್ಮಾಣವಾಗಿಲ್ಲ ಎಂದು ತಿಳಿಸಿದ್ದಾರೆ. ದುರಂತದ ಸ್ಥಳಕ್ಕೆ ಬಂದ ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳಿಗೆ ಸ್ಥಳೀಯರು ತರಾಟೆಗೆ ತೆಗೆದುಕೊಂಡಿದ್ದಾರೆ. ಎಲ್ಲವೂ ನಿಮ್ಮಿಂದಲೇ, ನೀವೇ ದುರಂತಕ್ಕೆ ಕಾರಣ ಅಂತ ಎಂಜಿನಿಯರ್ ಜಗದೀಶ್‌ಗೆ ಸ್ಥಳೀಯರು ಕ್ಲಾಸ್ ತೆಗೆದುಕೊಂಡಿದ್ದಾರೆ. ಅಲ್ಲದೇ ತಡೆಗೋಡೆ ನಿರ್ಮಿಸುವಂತೆ ಆಗ್ರಹಿಸಿ ಪ್ರತಿಭಟನೆ ನಡೆಸಿದ್ದಾರೆ.

ಉದಯವಾಹಿನಿ ಚಿತ್ರ

ಹಿಗ್ಗಿದ ಮಧುಗಿರಿ ಪುರಸಭೆ ವ್ಯಾಪ್ತಿ: ಹೊಸ ಗ್ರಾಮಗಳ ಸೇರ್ಪಡೆಗೆ ಸಂಪುಟ ಅಸ್ತು

• ಉದಯವಾಹಿನಿ, ಮಧುಗಿರಿ

ಪುರಸಭೆ ವ್ಯಾಪ್ತಿಗೆ ತಾಲ್ಲೂಕಿನ ಕೆಲ ಗ್ರಾಮಗಳ ಸೇರ್ಪಡೆಗೆ ಸಚಿವ ಸಂಪುಟ ಅನುಮೋದನೆ ನೀಡಿದ್ದು, ಈ ಭಾಗದ ಜನರ ಎರಡು ದಶಕಗಳ ಕನಸು ನನಸಾಗಿದೆ. ಪುರಸಭೆ ವ್ಯಾಪ್ತಿಗೆ ಮಧುಗಿರಿ, ಹರಿಹರರೊಪ್ಪ ಮತ್ತು ಪಾಳ್ಯದ ಕೆಲಭಾಗಗಳು ಸೇರಿದಂತೆ ಒಟ್ಟು 12.14 ಚದರ ಕಿ.ಮೀ. ಪುರಸಭೆ ವ್ಯಾಪ್ತಿ ಸೇರ್ಪಡೆಗೆ ರಾಜ್ಯ ಸಚಿವ ಸಂಪುಟದಲ್ಲಿ ಅನುಮೋದನೆ ದೊರೆತಿದೆ.

ಗ್ರಾಮಗಳ ಸೇರ್ಪಡೆಯಿಂದ ಮಧುಗಿರಿ ಪಟ್ಟಣ ಮತ್ತಷ್ಟು ವೇಗವಾಗಿ ಬೆಳೆಯಲು ಸಹಕಾರಿಯಾಗುತ್ತದೆ.

ಒಟ್ಟು 12.14 ಚದರ ಕಿ.ಮೀ. ಪುರಸಭೆ ವ್ಯಾಪ್ತಿ ಸೇರ್ಪಡೆ

ಉದಯವಾಹಿನಿ ಚಿತ್ರ

ಸೇರ್ಪಡೆಗೊಂಡ ಗ್ರಾಮದ ಅಭಿವೃದ್ಧಿಗೆ ಹೆಚ್ಚು ಒತ್ತು ನೀಡಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ. ಈ ಹಿಂದೆ ಹರಿಹರರೊಪ್ಪ ಹಾಗೂ ಪಾಳ್ಯದ ಕೆಲವು ಸರ್ವೆ ನಂಬರ್‌ಗಳು ಪುರಸಭೆ ವ್ಯಾಪ್ತಿಯಿಂದ ಕೈಬಿಟ್ಟು ಹೋಗಿದ್ದವು. ಈಗ ಪುರಸಭೆಗೆ ಸೇರ್ಪಡೆಯಾಗಿರುವ ಹೊಸ ಹೊಸ ಬಡಾವಣೆಗಳನ್ನು ನಿರ್ಮಿಸಲು ಸಹಕಾರಿಯಾಗುತ್ತದೆ. ಪುರಸಭೆ ವ್ಯಾಪ್ತಿಗೆ ಒಂದಿಷ್ಟು ಗ್ರಾಮಗಳನ್ನು ಸೇರಿಸಿಕೊಂಡು ಪುರಸಭೆಯ ವ್ಯಾಪ್ತಿ ಹೆಚ್ಚಿಸಬೇಕು ಎಂಬ ಜನರ ಒತ್ತಾಯದಂತೆ 2001ರಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಈ ಪ್ರಸ್ತಾವನೆ ನನೆಗುದಿಗೆ ಬಿದ್ದಿತ್ತು. ಇದೀಗ ರಾಜ್ಯ ಸಚಿವ ಸಂಪುಟದಲ್ಲಿ ಈ ಪ್ರಸ್ತಾವನೆಗೆ ಅನುಮೋದನೆ ಸಿಕ್ಕಿದೆ. ಮಧುಗಿರಿ ಪುರಸಭೆಯ ಗಡಿ ವಿಸ್ತರಣೆ ಮಾಡಿರುವುದರಿಂದ ಕೃಷಿ ಚಟುವಟಿಕೆಯಲ್ಲಿದ್ದ ಜಮೀನುಗಳು ಕೃಷಿಯೇತರ ಚಟುವಟಿಕೆಗಳಿಗೆ ಬದಲಾಗಿ ನಿವೇಶನದ ಬಡಾವಣೆ ಹಾಗೂ ಕೈಗಾರಿಕಾ ವಲಯಗಳು ಪ್ರಾರಂಭವಾದಾಗ ಉದ್ಯೋಗ ಮತ್ತು ಮನೆಗಳ ನಿರ್ಮಾಣವಾಗಿ ಮಧುಗಿರಿ ಪಟ್ಟಣ ಅಭಿವೃದ್ಧಿಯಾಗುತ್ತದೆ. ಸದ್ಯ ಪಟ್ಟಣದಲ್ಲಿ ನಿವೇಶನ ದರ ದುಬಾರಿ ಇದೆ. ಪುರಸಭೆ ವ್ಯಾಪ್ತಿ ಹಿಗ್ಗಿ ಹೊಸ ಬಡಾವಣೆಗಳು ನಿರ್ಮಾಣವಾದರೆ ನಿವೇಶನದ ದರ ಕಡಿಮೆಯಾಗುತ್ತದೆ. ಬಡ ಜನರೂ ನಿವೇಶನವನ್ನು ಖರೀದಿಸಿ ಮನೆ ನಿರ್ಮಾಣ ಮಾಡಿಕೊಂಡು ಕನಸು ನನಸಾಗಿಕೊಳ್ಳಬಹುದು ಎಂದು ಆಶಾಭಾವನೆ ಮೂಡಿದೆ.

ಸಿಎಂ ಕುಟುಂಬದ ವಿರುದ್ಧ ಲೋಕಾಯುಕ್ತಕ್ಕೆ ಮತ್ತೊಂದು ದೂರು ಸಲ್ಲಿಕೆ!

• ಉದಯವಾಹಿನಿ, ಮೈಸೂರು

ಮುಡಾ ಹಗರಣಕ್ಕೆ ಸಂಬಂಧಪಟ್ಟಂತೆ ಈಗಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಡಿ ಸಂಕಷ್ಟ ಎದುರಿಸುತ್ತಿದ್ದಾರೆ ಇದರ ಮಧ್ಯೆ ಅವರ ವಿರುದ್ಧ ಮತ್ತೊಂದು ಆರೋಪ ಕೇಳಿ ಬಂದಿದ್ದು ಬೇನಾಮಿ ಆಸ್ತಿ ಖರೀದಿಸಿದ ಆರೋಪದಲ್ಲಿ ಸ್ನೇಹಮಯಿ ಕೃಷ್ಣ ಅವರು ಈಗ ಲೋಕಾಯುಕ್ತಕ್ಕೆ ದೂರು ಸಲ್ಲಿಸಿದ್ದಾರೆ. ಹೌದು ಎಂ ಸಿದ್ದರಾಮಯ್ಯ ವಿರುದ್ಧ ಬೇನಾಮಿ ಆಸ್ತಿ ಖರೀದಿಸಿದ ಆರೋಪದ ಅಡಿ ದೂರು ಸಲ್ಲಿಕೆ ಆಗಿದೆ. ಮೈಸೂರು ಲೋಕಾಯುಕ್ತ ಕಚೇರಿಗೆ ಸ್ನೇಹಮಯಿ ಕೃಷ್ಣ ಅವರಿಂದ ಸಿಎಂ ಸಿದ್ದರಾಮಯ್ಯ ಬೇನಾಮಿ ಆಸ್ತಿ ಖರೀದಿಸಿದ್ದಾರೆ ಎಂದು ಆರೋಪಿಸಿ ದೂರು ಸಲ್ಲಿಸಿದ್ದಾರೆ. ಸಿದ್ದರಾಮಯ್ಯ ವಿರುದ್ಧ ಬೇನಾಮಿ ಆಸ್ತಿ ಖರೀದಿಸಿರುವ ಆರೋಪ ಕೇಳಿ ಬಂದಿದೆ ಮೈಸೂರು ತಾಲ್ಲೂಕಿನ ಆಲನಹಳ್ಳಿ ಭೂಮಿಗೆ ಸಂಬಂಧಿಸಿದ ಪ್ರಕರಣಕ್ಕೆ ಸಂಬಂಧಪಟ್ಟಂತೆ ಸರ್ವೆ ನಂಬರ್ 113/4 ರಲ್ಲಿ 1 ಎಕರೆ ಭೂಮಿಗೆ ಸಂಬಂಧಿಸಿದ ಪ್ರಕರಣ ಇದಾಗಿದೆ.

ಉದಯವಾಹಿನಿ ಚಿತ್ರ

1983ರ ಡಿಸೆಂಬರ್ 15 ರಂದು ಮಲ್ಲಿಕಾರ್ಜುನ ಸ್ವಾಮಿ ಖರೀದಿಸಿದ ಹನುಮ

ಅಂತರಾಳದಿಂದ... EDITORIAL

ಕೊಳ್ಳುವ ಶಕ್ತಿ ಹೆಚ್ಚಿಸಲು ಕಸರತ್ತು
ಬಿಹಾರಕ್ಕೆ ವಿಶೇಷ ಉಡುಗೊರೆ



ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಕೇಂದ್ರದ 2025-26ನೇ ಸಾಲಿನ ಬಜೆಟ್ ಮಂಡಿಸಿದ್ದಾರೆ. ಮಧ್ಯಮ ವರ್ಗದ ಜನರನ್ನು ಖುಷಿಪಡಿಸುವಂತಹ ಕೆಲವು ಅಂಶಗಳು ಈ ಬಜೆಟ್‌ನಲ್ಲಿ ಇವೆ. 12.75 ಲಕ್ಷ ವಾರ್ಷಿಕ ಆದಾಯ ಉಳ್ಳ ವೇತನದಾರರು, 12 ಲಕ್ಷದವರೆಗೆ ಆದಾಯ ಉಳ್ಳ ಇತರರು ಆದಾಯ ತೆರಿಗೆ ಪಾವತಿಸಬೇಕಿಲ್ಲ ಎಂಬುದು ಇದರಲ್ಲಿನ ಪ್ರಮುಖ ಅಂಶ. ಆದಾಯ ತೆರಿಗೆ ವಿನಾಯಿತಿ ಮಿತಿಯನ್ನು ಏರಿಸಬೇಕು ಎಂಬುದು ಮಧ್ಯಮ ವರ್ಗದ ಜನರ ಬಹುಕಾಲದ ಬೇಡಿಕೆಯಾಗಿತ್ತು. ಈ ವರ್ಗದ ಜನರ ಕೈಯಲ್ಲಿ ಹೆಚ್ಚು ಹಣ ಉಳಿಯಲಿ ಎಂಬುದ ಕ್ಕಿಂತ ಅವರು ಹೆಚ್ಚು ಹೆಚ್ಚು ಖರ್ಚು ಮಾಡಿ ಅರ್ಥವ್ಯವಸ್ಥೆಗೆ ಚೈತನ್ಯ ತುಂಬಲಿ ಎಂಬ ಯೋಚನೆಯು ಈ ನಡೆಯ ಹಿಂದೆ ಇದೆ.

ಈ ನಿರ್ಧಾರವು ಆರ್ಥಿಕ ಪ್ರಗತಿಗೆ ವೇಗ ತುಂಬಲಿದೆ ಎಂಬುದು ಹಣಕಾಸು ಸಚಿವರ ಲೆಕ್ಕಾಚಾರ ಆಗಿರಬಹುದು. ಆದರೆ, ವಾಸ್ತವದಲ್ಲಿ ಅದು ಕಾರ್ಯರೂಪಕ್ಕೆ ಬಂದೇ ಬರುತ್ತದೆ ಎಂದು ಹೇಳಲಾಗದು. ಜಿಡಿಪಿ ಬೆಳವಣಿಗೆಯನ್ನು ಶೇಕಡ 6.6ರಷ್ಟರಲ್ಲಿ ಆದರೂ ಉಳಿಸಿಕೊಳ್ಳಲು ಆದಾಯ ತೆರಿಗೆ ವಿನಾಯಿತಿ ಮಿತಿ ಏರಿಕೆಯೊಂದೇ ಸಾಲದು ಎಂದು ರೇಟಿಂಗ್ ಸಂಸ್ಥೆ ಮೂಡೀಸ್ ಅಭಿಪ್ರಾಯಪಟ್ಟಿದೆ. ಅದೇನೇ ಇದ್ದರೂ ಹಣದುಬ್ಬರ, ವೇತನದಲ್ಲಿ ದೊಡ್ಡ ಏರಿಕೆ ಇಲ್ಲದಿರುವುದು ಸೇರಿದಂತೆ ಬೇರೆ ಬೇರೆ ಬಗೆಯ ಆರ್ಥಿಕ ಸಮಸ್ಯೆಗಳಿಂದ ಕಂಗೆಟ್ಟಿರುವ ಮಧ್ಯಮ ವರ್ಗದ ಜನರು ಸ್ವಲ್ಪಮಟ್ಟಿಗೆ ನಿರಾಳರಾಗುವುದರಲ್ಲಿ ಅನುಮಾನ ಇಲ್ಲ. ಆದರೆ, ಮಧ್ಯಮ ವರ್ಗವನ್ನು ಖುಷಿಪಡಿಸಿರುವ ಹಣಕಾಸು ಸಚಿವರು ಇತರ ಕ್ಷೇತ್ರಗಳ ಕುರಿತು ಅದೇ ರೀತಿಯ ಕಾಳಜಿಯನ್ನು ತೋರಿಲ್ಲ. ಕೋವಿಡ್ ಸಾಂಕ್ರಾಮಿಕದ ಸಂದರ್ಭದಲ್ಲಿ, ಅದರ ನಂತರದ ಆರ್ಥಿಕ ಬಿಕ್ಕಟ್ಟಿನ ಕಾಲದಲ್ಲಿ ಗ್ರಾಮೀಣ ಪ್ರದೇಶದ ಜನರಿಗೆ ಆಧಾರವಾಗಿ ನಿಂತಿದ್ದ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಗೆ ಹೆಚ್ಚಿನ ಅನುದಾನ ಒದಗಿಸಬೇಕು ಎಂಬ ಬೇಡಿಕೆಗೆ ಸ್ಪಂದನ ಸಿಕ್ಕಿಲ್ಲ. ಕೃಷಿ, ಗ್ರಾಮೀಣಾಭಿವೃದ್ಧಿ, ಶಿಕ್ಷಣ, ಆರೋಗ್ಯದಂತಹ ಕ್ಷೇತ್ರಗಳಲ್ಲಿ ಕ್ರಾಂತಿಕಾರಕ ಯೋಜನೆಗಳನ್ನೇನೂ ಪ್ರಕಟಿಸಿಲ್ಲ. ಬದಲಿಗೆ, ಗ್ರಾಮೀಣ ರಸ್ತೆ ನಿರ್ಮಾಣಕ್ಕೆ ಅನುದಾನವನ್ನು ದೊಡ್ಡ ಪ್ರಮಾಣದಲ್ಲಿ ಕಡಿತ ಮಾಡಲಾಗಿದೆ. ಬೆಳೆ ವಿಮೆ, ರಸಗೊಬ್ಬರ ಸಹಾಯಧನಕ್ಕೆ ಸಹ ಅನುದಾನವನ್ನು ಕಡಿಮೆ ಮಾಡಲಾಗಿದೆ. ಬಿಹಾರ ವಿಧಾನಸಭೆಗೆ ಈ ವರ್ಷದ ಕೊನೆಯಲ್ಲಿ ನಡೆಯಲಿರುವ ಚುನಾವಣೆಯನ್ನು ಗಮನದಲ್ಲಿಇರಿಸಿಕೊಂಡು ನಿರ್ಮಲಾ ಅವರು ಬಜೆಟ್ ಸಿದ್ದಪಡಿಸಿದ್ದಾರೆ.

> ಚುನಾವಣೆ ಕಾರಣಕ್ಕೆ ಅಥವಾ ಬೇರೆ ಯಾವುದೇ ಕಾರಣಕ್ಕೆ ಒಂದು ರಾಜ್ಯಕ್ಕೆ ಹೆಚ್ಚಿನ ಮಹತ್ವ ಕೊಟ್ಟು, ಕೆಲವು ರಾಜ್ಯಗಳನ್ನು ನಿರ್ಲಕ್ಷಿಸುವುದು ಸರಿಯಲ್ಲ. ಮಧ್ಯಮ ವರ್ಗದ ಜನರನ್ನು ಖುಷಿಪಡಿಸುವಂತಹ ಕೆಲವು ಅಂಶಗಳು ಈ ಬಜೆಟ್‌ನಲ್ಲಿ ಇವೆ.

ಮಖಾನಾ ಮಂಡಳಿ ಸ್ಥಾಪನೆ, ಹೊಸ ವಿಮಾನ ನಿಲ್ದಾಣಗಳ ನಿರ್ಮಾಣ, ಪಟ್ನಾ ಐಐಟಿಯ ವಿಸ್ತರಣೆ, ಆಹಾರ ತಂತ್ರಜ್ಞಾನ ಸಂಸ್ಥೆ ಸ್ಥಾಪನೆ, ಪಶ್ಚಿಮ ಕೋಸಿ ಕಾಲುವೆ ಯೋಜನೆಯಂತಹ ಹಲವು ಕೊಡುಗೆಗಳನ್ನು ಬಿಹಾರಕ್ಕೆ ನೀಡಲಾಗಿದೆ. ಇವುಗಳಲ್ಲಿ ಹೆಚ್ಚಿನ ಯೋಜನೆಗಳು ಉತ್ತರ ಬಿಹಾರ, ಮಿಥಿಲಾ ಮತ್ತು ಕೋಸಿ ಪ್ರದೇಶಗಳಲ್ಲಿ ಅನುಷ್ಠಾನಗೊಳ್ಳಲಿವೆ. ಎನ್‌ಡಿಎ ಅಂಗಪಕ್ಷಗಳಾದ ಬಿಜೆಪಿ ಮತ್ತು ಜೆಡಿಯು ಈ ಪ್ರದೇಶಗಳಲ್ಲಿ ಪ್ರಬಲವಾಗಿವೆ. ಹೀಗಾಗಿ, ಚುನಾವಣೆಯಲ್ಲಿ ಜನರ ಮೇಲೆ ಪ್ರಭಾವ ಬೀರುವುದಕ್ಕೆ ಕೇಂದ್ರದ ಬಜೆಟ್ ಅನ್ನು ಬಳಸಿಕೊಳ್ಳಲಾಗಿದೆ ಎಂಬುದರಲ್ಲಿ ಅನುಮಾನವೇನೂ ಉಳಿಯುವುದಿಲ್ಲ. ಚುನಾವಣೆಯ ಕಾರಣಕ್ಕೆ ಅಥವಾ ಬೇರೆ ಯಾವುದೇ ಕಾರಣಕ್ಕೆ ಒಂದು ರಾಜ್ಯಕ್ಕೆ ಹೆಚ್ಚಿನ ಮಹತ್ವ ಕೊಟ್ಟು, ಕೆಲವು ರಾಜ್ಯಗಳನ್ನು ನಿರ್ಲಕ್ಷಿಸುವುದು ಸರಿಯಲ್ಲ. ಕೇಂದ್ರ ಸರ್ಕಾರದ ಇಂತಹ ನಡವಳಿಕೆಯು ಒಕ್ಕೂಟ ವ್ಯವಸ್ಥೆಗೆ ಎಸಗಿದ ದ್ರೋಹ ಎಂದೇ ಭಾವಿಸಬೇಕಾಗುತ್ತದೆ. ಪ್ರಧಾನಿ ನರೇಂದ್ರ ಮೋದಿ ಅವರು ದೆಹಲಿ ವಿಧಾನಸಭೆ ಚುನಾವಣಾ ಪ್ರಚಾರದಲ್ಲಿ ಕೇಂದ್ರದ ಬಜೆಟ್ ಅನ್ನು ಪದೇ ಪದೇ ಉಲ್ಲೇಖಿಸಿದ್ದಾರೆ. ಈ ಮೂಲಕ ಬಜೆಟ್ ಸಿದ್ಧಪಡಿಸುವಾಗ ದೆಹಲಿ ಚುನಾವಣೆಯೂ ಗಮನದಲ್ಲಿ ಇತ್ತು ಎಂಬುದನ್ನು ದೃಢಪಡಿಸಿದ್ದಾರೆ.

ರಾಮಾಯಣ
ಅಯೋಧ್ಯಾ ಪಟ್ಟಣವನ್ನು ಅಲಂಕರಿಸಿದ್ದು

• ಹಿಂದಿನ ಸಂಚಿಕೆಯಿಂದ 78ನೆಯ ಅಧ್ಯಾಯ

ಆಬಳಿಕ ಪ್ರಾತಃಕಾಲವಾಗುವುದಕ್ಕೆ ಒಂದು ಜಾವ ಮುಂಚಿತವಾಗಿ ಎಚ್ಚರಗೊಂಡು ಮನೆಗೆ ಅಲಂಕಾರವಿಧಾನಗಳನ್ನು ಮಾಡಿಸಿ ಪೌರಾಣಿಕರೂ ವಂಶಾವಳಿಯನ್ನು ಸ್ತುತಿಸುವವರೂ ಸ್ಮೃತಿ ಪಾಠಕರೂ ಹೇಳುತ್ತಿದ್ದ ಕರ್ಣಸುಖಗಳಾದ ವಚನಗಳನ್ನು ಕೇಳುತ್ತಾ ಪ್ರಾತಸ್ಸಂಧ್ಯಾದಿ ದೇವತೆಗಳನ್ನು ಧ್ಯಾನಿಸಿ ಸೂರೋಪಾಸನೆಯನ್ನು ಮಾಡಿ ಗಾಯತ್ರೀಜಪವನ್ನು ಮಾಡಿ ಶಿರಸಾ ಪ್ರಣಮಿಸಿ ನಿರ್ಮಲ ವಸ್ತ್ರವನ್ನು ಧರಿಸಿ ಬ್ರಾಹ್ಮಣೋತ್ತಮರಿಂದ ಸ್ವಸ್ತಿವಾಚನವನ್ನು ಮಾಡಿಸಿದನು. ಆ ಸಮಯದಲ್ಲಿ ಗಂಭೀರವಾಗಿಯೂ ಮಧುರವಾಗಿಯೂ ಇರುವ ಆ ಬ್ರಾಹ್ಮಣರ ಪುಣ್ಯಾಹವಾಚನದ ಘೋಷವು ತೂರಾದಿಘೋಷದಿಂದ ಪ್ರತಿಧ್ವನಿಯನ್ನುಂಟುಮಾಡುತ್ತ ಆ ಪುರದಲ್ಲೆಲ್ಲಾ ತುಂಬಿತು. ರಘುನಂದನನು ಸೀತಾಸಮೇತನಾಗಿ ಯೌವರಾಜ್ಯ ಪಟ್ಟಾಭಿಷೇಕಕ್ಕಾಗಿ ಉಪವಾಸಮಾಡಿದನೆಂಬ ವಾರ್ತೆಯನ್ನು ಕೇಳಿ, ಅಯೋಧ್ಯಾಪುರವಾಸಿಗಳಾದ ಜನರೆಲ್ಲರೂ ಅತಿಸಂತೋಷವುಳ್ಳವರಾದರು.

ಅವರು ಬೆಳಗಾಗುತ್ತಿರುವುದನ್ನು ಕಂಡು ಪುರವನ್ನು ಶೃಂಗಾರಮಾಡಿದರು. ಆ ಸಮಯದಲ್ಲಿ ಬಿಳಿಯ ಮೋಡಗಳ ಶೃಂಗಗಳಂತೆ ಕಾಂತಿಯುಳ್ಳ ದೇವಾಲಯಗಳಲ್ಲಿಯೂ ನಾಲ್ಕು ಬೀದಿಗಳು ಸೇರಿರುವ ಸ್ಥಳಗಳಲ್ಲಿಯೂ ರಾಜಬೀದಿಗಳಲ್ಲಿಯೂ ಬೌದ್ಧಾಲಯಗಳಲ್ಲಿಯೂ ಕಾಳಗಕ್ಕೋಸುಗ ಕೋಟೆಯ ಮೇಲ್ಭಾಗದಲ್ಲಿ ಕಟ್ಟಲ್ಪಟ್ಟಿ ಮಂಟಪಗಳಲ್ಲಿಯೂ ನಾನಾಬಗೆಯಾದ ಪದಾರ್ಥಗಳಿಂದ ಸಮೃದ್ಧವಾದ ಮಳಿಗೆಗಳಲ್ಲಿಯೂ ಮಹೇಶ್ವರ್ಯವುಳ್ಳ ಕುಟುಂಬಗಳ ಮಂದಿರಗಳಲ್ಲಿಯೂ ಸಭಾಸ್ಥಾನಗಳಲ್ಲಿಯೂ ಎಲ್ಲ ಕಡೆಯಲ್ಲಿಯೂ ಕಾಣಿಸುತ್ತಿರುವ ಉನ್ನತಗಳಾದ ವೃಕ್ಷಗಳಲ್ಲಿಯೂ ಮತ್ತ್ವಮಕರಾವಿಚಿತಗಳಾದ ದೊಡ್ಡ ಧ್ವಜಗಳನ್ನೂ ಚಿಕ್ಕ ನಿಶಾನಿಗಳನ್ನೂ ಕಟ್ಟಿದರು. ಆ ಪುರವಾಸಿಗಳಾದ ಜನರೆಲ್ಲರೂ ಅಲ್ಲಲ್ಲಿ ನಟ ನರ್ತಕ ಗಾಯಕರು ಮನಸ್ಸಂತೋಷಕರವಾಗಿ ನೃತ್ಯ ಗೀತ ವಾದ್ಯಾದಿಗಳನ್ನು ಪಡೆಯಿಸುತ್ತಿರಲು ಅಂಗಳಗಳಲ್ಲಿಯೂ ಮಂದಿರಗಳಲ್ಲಿಯೂ ಪಟ್ಟಾಭಿಷೇಕಕ್ಕೆ ಸಂಬಂಧಿಸಿದ ಕಥೆಗಳನ್ನು ಹೇಳುತ್ತಿದ್ದರು. ಮತ್ತು ಮನೆಗಳ ಬಾಗಿಲುಗಳಲ್ಲಿ ಆಡುತ್ತಿದ್ದ ಬಾಲಕರೂ ಕೂಡ ರಾಮಾಭಿಷೇಕಕ್ಕೆ ಉಚಿತವಾದ ಕಥೆಗಳನ್ನು ಒಬ್ಬರಿಗೊಬ್ಬರು ಹೇಳುತ್ತಿದ್ದರು. ಆ ವೇಳೆಯಲ್ಲಿ ರಾಜಬೀದಿಯು ಪುಷ್ಪಗಳಿಂದ ಪೂಜಿಸಲ್ಪಟ್ಟಿದ್ದಾಗಿ ಧೂಪಗಳಿಂದಲೂ ಗಂಧಪರಿಮಳದಿಂದಲೂ ಸುಗಂಧವನ್ನು ಬೀರತೊಡಗಿತು. ಶ್ರೀರಾಮನ ಪಟ್ಟಾಭಿಷೇಕ ಮಹೋತ್ಸವವು ಪೂರಿಯಾಗುವುದರೊಳಗಾಗಿ ರಾತ್ರಿಯು ಸಂಭವಿಸಬಹುದೆಂದು ರಾಜಬೀದಿಗಳು ಪ್ರಕಾಶಮಾನವಾಗಿರುವುದಕ್ಕೋಸ್ಕರ ವ್ಯಕ್ಷಾಕಾರವಾದ ದೀಪಸ್ತಂಭಗಳನ್ನು ಅಲ್ಲಲ್ಲಿ ಇಟ್ಟರು. ಆ ಪುರವಾಸಿಗಳೆಲ್ಲರೂ ಈ ಪರಿ ಪಟ್ಟಣಾಲಂಕಾರಮಂಗೈದು ಶ್ರೀರಾಮನ ಯೌವರಾಜ್ಯ ಪಟ್ಟಾಭಿಷೇಕ ಮಹೋತ್ಸವವನ್ನು ನಿರೀಕ್ಷಿಸುತ್ತ ಅಂಗಳಗಳಲ್ಲಿಯೂ ಸಭೆಗಳಲ್ಲಿಯೂ ಗುಂಪಾಗಿ ಸೇರಿ ದಶರಥ ರಾಯನನ್ನು ಪ್ರಶಂಸಿಸುತ್ತಾ ಒಬ್ಬರಿಗೊಬ್ಬರು ಆಹಾ ಎಷ್ಟು ಆಶ್ಚರ್ಯ ರಘುಕುಲವನ್ನು ಸಂತೋಷಗೊಳಿಸುತ್ತಿರುವ ಮಹಾತ್ಮನಾದ ದಶರಥ ನಾಯನು ತನಗೆ ವೃದ್ಧಾಪ್ಯವು ಪ್ರಾಪ್ತವಾಯಿ ತೆಂದರಿತು ಶ್ರೀರಾಮನಿಗೆ ಯೌವರಾಜ್ಯ ಪಟ್ಟಾಭಿಷೇಕವನ್ನು ಮಾಡುತ್ತಾನೆ. ನಮಗೆ ರಘುನಂದನನು ಒಡೆಯನಾಗುವನಾದಕಾರಣ ನಾವು ದೇವತೆಗಳಿಂದ ಅನುಗ್ರಹಿಸಲ್ಪಟ್ಟೆವು. ಮಹಾತ್ಮನಾದ ಶ್ರೀರಾಮನು ಲೋಕದಲ್ಲಿರುವ ಉತ್ತಮವಸ್ತುಗಳನ್ನೂ ಹೇಯವಸ್ತುಗಳನ್ನೂ ಚೆನ್ನಾಗಿ ಅರಿತ ವನಾಗಿಯೂ ಸಹೋದರರಲ್ಲಿ ಹೇಗೆ ಪ್ರೇಮವುಳ್ಳವನೋ ಹಾಗೆಯೇ ನಮ್ಮಲ್ಲಿಯ ಮಹಾ ಪ್ರೇಮ ವುಳ್ಳವನಾಗಿಯೂ ಅಹಂಕಾರಶೂನ್ಯವಾದ ಮನಸ್ಸುಳ್ಳವನಾಗಿಯೂ ತಿಳಿವಳಿಕೆಯುಳ್ಳವನಾಗಿಯೂ ಧರ್ಮಾತ್ಮನಾಗಿಯೂ ಭ್ರಾತೃಸೌಹಾರ್ದವುಳ್ಳವನಾಗಿಯೂ ಇರುವನು.

ಮುಂದುವರಿಯುವುದು...

ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ

ಯುವ ಪೀಳಿಗೆಗೆ ಹೊಸ ಸಂದೇಶ ನೀಡುವ
ನೆನಪುಗಳ ಖಾತೆ



ಉದಯವಾಹಿನಿ ಚಿತ್ರ

ವೃತ್ತಿಯಲ್ಲಿ ಶಿಕ್ಷಕರು, ಪತ್ರಕರ್ತರು, ಸಾಹಿತಿಗಳು, ಅಂಕಣಕಾರರು. ನನ್ನ ಮಗ ವಿಶ್ವಾಸ್ ಪ್ರವೃತ್ತಿಯಲ್ಲಿ ಲೇಖಕರಾಗಿ ಅವರ ನೆನಪುಗಳ ಖಾತೆ ಕೃತಿಯು ಅನೇಕ ಅತ್ಯುತ್ತಮ ಲೇಖನಗಳನ್ನು ಒಳಗೊಂಡಿದೆ. ಪರಿಸರ, ಹಬ್ಬ, ವೈಚಾರಿಕತೆ, ಪ್ರವಾಸೋದ್ಯಮ, ಶಿಕ್ಷಣ, ವ್ಯಕ್ತಿತ್ವ ವಿಕಾಸನ ಕುರಿತು ತುಂಬಾ ಚೆನ್ನಾಗಿ ನಿದರ್ಶನಗಳ ಸಹಿತಕಟ್ಟಿಕೊಟ್ಟಿದ್ದಾರೆ. ಶಿಕ್ಷಕರ ವಿದ್ವತ್ತಿಗೆ ಇಲ್ಲದ ಸಮ್ಮಾನ' ಲೇಖನದಲ್ಲಿ ಶಿಕ್ಷಕರು ಸಮಾಜದ ಅತ್ಯುತ್ತಮ ಜವಾಬ್ದಾರಿ ಯುತ ಮತ್ತು ಪ್ರಮುಖ ಸದಸ್ಯರು, ಜೊತೆಯಲ್ಲಿ ಶಿಕ್ಷಕರ ಪಾತ್ರ ಸಮಾಜ ಬದಲಾವಣೆ ಮಾಡಲು ತುಂಬಾ ಅಗತ್ಯವಾಗಿದೆ. ಶಿಕ್ಷಕರು ವಿದ್ಯಾರ್ಥಿಗಳನ್ನು ತುಂಬಾ ಉತ್ತಮ ಸ್ಥಾನಗಳಲ್ಲಿ ನೋಡಲು ಇಚ್ಛೆ ಪಡುತ್ತಾರೆ. ಅವರ ಭವಿಷ್ಯಗಳನ್ನು ಕಟ್ಟಿಕೊಡಲು ತುಂಬಾ ಶ್ರಮ ಪಡುತ್ತಾರೆ ಎಂಬ ಸಂದೇಶವನ್ನು ಬರೆದಿದ್ದಾರೆ. ಶಿಕ್ಷಕರ ಪಾತ್ರವನ್ನು ಕುರಿತು ತಮ್ಮದೇ ಆದ ಅನಿಸಿಕೆಗಳನ್ನು ಅಚ್ಚುಕಟ್ಟಾಗಿ ಬರೆಯುವುದರ ಮೂಲಕ ಶಿಕ್ಷಕರು ದೇವರಿಗೆ ಸಮ ಎಂಬುದನ್ನು ಲೇಖಕರು ಅತ್ಯುತ್ತಮವಾಗಿಯೇ ವರ್ಣಿಸಿದ್ದಾರೆ.'ಜನ ಸೇವೆಯೇ ಜನಾರ್ದನ ಸೇವೆ' ಎಂದು ನಿಸ್ವಾರ್ಥ ಬದುಕು ಬಾಳಿದ ಶ್ರೀಗಳ ಈ ನುಡಿಗಟ್ಟುಗಳು ಎಲ್ಲಾರಿಗೂ ದಾರಿ ದೀಪವಾಗಲಿ ಎಂಬ ಲೇಖನದಲ್ಲಿ ಸಿದ್ದಗಂಗಾ ಮಠದ ಶಿವಕುಮಾರ ಸ್ವಾಮೀಜಿಗಳು ಹೇಳಿರುವ ಅನೇಕ ಸಂದೇಶಗಳನ್ನು ಹೇಳುವ ಪ್ರಯತ್ನ ಮಾಡಿದ್ದಾರೆ. ಜೊತೆಯಲ್ಲಿ ಅವರ ಸರಳತೆ ಹಾಗೂ ಅವರು ಮಾಡುತ್ತಿರುವ ಸೇವೆಗಳನ್ನು ತಮ್ಮ ಲೇಖನದಲ್ಲಿ ಸುಂದರವಾಗಿ ಚಿತ್ರಿಸಿ ಕೊಟ್ಟಿದ್ದಾರೆ. ಇದರ ಜೊತೆಯಲ್ಲಿ ಅವರು ಮಾಡಿರುವ ಶಿಕ್ಷಣ ಕ್ರಾಂತಿ ಮತ್ತು ದಾಸೋಹದ ಬಗ್ಗೆ ತನ್ನದೇ ಆದ ಪದಗಳಲ್ಲಿ ಲೇಖಕರು ಬರೆಯುವ ಪ್ರಯತ್ನವನ್ನು ಮಾಡಿದ್ದಾರೆ.

ನಮ್ಮೊಳಗಿನ ನಮ್ಮ ಬದಲಾವಣೆ' ಎಂಬ ಲೇಖನದಲ್ಲಿ ಮಾನಸಿಕ. ಮನೋರೋಗ, ಮನಸ್ಸಿನ ಉತ್ಸಾಹ ಹೆಚ್ಚಾಗುವುದು, ಮನಸ್ಸಿನ ಏಕಾಗ್ರತೆ, ವ್ಯಕ್ತಿತ್ವ ವಿಕಾಸನ, ಬೌದ್ಧಿಕ ಸೇರಿದ ಹಾಗೆ ಅನೇಕ ವಿಷಯಗಳ ಬಗ್ಗೆ ವಿಸ್ತಾರವಾಗಿ ಬರೆಯುವ ಪ್ರಯತ್ನದಲ್ಲಿ ಅನೇಕ ಸಂದೇಶಗಳನ್ನು ಈ ಲೇಖನ ಹೇಳುತ್ತದೆ. ಈ ಲೇಖನವೂ ಅನೇಕ ರೀತಿಯಲ್ಲಿ ನಮ್ಮ ದೇಹದ ರೋಗಗಳು ಮತ್ತು ಮಾನಸಿಕ ರೋಗದ ಬಗ್ಗೆ ನಮಗಿರುವ ಆಲೋಚನೆಗಳ ಬಗ್ಗೆ ಹೇಳುತ್ತದೆ. ಇದರಲ್ಲಿ ಯಾವ ರೀತಿ ಮನುಷ್ಯನು ತಮ್ಮ ಮನಸ್ಸನ್ನು ಸ್ವಚ್ಛಂದವಾಗಿ ಇಟ್ಟುಕೊಳ್ಳಬೇಕೆಂಬುದನ್ನು ತುಂಬಾ ಸರಳವಾಗಿ ಲೇಖಕರು ವರ್ಣಿಸಿದ್ದಾರೆ.

ಬಾಳು ಬಂಗಾರ ಲೇಖನದಲ್ಲಿ ಲೇಖಕರು ಮನುಷ್ಯನಿಗೆ ಯಾವ ರೀತಿಯ ಆಹಾರಗಳು ಅಗತ್ಯವಿದೆ. ಯಾವ ಆಹಾರವನ್ನು ನಾವು ಸೇವಿಸಿದರೆ ನಮ್ಮ ಆರೋಗ್ಯ ಹಾಳಾಗದ ರೀತಿಯಲ್ಲಿ ಇರುವುದು ನಾವು ದಿನೇ ದಿನೇ ಮಾಡುತ್ತಿರುವ ಪ್ರಕೃತಿ ನಾಶದಿಂದ ನಮ್ಮ ದೇಹದ ಮೇಲೆ ಯಾವ ರೀತಿ ಪರಿಣಾಮ ಬೀರುತ್ತದೆ ಹಾಗೂ ಹಳೆಯ ಕಾಲದ ಆಹಾರ ಪದ್ಧತಿಯನ್ನು ನಾವು ಅನುಸರಿಸಿದರೆ ನಮ್ಮ ಆರೋಗ್ಯವು ಹೆಚ್ಚಾಗಿ ಸಮೃದ್ಧಿಯಾಗಿರುತ್ತದೆ ಎಂಬುದನ್ನು ವರ್ಣಿಸಿದ್ದಾರೆ. 'ಭಾರತೀಯ ಸಂಪ್ರದಾಯಗಳ ಕಣ್ಣರೆ' ಲೇಖನದಲ್ಲಿ ಭಾರತದಲ್ಲಿ ಆನೇಕ ಸಂಪ್ರದಾಯಗಳ ಬಗ್ಗೆ ಹೇಳಿದ್ದಾರೆ. ಜೊತೆಯಲ್ಲಿ ಈಗಿನ ಯುವ ಪೀಳಿಗೆಯ ಯಾವರೀತಿ ನಮ್ಮ ಸಂಪ್ರದಾಯಗಳನ್ನು ಮರೆಯುತ್ತಿದ್ದಾರೆ, ಸಂಪ್ರದಾಯಗಳನ್ನು ನಾವು ಹೇಗೆ ಉಳಿಸಬೇಕು ಹಾಗೂ ಮುಂದಿನ ಪೀಳಿಗೆಗೆ ಯಾವ ರೀತಿ ಸಂದೇಶ ನೀಡಬೇಕೆಂಬುದನ್ನು ಲೇಖಕರು, ಈ ಲೇಖನದಲ್ಲಿ ಚಿತ್ರಿಸಿದ್ದಾರೆ. 'ಗುರುಭಕ್ತಿ' ಲೇಖನದಲ್ಲಿ ವಿದ್ಯಾರ್ಥಿಗಳು ಯಾವ ರೀತಿಯಲ್ಲಿ ಗುರುವಿಗೆ ಗೌರವ ನೀಡಬೇಕು, ಗುರುವಿಲ್ಲದೆ ಯಾವುದೇ ವಿದ್ಯಾರ್ಥಿ ಗುರಿ ತಲುಪಲು ಆಗುವುದಿಲ್ಲ, ಗುರುಗೆ ನಾವು ಭಕ್ತಿ ಸಲ್ಲಿಸಿದರೆ ನಮ್ಮ ಬಾಳು ಬಂಗಾರವಾಗುತ್ತದೆ. ಗುರುವಿಗೆ ನೋವು ಮಾಡದೆ ಗುರುವಿನ ಹತ್ತಿರ ವಿದ್ಯೆ ಮತ್ತು ಬುದ್ಧಿಯನ್ನು ಪಡೆದು ಉನ್ನತ ಸ್ಥಾನಗಳಿಗೆ ತಲುಪಬೇಕು. ಜೊತೆಯಲ್ಲಿ ವಿದ್ಯಾದಾನ ಮಾಡಿದ ಗುರುವನ್ನು ಎಂದಿಗೂ ಮರೆಯಬಾರದು ಎಂಬುದನ್ನು ಈ ಲೇಖನದಲ್ಲಿ ಹೇಳುವ ಪ್ರಯತ್ನವನ್ನು ಲೇಖಕರು ಮಾಡಿದ್ದಾರೆ. 'ತುಳಸಿಯ ಮಹತ್ವ' ಈ ಲೇಖನದಲ್ಲಿ ಲೇಖಕರು ತುಳಸಿ ಗಿಡದ ಬಗ್ಗೆ ತುಂಬಾ ಸರಳವಾಗಿ ವರ್ಣಿಸಿದ್ದಾರೆ. ತುಳಸಿ ಗಿಡಗಳಿಂದ ಆಗುವ ಉಪಯೋಗಗಳು ಹಾಗೂ ಮನೆಯ ಮುಂದೆ ತುಳಸಿ ಗಿಡವನ್ನು ಏಕೆ ನೀಡಬೇಕು ಎಂಬುದನ್ನು ಈ ಲೇಖನದಲ್ಲಿ ಲೇಖಕರು ಹೇಳಿದ್ದಾರೆ.

ದಾಂಪತ್ಯ ಲೇಖನದಲ್ಲಿ ಇಂದಿನ ದಿನಗಳಲ್ಲಿ ಗಂಡ ಮತ್ತು ಹೆಂಡತಿಯ ನಡುವೆ ನಡೆಯುತ್ತಿರುವ ಜಗಳಗಳು ಹಾಗೂ ದೂರವಾಗುತ್ತಿರುವ ಪ್ರೀತಿಯ ಬಗ್ಗೆ ವರ್ಣಿಸಿದ್ದಾರೆ. ದಾಂಪತ್ಯದಲ್ಲಿ ಎಂದಿಗೂ ಜಗಳಗಳು ನಡೆದರೆ ಬೇಗ ಒಂದಾಗಬೇಕು. ಯಾರೇ ತಪ್ಪು ಮಾಡಿದರೂ ಹೊಂದಿಕೊಂಡು ನಡೆಯ ಬೇಕು. ಜಗಳಗಳು ಕೇವಲ ಕ್ಷಣಿಕವಾಗಬೇಕು ಎಂಬುದನ್ನು ಲೇಖಕರು ಹೇಳಿದ್ದಾರೆ. 'ಕರ್ಮ ಫಲ' ಲೇಖನದಲ್ಲಿ ಕರ್ಮಫಲ ಎಂದಿಗೂ ಮನುಷ್ಯನನ್ನು ಬಿಡುವುದಿಲ್ಲ, ನಾವು ತಪ್ಪು ಮಾಡಿದರೆ ನಮಗೆ ಕರ್ಮ ಎಂಬುದು ಎಂದಿಗೂ ಬಿಡುವುದಿಲ್ಲ, ತಪ್ಪು ಮಾಡುವ ಮುನ್ನ ಸಾವಿರ ಬಾರಿ ಯೋಚನೆ ಮಾಡಬೇಕು. ಮಾಡಿದ ತಪ್ಪು ಅರ್ಥೈಸಿಕೊಂಡು ತೊಂದರೆ ಆದವರ ಹತ್ತಿರ ಕ್ಷಮೆ ಕೇಳಬೇಕು. ಇಲ್ಲದಿದ್ದರೆ ಕರ್ಮ ಎಂಬುದು ನಮ್ಮನ್ನು ಯಾವಾಗಲೂ ಬಿಡುವುದಿಲ್ಲ ಎಂಬುದನ್ನು ಲೇಖಕರು ಈ ಲೇಖನದಲ್ಲಿ ಹೇಳುವ ಪ್ರಯತ್ನವನ್ನು ಮಾಡಿದ್ದಾರೆ. ಹೀಗೆ ಲೇಖಕರು ಈ 'ನೆನಪುಗಳ ಖಾತೆ' ಎಂಬ ಪುಸ್ತಕದಲ್ಲಿ ಸರಿಸುಮಾರು 41 ಲೇಖನಗಳನ್ನು ಬರೆದಿದ್ದಾರೆ. ಎಲ್ಲಾ ಲೇಖನದಲ್ಲೂ ಸಮಾಜದ ಅಂಕುಡೊಂಕುಗಳ ಬಗ್ಗೆ ತುಂಬಾ ಸರಳವಾಗಿ ಮತ್ತು ಸುಂದರವಾಗಿಯೇ ಚಿತ್ರಿಸಿ ಕೊಟ್ಟಿದ್ದಾರೆ. ಈ ಲೇಖನಗಳು ಯುವ ಪೀಳಿಗೆಗಳಿಗೆ

ಮಾರುಕಟ್ಟೆಯಲ್ಲಿ ಕುಸಿದ ಸೋಯಾ, ಅವರೆ ಬೆಲೆ

ನಿತ್ಯ ಕೆಲವರು ಮಾರುಕಟ್ಟೆಗೆ ಹೋಗಿ ಬೆಲೆ ವಿಚಾರಿಸಿಕೊಂಡು ಹೋಗುವುದೇ ಕಾಯಕ, ಇಂದಲ್ಲ, ನಾಳೆ ಸೂಕ್ತ ಬೆಲೆ ಸಿಗಬಹುದು

• ಉದಯವಾಹಿನಿ, ಬೀದರ್

ದಿಢೀರನೆ ಮಾರುಕಟ್ಟೆಯಲ್ಲಿ ಸೋಯಾಬೀನ್ ಬೆಲೆ ಕುಸಿದಿರುವುದರಿಂದ ರೈತರು ಚಿಂತಾಕ್ರಾಂತರಾಗಿದ್ದಾರೆ. ಬಂಪರ್ ಫಸಲು ತೆಗೆದ ರೈತರು ಬೆಲೆ ಇಳಿದಿರುವುದರಿಂದ ಅದನ್ನೇನು ಮಾಡಬೇಕೆಂಬ ಯೋಚನೆಯಲ್ಲಿದ್ದಾರೆ. ನಿತ್ಯ ಕೆಲವರು ಮಾರುಕಟ್ಟೆಗೆ ಹೋಗಿ ಬೆಲೆ ವಿಚಾರಿಸಿಕೊಂಡು ಹೋಗುವುದೇ ಕಾಯಕವಾಗಿದೆ. ಇಂದಲ್ಲ, ನಾಳೆ ಸೂಕ್ತ ಬೆಲೆ ಸಿಗಬಹುದು ಎಂಬ ಲೆಕ್ಕಾಚಾರ ದಿನ ಕಳೆದಂತೆ ಹುಸಿಯಾಗುತ್ತಿದೆ. ಇನ್ನು ಕೆಲವರು ಗಾಂಧಿ ಗಂಜ್‌ಗೆ ವಾಹನಗಳಲ್ಲಿ ಸೋಯಾ ಕಾಳು ತಂದು, ಸುರಿದು ಕೊಂಪೆ ಹಾಕಿದ್ದಾರೆ.

ಸೂಕ್ತ ಬೆಲೆ ಸಿಗುವವರೆಗೆ ಮಾರಾಟ ಮಾಡದಿರಲು ನಿರ್ಧರಿಸಿದ್ದಾರೆ. ಆದರೆ, ಬೇಗನೆ ಮಾರಾಟ ಮಾಡಿ, ಇಲ್ಲವಾದರೆ ಸರಕು ಕೊಂಡೊಯ್ಯಬೇಕು ಎಂದು ವರ್ತಕರು ಒತ್ತಡ ಹೇರುತ್ತಿರುವುದರಿಂದ ಸಮಸ್ಯೆಗೆ ಒಳಗಾಗಿದ್ದಾರೆ. ಕಳೆದ ಕೆಲವು ವರ್ಷಗಳಿಂದ ಬೀದರ್ ಜಿಲ್ಲೆಯಾದ್ಯಂತ ಸೋಯಾಬೀನ್

ಉದಯವಾಹಿನಿ ಚಿತ್ರ

ಹಲವು ಸಲ ಮನವಿ

ಪ್ರಮುಖ ವಾಣಿಜ್ಯ ಬೆಳೆಯಾಗಿ ರೈತರು ಬೆಳೆಯುತ್ತಿದ್ದಾರೆ. 2024ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯಲ್ಲಿ 2.20 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಸೋಯಾ ಅವರೆ ಬೆಳೆದಿದ್ದಾರೆ. ಉತ್ತಮ ಮಳೆಯಾಗಿರುವುದರಿಂದ ಚೆನ್ನಾಗಿ ಇಳುವರಿ ಬಂದಿದೆ.

ಹಲವರು ತಡವಾಗಿ ಬಿತ್ತನೆ ಮಾಡಿರುವುದರಿಂದ ಬೆಳೆ ಕೂಡ ಸಹಜವಾಗಿಯೇ ತಡವಾಗಿ ಕೈಸೇರಿದೆ. ನವೆಂಬರ್‌ನಲ್ಲಿಯೇ ಸರ್ಕಾರ ಬೆಂಬಲ ಬೆಲೆ ಯೋಜನೆಯಡಿ ಸೋಯಾ ಖರೀದಿ ಪ್ರಕ್ರಿಯೆ ಆರಂಭಿಸಿತ್ತು. ಪ್ರತಿ ಕ್ವಿಂಟಲ್‌ಗೆ 4,892 ಬೆಲೆ ನಿಗದಿಪಡಿಸಿತ್ತು. ರೈತರ ಒತ್ತಾಯದ ಮೇರೆಗೆ ಎರಡು ಸಲ ದಿನಾಂಕ ವಿಸ್ತರಿಸಿತ್ತು. ಜನವರಿ 2ರಂದು ಖರೀದಿ ಪ್ರಕ್ರಿಯೆ ಕೊನೆಗೊಂಡಿದೆ. ಹೆಚ್ಚಿನ ರೈತರು ಹೆಸರು ನೋಂದಣಿ ಮಾಡಿಸಿ, ಸೋಯಾ ಮಾರಾಟ ಮಾಡಲು ಸಾಧ್ಯವಾಗುತ್ತಿಲ್ಲ. ತಡವಾಗಿ ಫಸಲು ಕೈ ಸೇರಿದ ರೈತರು ಈಗ ರಾಶಿ ಮಾಡಿ ಮಾರುಕಟ್ಟೆಗೆ ಕಾಳು ತೆಗೆದುಕೊಂಡು ಹೋಗುತ್ತಿದ್ದಾರೆ. ಅಪಾರ ಪ್ರಮಾಣ ದಲ್ಲಿ ಸೋಯಾ ಬರುತ್ತಿರುವುದರಿಂದ ಬೆಲೆ ಕುಸಿತ ಕಂಡಿದೆ. ಸರ್ಕಾರ ನಿಗದಿಪಡಿಸಿದ ಬೆಂಬಲ ಬೆಲೆಗಿಂತ 500ರಿಂದ 600 ಕಡಿಮೆ ಬೆಲೆಗೆ ರೈತರು ವರ್ತಕರಿಗೆ ಕಾಳು ಮಾರಾಟ ಮಾಡುತ್ತಿದ್ದರು. ಈಗ 700ರಿಂದ 1,000ದ ವರೆಗೆ ಬೆಲೆ ಕುಸಿದಿದೆ. ಇದರಿಂದ ಅವರು ಸಂಕಷ್ಟಕ್ಕೆ ಒಳಗಾಗಿದ್ದಾರೆ.

ಎರಡು ದಿನಗಳ ಹಿಂದೆ ಪ್ರತಿ ಕ್ವಿಂಟಲ್ ಸೋಯಾ ಬೀನ್ ಬೆಲೆ 4,200 ಇತ್ತು. ಶನಿವಾರ (ಫೆ.1) ಆ ಬೆಲೆಗೆ ಮಾರಾಟ ಮಾಡಲೆಂದು 100 ಕ್ವಿಂಟಲ್ ಕಾಳು ತೆಗೆದುಕೊಂಡು ಮಾರುಕಟ್ಟೆಗೆ ಹೋಗಿದ್ದೆ. ಆದರೆ, ಪ್ರತಿ ಕ್ವಿಂಟಲ್ ಕಾಳು 3,500ಕ್ಕೆ ಮಾರಾಟವಾಗುತ್ತಿದೆ. ಉತ್ತಮ ಗುಣಮಟ್ಟ ಇರದಿದ್ದರೆ ಇನ್ನೂ ಕಡಿಮೆ ಕೇಳುತ್ತಿದ್ದಾರೆ. ಏನು ಮಾಡಬೇಕು ದಿಕ್ಕು ತೋಚುತ್ತಿಲ್ಲ ಎಂದು ಇಸ್ಲಾಂಪೂರದ ರೈತ ಸಂತೋಷಕುಮಾರ ಎಸ್. ಪಾಟೀಲ ತಿಳಿಸಿದ್ದಾರೆ.

> ಬೆಂಬಲ ಬೆಲೆ ಯೋಜನೆಯಡಿ ಕಾಳು ಖರೀದಿಸುವ ಅಂತಿಮ ದಿನಾಂಕ ಫೆಬ್ರುವರಿ ಮಧ್ಯದ ವರೆಗೆ ವಿಸ್ತರಿಸಬೇಕೆಂದು ಸರ್ಕಾರ ಹಾಗೂ ಸಚಿವರಿಗೆ 'ಎರಡು ದಿನಗಳ ಹಿಂದೆ ಪ್ರತಿ ಕ್ವಿಂಟಲ್ ಸೋಯಾಬೀನ್ ಬೆಲೆ 4,200 ಇತ್ತು. ಆ ಬೆಲೆಗೆ ಮಾರಾಟ ಮಾಡಲೆಂದು 100 ಕ್ವಿಂಟಲ್ ಕಾಳು ತೆಗೆದುಕೊಂಡು ಮಾರುಕಟ್ಟೆಗೆ ಹೋಗಿದ್ದೆ. ಆದರೆ, ಪ್ರತಿ ಕ್ವಿಂಟಲ್ ಕಾಳು 3,500ಕ್ಕೆ ಮಾರಾಟವಾಗುತ್ತಿದೆ. ಉತ್ತಮ ಗುಣಮಟ್ಟ ಇರದಿದ್ದರೆ ಇನ್ನೂ ಕಡಿಮೆ ಕೇಳುತ್ತಿದ್ದಾರೆ. ಏನು ಮಾಡಬೇಕು ದಿಕ್ಕು ತೋಚುತ್ತಿಲ್ಲ
–ಸಂತೋಷಕುಮಾರ ಎಸ್. ಪಾಟೀಲ, ಇಸ್ಲಾಂಪೂರದ ರೈತ

ರೈತರಿಗೆ ನ್ಯಾಯ ಕೊಡಿಸಿ

ಬೆಂಬಲ ಬೆಲೆ ಯೋಜನೆಯಡಿ ಕಾಳು ಖರೀದಿಸುವ ಅಂತಿಮ ದಿನಾಂಕ ಫೆಬ್ರುವರಿ ಮಧ್ಯದವರೆಗೆ ವಿಸ್ತರಿಸಬೇಕೆಂದು ಸರ್ಕಾರ ಹಾಗೂ ಸಚಿವರಿಗೆ ಹಲವು ಸಲ ಮನವಿ ಮಾಡಿದ್ದೇವೆ. ಆದರೆ, ಅವರು ಕಿವಿಗೆ ಹಾಕಿಕೊಂಡಿಲ್ಲ. ಈಗ ರೈತರಿಗೆ ತೊಂದರೆಯಾಗಿದೆ. ರೈತರಿಗೆ ನ್ಯಾಯ ಕೊಡಿಸದಿದ್ದರೆ ಉಸ್ತುವಾರಿ ಸಚಿವರ ಕಚೇರಿಗೆ ಮುತ್ತಿಗೆ ಹಾಕಲಾಗುವುದು ಎಂದು ರೈತರು ಎಚ್ಚರಿಕೆ ನೀಡಿದ್ದಾರೆ.

ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಸಹಾಯಧನ ಬಿಡುಗಡೆಗೆ ಒತ್ತಾಯ

• ಉದಯವಾಹಿನಿ, ರೋಣ

ಬೆಳವಣಕಿ ಗ್ರಾಮದ ಬಸ್ ಸ್ಟ್ಯಾಂಡ್‌ನಲ್ಲಿ ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಫೆಡರೇಷನ್ ಬೆಳವಣಕಿ ವಲಯ ಘಟಕದ ನೇತೃತ್ವದಲ್ಲಿ ಕರ್ನಾಟಕ ರಾಜ್ಯದಲ್ಲಿ ಇರುವ ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಸಹಾಯಧನ ಕೂಡಲೆ ಬಿಡುಗಡೆ ಮಾಡಬೇಕೆಂದು ಕರ್ನಾಟಕ ರಾಜ್ಯ ಉಚ್ಚನ್ಯಾಯಾಲಯ ಐತಿಹಾಸಿಕ ತೀರ್ಪು ನೀಡಿದೆ ಅದಕ್ಕೆ ಕಾರ್ಮಿಕರು ವಿದ್ಯಾರ್ಥಿಗಳು ಅದನ್ನು ಸ್ವಾಗತಿಸಿ ವಿಜೃಂಭಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಫೆಡರೇಷನ್ ರೋಣ ತಾಲ್ಲೂಕ್ ಸಂಚಾಲಕರು ಹನಮಂತ ಮಾದರ ಮಾತನಾಡಿ ಈ ಗೆಲುವಿಗೆ ಕಾರಣರಾದ ರಾಜ್ಯ ಪ್ರಧಾನ ಕಾರ್ಯದರ್ಶಿ ಕಾಮ್ರೇಡ್ ಮಹಾಂತೇಶ್ ಕೆ ಅವರಿಗೆ ಮತ್ತು ರಾಜ್ಯ ಅಧ್ಯಕ್ಷರು ಕಾಮ್ರೆಡ್ ಬಾಲಕೃಷ್ಣ ಶೆಟ್ಟಿ ಅವರಿಗೆ, ವಕೀಲರಾದ ಅಕ್ಷಿತಾ ಗೋಯಲ್, ಆದಿತ್ಯ ಚಟರ್ಜಿ ಅವರಿಗೆ ಕಾರ್ಮಿಕರು, ವಿದ್ಯಾರ್ಥಿಗಳು ರೋಣ ತಾಲ್ಲೂಕ ಸಮಿತಿ ವತಿಯಿಂದ ಅಭಿನಂದನೆ ಸಲ್ಲಿಸುವು ಮೂಲಕ ಕರ್ನಾಟಕ

ಉದಯವಾಹಿನಿ ಚಿತ್ರ

ರಾಜ್ಯ ಹೈಕೋರ್ಟ್ ಐತಿಹಾಸಿಕ ತೀರ್ಪನ್ನು ಸ್ವಾಗತ ಮಾಡುತ್ತೇವೆ ಎಂದು ಮಾತನಾಡಿದರು.

ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾ ಮುಖಂಡರಾದ ಸಂಕಪ್ಪ ಕುರಹಟ್ಟಿ ಅವರು ಮಾತನಾಡಿ 2021 ರಿಂದ 2023 ರ ವರೆಗೆ ಬಾಕಿ ಇರುವ ಕಾರ್ಮಿಕ ಮಕ್ಕಳ ವಿದ್ಯಾರ್ಥಿಗಳ ಸ್ಕಾಲರ್ಶಿಪ್ ಆದಷ್ಟು ಬೇಗನೆ ಬಿಡುಗಡೆ ಮಾಡಿ ಎಂದು ಹೇಳಿ, ರಾಜ್ಯ ಸರ್ಕಾರ ಕಾರ್ಮಿಕರಿಗೆ ವಂಚನೆ ಮಾಡಿದೆ ಶೈಕ್ಷಣಿಕ ಸಹಾಯಧನ ನೀಡದೆ ಸತಾಯಿಸುತ್ತಿದ್ದಾರೆ.

ಇದನ್ನು ವಿರೋಧಿಸಿ ನ್ಯಾಯಾಲಯದ ಮೊರೆ ಹೋಗಿ ದಾವಯನ್ನು ಹೂಡಿ ಇವತ್ತು ಕರ್ನಾಟಕ ಹೈಕೋರ್ಟ್ ಐತಿಹಾಸಿಕ ತೀರ್ಪನ್ನು ನೀಡಿದೆ ಅದಕ್ಕೆ ಕರ್ನಾಟಕ ಪ್ರಾಂತ ರೈತ ಸಂಘ ಸ್ವಾಗತಿಸುತ್ತದೆ ಎಂದು ಹೇಳಿದರು

> ಕರ್ನಾಟಕ ಹೈಕೋರ್ಟ್ ಐತಿಹಾಸಿಕ ತೀರ್ಪು ಕಟ್ಟಡ ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಸಹಾಯಧನ ಕೂಡಲೆ ಬಿಡುಗಡೆ ಮಾಡಿ, ಕಾರ್ಮಿಕರು ಮತ್ತು ವಿದ್ಯಾರ್ಥಿಗಳಿಂದ ಬೆಳವಣಕಿ ಗ್ರಾಮದ ಬಸ್‌ಸ್ಟ್ಯಾಂಡಿನಲ್ಲಿ ವಿಜಯೋತ್ಸವ

ಈ ಸಂದರ್ಭದಲ್ಲಿ ರೈತ ಸಂಘದ ಮುಖಂಡರು ಹನಮಂತ ತಾಳಿ, ಚಾಂದಸಾಬ್ ಕೌಜಗೇರಿ, ಮುಸ್ತಾಕ್ ಯಲಿಗಾರ, ಪ್ರವೀಣ್ ದಾನಿ, ಖಾಜೇಸಾಬ್ ಮುಲ್ಲಾ, ಹುಸೇನ್ ಸಾಬ್ ಮುಲ್ಲಾ, ಶೇಖಪ್ಪ ಬಡಿಗೇರ್, ಮಂಜುನಾಥ ಮಾದರ, ಷಣ್ಮುಖ ಕುರಿ, ಮಹಾಲಿಂಗಪ್ಪ ಬಡಿಗೇರ್, ಬೆಳ್ಳಪ್ಪ ಕಿರಟಗೇರಿ, ದ್ಯಾಮಣ್ಣ ಬಡಿಗೇರ್, ಮಮ್ಮದ್ ಸಾಹೇಬ್ ಮುಲ್ಲಾ, ಭಾಗವಹಿಸಿದ್ದರು.

ಪಾಲಿಕೆ ಬಿಲ್‌ಗೆ ಎಸ್‌ಒಜಿ ಕಾಲೊನಿ ನಿವಾಸಿಗಳ ಅಚ್ಚರಿ

• ಉದಯವಾಹಿನಿ, ದಾವಣಗೆರೆ

ಇಲ್ಲಿನ ಎಸ್‌ಒಜಿ ಕಾಲೊನಿಯಲ್ಲಿ 14 ವರ್ಷಗಳಿಂದ ಬಾಕಿ ಉಳಿಸಿಕೊಂಡಿದ್ದ ನೀರಿನ ಕರವನ್ನು ಮಹಾನಗರ ಪಾಲಿಕೆ ಕಡ್ಡಾಯವಾಗಿ ಪಾವತಿಸುವಂತೆ ಸೂಚಿಸಿದೆ. ಆಶ್ರಯ ಮನೆಗಳಿಗೆ ನೀಡಿದ 32 ಸಾವಿರ ನೀರಿನ ಕಂದಾಯದ ಬಿಲ್ ನೋಡಿ ನಿವಾಸಿಗಳು ಅಚ್ಚರಿಗೊಂಡಿದ್ದಾರೆ. ಮಹಾನಗರ ಪಾಲಿಕೆಯ 31ನೇ ವಾರ್ಡ್ ವ್ಯಾಪ್ತಿಯ ಎಸ್‌ಒಜಿ ಕಾಲೊನಿಯಲ್ಲಿ ಅಂದಾಜು 2 ಸಾವಿರ ಆಶ್ರಯ ಮನೆಗಳಿವೆ. ಕೆ.ಶಿವರಾಂ ಅವರು ಜಿಲ್ಲಾಧಿಕಾರಿಯಾಗಿದ್ದ ಸಂದರ್ಭದಲ್ಲಿ ಹಂಚಿಕೆಯಾದ ಈ ಮನೆಗಳಲ್ಲಿ ಹೆಚ್ಚಾಗಿ ಆಟೊ ಚಾಲಕರು, ಕೂಲಿ ಕಾರ್ಮಿಕರು ವಾಸಿಸುತ್ತಿದ್ದಾರೆ, 2011ರಿಂದ ಮಹಾನಗರ ಪಾಲಿಕೆಗೆ ನೀರಿನ ಕರವನ್ನು ಪಾವತಿಸಿಲ್ಲ. ಜನವರಿ ಕೊನೆಯ ವಾರದಲ್ಲಿ ಭೇಟಿ ನೀಡಿದ ಮಹಾನಗರ ಪಾಲಿಕೆಯ ಸಿಬ್ಬಂದಿ ಪ್ರತಿ ಮನೆಗೆ 32,760 ಮೊತ್ತದ ಬಿಲ್ ವಿತರಿಸಿದ್ದಾರೆ. 2011ರಿಂದ ಬಾಕಿ ಉಳಿಸಿಕೊಂಡಿರುವ ಕರವನ್ನು ದಂಡ ಸಹಿತ ಪಾವತಿಸುವಂತೆ ತಾಕೀತು ಮಾಡಿದ್ದಾರೆ. ಪಾಲಿಕೆಯ ಈ ನಡೆಯಿಂದ ಸ್ಥಳೀಯರು ಆಕ್ರೋಶಗೊಂಡಿದ್ದಾರೆ. 'ಆಶ್ರಯ ಮನೆಗಳಲ್ಲಿ ವಾಸವಾಗಿರುವ ಬಹುತೇಕರು ಬಡವರು. ಕೂಲಿ ಕೆಲಸ ಮಾಡಿಕೊಂಡು ಬದುಕು ನಡೆಸುತ್ತಿದ್ದೇವೆ. ಹಳೆ ಬಾಕಿ ಪಾವತಿಸುವಷ್ಟು ಆರ್ಥಿಕವಾಗಿ ಸಶಕ್ತರಾಗಿಲ್ಲ. ಇಷ್ಟು ವರ್ಷ ಕಂದಾಯ ಪಾವತಿಸುವಂತೆ ಮಹಾನಗರ ಪಾಲಿಕೆ ಒಮ್ಮೆಯೂ ಬಿಲ್ ನೀಡಿಲ್ಲ. ಏಕಾಏಕಿ ಹತ್ತಾರು ಸಾವಿರ ಮೊತ್ತದ ಬಿಲ್ ನೀಡಿದರೆ ಕಟ್ಟುವುದಾದರೂ ಹೇಗೆ ಎಂದು ಪ್ರಶ್ನಿಸುತ್ತಾರೆ ಎಸ್‌ಒಜಿ ಕಾಲೊನಿ ನಿವಾಸಿ ತಿಮ್ಮಣ್ಣ. 2011ರಲ್ಲಿ ನೀರಿನ ಕರ ಪಾವತಿಸುವಂತೆ ಮಹಾನಗರ ಪಾಲಿಕೆ ಮೊದಲ ಬಾರಿಗೆ ಸೂಚನೆ ನೀಡಿತ್ತು. ಈ ವೇಳೆ ಮಧ್ಯ ಪ್ರವೇಶ ಮಾಡಿದ ಜನಪ್ರತಿನಿಧಿಗಳು ಕರ ಪಾವತಿ ಮಾಡದಂತೆ ಜನರಿಗೆ ಸಲಹೆ ನೀಡಿದರು. ಬಡವರಿಗೆ ನೀರಿನ ಕಂದಾಯದಲ್ಲಿ ವಿನಾಯಿತಿ ಕೊಡಿಸುವ ಆಶ್ವಾಸನೆ, ಹಳೆಯ ಕಂದಾಯ ಮನ್ನಾ ಮಾಡಿಸುವ ಭರವಸೆ ಕೊಟ್ಟಿದ್ದರು. ಕರ, ದಂಡದ ಮೊತ್ತ ಸೇರಿ ಪ್ರತಿ ಮನೆಗೆ 32,760 ಪಾವತಿಸುವಂತೆ ಸೂಚಿಸಿದೆ. ಇಲ್ಲವಾದರೆ ನೀರಿನ ಸಂಪರ್ಕ ಕಡಿತ ಗೊಳಿಸುವ ಎಚ್ಚರಿಕೆ ನೀಡಿದೆ.



ಅಂಜನಾದ್ರಿ ಬೆಟ್ಟ: ಕೋಟಿ ಕೋಟಿ ಆದಾಯ ಬಂದರೂ ಸೌಲಭ್ಯಕ್ಕೆ ಬರ

• ಉದಯವಾಹಿನಿ, ಗಂಗಾವತಿ

ಪ್ರತಿ ವರ್ಷ ಕೋಟ್ಯಂತರ ಜನ ಭೇಟಿ ನೀಡುವ, ಕೋಟ್ಯಂತರ ರೂಪಾಯಿ ಭಕ್ತರಿಂದಲೇ ಆದಾಯಗಳಿಸುವ ಅಂಜನಾದ್ರಿ ಬೆಟ್ಟ ಏರುವ ಮಾರ್ಗದಲ್ಲಿ ಅಲ್ಲಲ್ಲಿ ಕುಡಿಯುವ ನೀರಿನ ಕೇಂದ್ರಗಳು ಇದ್ದಿದ್ದರೆ, ಪ್ರಾಥಮಿಕ ಚಿಕಿತ್ಸೆಗೆ ಅವಕಾಶವಿದ್ದರೆ ನನ್ನ ಮಗ ಬದುಕಿರುತ್ತಿದ್ದ.

ಇಷ್ಟೂ ಕನಿಷ್ಠ ಸೌಲಭ್ಯಗಳು ಇಲ್ಲವೆಂದರೆ ಇನ್ನೆಷ್ಟು ಜೀವಗಳು ಬೆಟ್ಟದಲ್ಲಿ ಬಲಿಯಾಗಬೇಕು

ಇದು ಇಲ್ಲಿನ ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯಲ್ಲಿ ವಾಲಿಬಾಲ್ ಕೋಚ್ ಆಗಿರುವ ಸುರೇಶ್ ಯಾದವ್ ಅವರ ಪ್ರಶ್ನೆ ಸುರೇಶ್ ಅವರ 17 ವರ್ಷದ ಪುತ್ರ ಜಯೇಶ ಯಾದವ್ ಇತ್ತೀಚೆಗೆ ಬೆಟ್ಟ ಏರುವಾಗ ಹೃದಯ ಸ್ಥಂಭನವಾಗಿ ಮೃತಪಟ್ಟಿದ್ದರು. ಮಗನನ್ನು ನೆನಪಿಸಿಕೊಂಡು ಕಣ್ಣೀರಿಟ್ಟ ಅವರು 'ನನ್ನ ಮಗನಿಗೆ ಆದ ಅನ್ಯಾಯ ಯಾರಿಗೂ ಆಗಬಾರದು. ಬೆಟ್ಟ ಏರುವ ಮಾರ್ಗದಲ್ಲಿ ಮೂಲ ಸೌಲಭ್ಯ ಕಲ್ಪಿಸಬೇಕು. ಬೆಟ್ಟದ ಕೆಳ ಭಾಗದಲ್ಲಿಯೇ ಅಂಬುಲೆನ್ಸ್, ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಾಪಿಸಬೇಕು. ಮುಂಬರುವ ದಿನಗಳಲ್ಲಿ ಬಿಸಿಲು ಇನ್ನಷ್ಟು ಹೆಚ್ಚಾಗಲಿದ್ದು ದುರ್ಘಟನೆಗಳು ನಡೆದ ಮೇಲೆ ಎಚ್ಚೆತ್ತುಕೊಳ್ಳುವ ಬದಲು ಈಗಲೇ

ಉದಯವಾಹಿನಿ ಚಿತ್ರ

ಜಾಗೃತ ರಾಗಬೇಕು ಎಂದು ಮನವಿ ಮಾಡಿದರು. ಇದೊಂದು ಉದಾಹರಣೆಯಷ್ಟೇ ಬೆಟ್ಟ ಏರುವಾಗ ಹೃದಯಾಘಾತ ಹೃದಯಸ್ತಂಬನ ಹೀಗೆ ಒಂದಿಲ್ಲೊಂದು ಆರೋಗ್ಯ ಸಂಬಂಧಿತ ಸಮಸ್ಯೆಯಿಂದ ಉಸಿರು ಚೆಲ್ಲಿದವರು ಸಾಕಷ್ಟು ಜನರಿದ್ದಾರೆ.

2023ರಲ್ಲಿ ಕಲಘಟಗಿ ತಾಲ್ಲೂಕಿನ ಕೊಟ್ರೇಶ, ಲಕ್ಕುಂಡಿ ಗ್ರಾಮದ ಕಾರ್ತಿಕಗೌಡ ಶೇಖರಗೌಡ, 2024ರಲ್ಲಿ ರಾಜಸ್ಥಾನದ ಬಾಗಚಾಂದ್ ಟಾಕ್ ಹೀಗೆ ಅನೇಕರ ಸಾವಿನ ಪಟ್ಟಿಯೇ ಇದೆ. ಕೆಲವು ದಿನಗಳ ಹಿಂದೆಯಷ್ಟೇ ಬೆಟ್ಟದ ಮೇಲಿಂದ ಮಹಿಳೆ ಕಂದಕಕ್ಕೆ ಬಿದ್ದಿದ್ದಳು. ಆಂಜನಾದ್ರಿ ಈಗ ಸ್ಥಳೀಯ ಧಾರ್ಮಿಕ ತಾಣವಷ್ಟೇ ಅಲ್ಲ. ದೇಶ ಹಾಗೂ ವಿದೇಶಗಳಿಂದ ಕೋಟ್ಯಂತರ ಜನ ಬರುತ್ತಾರೆ. ಪ್ರತಿ ಶನಿವಾರ, ಭಾನುವಾರ, ಹಬ್ಬ, ಅಮವಾಸ್ಯೆ ಹುಣ್ಣಿಮೆ, ಹನುಮ ಜಯಂತಿ, ಹನುಮಮಾಲಾ ವಿಸರ್ಜನೆ ಹೀಗೆ ವಿಶೇಷ ದಿನಗಳಿಂದು ಜನಸಂದಣಿ ಇರುತ್ತದೆ. ಭಕ್ತರು ಬೆಟ್ಟದ ಮೆಟ್ಟಿಲುಗಳ ಮೇಲೆ ಒಂದೊಂದು ಹೆಜ್ಜೆ ಕಿತ್ತಿಡಲೂ ಪರದಾಡುವ ಸ್ಥಿತಿ ಇರುತ್ತದೆ.

ಜನಸಂದಣಿ ವೇಳೆ ದುರ್ಘಟನೆ ಸಂಭವಿಸಿದರೆ ಪ್ರಾಥಮಿಕ ಚಿಕಿತ್ಸೆಗೆ ಅಂಜನಾದ್ರಿ ಸಮೀಪದಲ್ಲಿಯೇ ಚಿಕಿತ್ಸಾ ಕೇಂದ್ರಗಳಿಲ್ಲ. ಹೃದಯಕ್ಕೆ ಸಂಬಂಧಿಸಿದ ಅನಾರೋಗ್ಯ ಸಮಸ್ಯೆಗಳಲ್ಲಿ ಒಂದು ಗಂಟೆಯ 'ಗೋಲ್ಡನ್ ಅವರ್'ನಲ್ಲಿ ಚಿಕಿತ್ಸೆ ಪಡೆದರೆ ಜೀವ ಉಳಿಸಿಕೊಳ್ಳಲು ಅವಕಾಶವಿರುತ್ತದೆ. ಅಂಥ ಸೌಲಭ್ಯಗಳು ಇಲ್ಲದಿರುವುದು ಭಕ್ತರನ್ನು ಆತಂಕಕ್ಕೆ ದೂಡಿದೆ.

ಅರಬ್ಬಿ ಸಮುದ್ರದಲ್ಲಿ ಅಣಕು ಪ್ರದರ್ಶನ

• ಉದಯವಾಹಿನಿ, ಮಂಗಳೂರು

ಹಡಗು ಮುಳುಗುವುದು ಖಚಿತವಾದರೆ ಒಳಗಿದ್ದವರು ಬದುಕಿ ಉಳಿಯುವುದು ಹೇಗೆ, ದೋಣಿಯಿಂದಲೋ, ಹಡಗಿನಿಂದಲೋ ಸಮುದ್ರಕ್ಕೆ ಬಿದ್ದ ವ್ಯಕ್ತಿಯನ್ನು ಹೆಲಿಕಾಪ್ಟರ್ ಮೂಲಕ ರಕ್ಷಿಸುವುದು ಹೇಗೆ, ಸಮುದ್ರದ ಮೂಲಕ ದೇಶದ ಗಡಿಯೊಳಗೆ ಪ್ರವೇಶಿಸುವ ಶತ್ರುಗಳ ಹಡಗು ಅಥವಾ ದೋಣಿಯನ್ನು ಹಿಮ್ಮೆಟ್ಟಿಸುವುದು ಸುಲಭವೇ...ಭಾರತೀಯ ಕೋಸ್ಟ್ ಗಾರ್ಡ್ ದಿನಾಚರಣೆ ಅಂಗವಾಗಿ ಪಣಂಬೂರಿನ ನವ ಮಂಗಳೂರು ಬಂದರು ಪ್ರಾಧಿಕಾರದ (ಎನ್‌ಎಂಪಿಎ) ಶಿಪ್ ಯಾರ್ಡ್‌ನಿಂದ ಸುಮಾರು 20 ನಾಟಿಕಲ್ ಮೈಲು ದೂರದಲ್ಲಿ ನಡೆದ ಅಣಕು ಕಾರ್ಯಾಚರಣೆಯಲ್ಲಿ ಈ ಎಲ್ಲಾ ಕುತೂಹಲಗಳಿಗೆ ಪ್ರಾತ್ಯಕ್ಷಿಕೆ ಮೂಲಕ ಕೋಸ್ಟ್ ಗಾರ್ಡ್ ಸಿಬ್ಬಂದಿ ಉತ್ತರಿಸಿದರು.

ಕೋಸ್ಟ್ ಗಾರ್ಡ್ ಸೇರಿದ 'ವರಾಹ' ಹಾಗೂ ಕೊಚ್ಚಿಯಿಂದ ಹೆಲಿಕಾಪ್ಟರ್ 'ಚೇತಕ್' ಅನ್ನು ಹೊತ್ತುಕೊಂಡು ಮಂಗಳೂರಿಗೆ ಬಂದಿದ್ದ 'ಸಕ್ಷಮ್' ಹಡಗುಗಳ ಜೊತೆಗೆ, ಇವುಗಳಿಗಿಂತ ಹೆಚ್ಚು ವೇಗದಲ್ಲಿ ಓಡಬಲ್ಲ, ಗಾತ್ರದಲ್ಲಿ ಸ್ವಲ್ಪ ಕಿರಿದಾ ಅಮರ್ತ್ಯ, ರಾಜದೂತ್ ಹಾಗೂ ಕಾರವಾರ ಬಂದರಿನಿಂದ ಬಂದಿದ್ದ 'ಸಾವಿತ್ರಿಬಾಯಿ ಫುಲೆ' ಹಡಗುಗಳು ಕಾರ್ಯಾಚರಣೆಯಲ್ಲಿ ಭಾಗಿಯಾಗಿದ್ದವು. ಭಾರತೀಯ ಕೋಸ್ಟ್ ಗಾರ್ಡ್ ದಿನಾಚರಣೆ ಅಂಗವಾಗಿ ಪಣಂಬೂರಿನ

ಉದಯವಾಹಿನಿ ಚಿತ್ರ

ನವ ಮಂಗಳೂರು ಬಂದರು ಪ್ರಾಧಿಕಾರದ ಶಿಪ್ ಯಾರ್ಡ್‌ನಿಂದ ಸುಮಾರು 20 ನಾಟಿಕಲ್ ಮೈಲು ದೂರದಲ್ಲಿ ಭಾನುವಾರ ನಡೆದ ಅಣಕು ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದ ಹಡಗುಗಳು ಒಂದರ ಹಿಂದೆ ಒಂದರಂತೆ ಬಂದ ಇಂಟರ್‌ಸೆಪ್ಟರ್‌ಗಳು ಕೆಲವೆಡೆ ಒಂದೇ ಜಾಗದಲ್ಲಿ ಸುತ್ತಾಡುತ್ತಾ ನಿಂತಿದ್ದು ಐಸಿಜಿಎಸ್ ವರಾಹದ ಸುತ್ತ, ಸುತ್ತ ಓಡಾಡುತ್ತಾ, ಕೆಲವೊಮ್ಮೆ ಹಡಗಿನ ಸನಿಹಕ್ಕೆ ಬಂದು ನಿಲ್ಲುತ್

ದಿನ ಭವಿಷ್ಯ

ರಾಹುಕಾಲ	ಮಧ್ಯಾಹ್ನ	03:00 ರಿಂದ 04:30
ಗುಳಿಕ ಕಾಲ	ಬೆಳಿಗ್ಗೆ	12:00 ರಿಂದ 01:30
ಯಮಗಂಡ ಕಾಲ	ಬೆಳಿಗ್ಗೆ	09:00 ರಿಂದ 10:30

ಮೇಷ – ನಿಮ್ಮ ಆರೋಗ್ಯದ ಬಗ್ಗೆ ಎಚ್ಚರ ವಹಿಸಿ. ನೀವು ನಿಮ್ಮ ಸ್ನೇಹಿತರೊಂದಿಗೆ ಎಲ್ಲಿಗಾದರೂ ಸುತ್ತಾಡಲು ಹೋಗುತ್ತಿದ್ದರೆ, ಹಣವನ್ನು ಚೆನ್ನಾಗಿ ಯೋಚಿಸಿ ಖರ್ಚು ಮಾಡಿ. ಹಣದ ನಷ್ಟವಾಗಬಹುದು. ಕುಟುಂಬದ ಜೊತೆಗೆ ಸಾಮಾಜಿಕ ಚಟುವಟಿಕೆಗಳು ತುಂಬ ಸಂತೋಷಕರವಾಗಿರುತ್ತವೆ.

ವೃಷಭ – ಆಧ್ಯಾತ್ಮಿಕ ಜೀವನದ ಪೂರ್ವಾಪೇಕ್ಷಿತವಾಗಿರುವಂತಹ ನಿಮ್ಮ ಮಾನಸಿಕ ಆರೋಗ್ಯವನ್ನು ಕಾಯ್ದುಕೊಳ್ಳಿ. ಒಳ್ಳೆಯದೂ ಹಾಗೂ ಕೆಟ್ಟದೆಲ್ಲವೂ ಮನಸ್ಸಿನ ಮೂಲಕವೇ ಬರುವುದರಿಂದ ಬುದ್ಧಿಜೀವನದ ಹೆಬ್ಬಾಗಿಲಾಗಿದೆ. ಇದು ಜೀವನದ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಸಹಾಯ ಮಾಡುತ್ತದೆ.

ಮಿಥುನ – ಧ್ಯಾನ, ಯೋಗ ಆಧ್ಯಾತ್ಮಿಕ, ಭೌತಿಕ ಲಾಭಗಳೆರಡಕ್ಕೂ ಪ್ರಯೋಜನಕಾರಿಯಾಗುತ್ತದೆ. ಇಂದು ನೀವು ಒಳ್ಳೆಯ ಹಣ ಮಾಡುತ್ತೀರಿ – ಆದರೆ ವೆಚ್ಚಗಳಲ್ಲಿ ನಿಮಗೆ ಉಳಿಸಲು ಕಷ್ಟವಾಗಿಸುತ್ತದೆ. ನೀವು ಎಲ್ಲರ ಬೇಡಿಕೆಗಳನ್ನೂ ಪೂರೈಸಲು ಪ್ರಯತ್ನಿಸಿದಲ್ಲಿ ವಿವಿಧ ದಿಕ್ಕುಗಳಲ್ಲಿ ಹರಿದು ಹೋಗುತ್ತೀರಿ.

ಕರ್ಕಾಟಕ – ಸ್ನೇಹಿತನ ಜೊತೆಗಿನ ನಿಮ್ಮ ಅಪಾರ್ಥ ಕೆಲವು ಅಹಿತಕರ ಪ್ರತಿಕ್ರಿಯೆಗಳನ್ನು ಉಂಟುಮಾಡಬಹುದು – ಯಾವುದೇ ನಿರ್ಧಾರ ಕೈಗೊಳ್ಳುವ ಮೊದಲು ಸಮತೋಲಿತ ನೋಟ ಹೊಂದಿ. ಇಂದು ನೀವು ನಿಮ್ಮ ಮನೆಯ ಹಿರಿಯ ಜನರಿಂದ ಹಣವನ್ನು ಉಳಿಸುವ ಬಗ್ಗೆ ಯಾವುದೇ ಸಲಹೆಯನ್ನು ತೆಗೆದುಕೊಳ್ಳಬಹುದು.

ಸಿಂಹ – ಹೊರಾಂಗಣ ಚಟುವಟಿಕೆಗಳು ನಿಮಗೆ ಉಪಯುಕ್ತವಾಗುತ್ತವೆ. ಕೋಟೆಯೊಳಗಿನ ಜೀವನ ಶೈಲಿ ಮತ್ತು ಯಾವಾಗಲೂ ಭದ್ರತೆಯ ಬಗ್ಗೆ ಯೋಚಿಸುವುದು ನಿಮ್ಮ ದೈಹಿಕ ಹಾಗೂ ನಿಮ್ಮ ಮಾನಸಿಕ ಬೆಳವಣಿಗೆಯನ್ನು ಕುಂಠಿತಗೊಳಿಸುತ್ತವೆ. ಇದು ನಿಮ್ಮನ್ನು ಒಬ್ಬ ಗಾಬರಿಯ ವ್ಯಕ್ತಿಯನ್ನಾಗಿಯೂ ಮಾಡುತ್ತದೆ.

ಕನ್ಯಾ – ಗಾಯಗೊಳ್ಳುವುದನ್ನು ತಪ್ಪಿಸಲು ಕುಳಿತುಕೊಳ್ಳುವಾಗ ವಿಶೇಷ ಕಾಳಜಿ ವಹಿಸಿ. ಅಲ್ಲದೇ ಒಳ್ಳೆಯ ನಿಲುವು ಕೇವಲ ನಿಮ್ಮ ವ್ಯಕ್ತಿತ್ವವನ್ನು ವುದ್ಧಿಸುವುದಷ್ಟೇ ಅಲ್ಲದೇ ಆರೋಗ್ಯ ಮತ್ತು ವಿಶ್ವಾಸಾರ್ಹತೆಯನ್ನು ಅಭಿವೃದ್ಧಿಪಡಿಸುವಲ್ಲೂ ಪ್ರಮುಖ ಪಾತ್ರ ವಹಿಸುತ್ತದೆ.

ತುಲಾ – ನಿಮ್ಮ ದಯಾಳು ಪ್ರಕೃತಿ ಇಂದು ಅನೇಕ ಸಂತೋಷದ ಕ್ಷಣಗಳನ್ನು ತರುತ್ತದೆ. ಯಾರ ಹತ್ತಿರವಾದರು ಸಾಲವನ್ನು ತೆಗೆದುಕೊಂಡಿರುವ ಜನರು, ಇಂದು ಯಾವುದೇ ಪರಿಸ್ಥಿತಿಯಲ್ಲೂ ಸಾಲವನ್ನು ಮರುಪಾವತಿಸಬೇಕಾಗುತ್ತದೆ, ಇದರಿಂದ ಆರ್ಥಿಕ ಪರಿಸ್ಥಿತಿ ಸ್ವಲ್ಪ ದುರ್ಬಲವಾಗುತ್ತದೆ.

ವೃಶ್ಚಿಕ – ನಿಮ್ಮ ದಯಾಳು ಪ್ರಕೃತಿ ಇಂದು ಅನೇಕ ಸಂತೋಷದ ಕ್ಷಣಗಳನ್ನು ತರುತ್ತದೆ. ಇಂದು ಯಾವುದೇ ವಿರುದ್ಧ ಲಿಂಗದ ಸಹಾಯದಿಂದ ನೀವು ವ್ಯಾಪರ ಅಥವಾ ಉದ್ಯೋಗದಲ್ಲಿ ಆರ್ಥಿಕ ಲಾಭವನ್ನು ಪಡೆಯುವ ಸಾಧ್ಯತೆ ಇದೆ. ನಿಮ್ಮ ಹೆತ್ತವರ ಆರೋಗ್ಯದ ಬಗೆಗೆ ಹೆಚ್ಚುವರಿ ಗಮನ ಮತ್ತು ಎಚ್ಚರಿಕೆ ಅಗತ್ಯವಿದೆ.

ಧನಸ್ಸು – ತುಂಬಾ ಉತ್ಸಾಹ ಮತ್ತು ಸ್ಫೋಟಕ ಭಾವೋದ್ರೇಕಗಳು ನಿಮ್ಮ ನರಮಂಡಲಕ್ಕೆ ಹಾನಿ ಮಾಡಬಹುದು. ಇದನ್ನು ತಪ್ಪಿಸಲು ನಿಮ್ಮ ಭಾವನೆಗಳನ್ನು ನಿಯಂತ್ರಿಸಿ. ಹೆಚ್ಚುವರಿ ಹಣವನ್ನು ರಿಯಲ್ ಎಸ್ಟೇಟ್‌ನಲ್ಲಿ ಹೂಡಿಕೆ ಮಾಡಬೇಕು. ಒಬ್ಬ ಸುಂದರ ನಗುವಿನಿಂದ ನಿಮ್ಮ ಪ್ರೇಮಿಯ ದಿನವನ್ನು ಪ್ರಕಾಶಮಾನವಾಗಿಸಿ.

ಮಕರ – ನಿಮ್ಮ ಆಹಾರ ಕ್ರಮದ ಬಗ್ಗೆ ವಿಶೇಷವಾಗಿ ಮೈಗ್ರೇನ್ ರೋಗಿಗಳು ಸೂಕ್ತ ಎಚ್ಚರ ತೆಗೆದುಕೊಳ್ಳಬೇಕು. ಅವರು ತಮ್ಮ ಊಟ ತಪ್ಪಿಸಿಕೊಂಡಲ್ಲಿ ಅದು ಅವರಿಗೆ ಅನಗತ್ಯ ಭಾವನಾತ್ಮಕ ಒತ್ತಡವನ್ನು ಉಂಟುಮಾಡಬಹುದು. ಇಂದು ನೀವು ಭೂಮಿ, ವಸತಿ, ಸಾಂಸ್ಕೃತಿಕ ಯೋಜನೆಗಳಿಗೆ ಸಂಬಂಧಿಸಿದ ಸಮಸ್ಯೆಗಳಿಗೆ ಗಮನ ನೀಡಬೇಕು.

ಕುಂಭ – ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ. ಬುದ್ಧಿವಂತಿಕೆಯಿಂದ ಹೂಡಿಕೆ ಮಾಡಿ. ಗುಂಪಿನಲ್ಲಿದ್ದಾಗ ನೀವೇನು ಹೇಳುತ್ತೀರೆಂದು ಎಚ್ಚರ ವಹಿಸಿ–ನಿಮ್ಮ ಹರಾತ್ ಟೀಕೆಗಳಿಗೆ ನೀವು ತೀವ್ರವಾಗಿ ಟೀಕೆ ಎದುರಿಸಬೇಕಾಗಬಹುದು.

ಮೀನ – ನೀವು ಅಭಿಪ್ರಾಯ ನೀಡುವಾಗ ಇತರರ ಭಾವನೆಗಳನ್ನು ವಿಶೇಷವಾಗಿ ಪರಿಗಣಿಸಿ. ನೀವು ಮಾಡಿದ ಯಾವುದೇ ತಪ್ಪು ನಿರ್ಧಾರ ಅವರಿಗೆ ಮಾತ್ರ ವ್ಯತಿರಿಕ್ತ ಪರಿಣಾಮ ಉಂಟುಮಾಡದೇ ನಿಮಗೂ ಮಾನಸಿಕ ಒತ್ತಡ ನೀಡುತ್ತದೆ. ಇಂದು ನೀವು ಸ್ನೇಹಿತರೊಂದಿಗೆ ಪಾರ್ಟಿಯಲ್ಲಿ ಸಾಕಷ್ಟು ಹಣವನ್ನು ಖರ್ಚು ಮಾಡಬಹುದು.

ಎರೆಹುಳು ತರಬೇತಿ ಇಂದು

• ಉದಯವಾಹಿನಿ, ಇಂಡಿ

ತಾಲ್ಲೂಕಿನ ರೈತ ಬಾಂಧವರಿಗೆ ಎರೆಹುಳು ಗೊಬ್ಬರ ತಯಾರಿಸುವ ಮಾಹಿತಿ ಕುರಿತು ಪಟ್ಟಣದ ಸ್ಟೇಷನ್ ರಸ್ತೆಯಲ್ಲಿರುವ ಕೃಷಿ ಉಪ ನಿರ್ದೇಶಕರ ಕಚೇರಿಯ ಸಬಾ ಭವನದಲ್ಲಿ ಬೆಳಗ್ಗೆ 11 ಗಂಟೆಗೆ ಫೆ 4 ರಂದು ತರಬೇತಿ ನೀಡಲಾಗುವದು ಎಂದು ಕೃಷಿ ಉಪ ನಿರ್ದೇರ್ಶಕ ಚಂದ್ರಕಾಂತ ಪವಾರ ತಿಳಿಸಿದ್ದಾರೆ.

ಎರೆಹುಳು ಬೆಳೆಯುವ ವಿಧಾನ, ಅದಕ್ಕೆ ಬೇಕಾಗುವ ಜಾಗದ ವಿಸ್ತೀರ್ಣದ ಮಾಹಿತಿ, ಮತ್ತು ಎರೆಹುಳು ಸಿಗುವ ಮಾಹಿತಿ ಮತ್ತು ಬೇಕಾಗುವ ಪದಾರ್ಥಗಳ ಜೊತೆಗೆ ಸರಕಾರದಿಂದ ಸವಲತ್ತುಗಳ ಕುರಿತು ಮಾಹಿತಿ ನೀಡಲಾಗುವದು ಎಂದು ಪವಾರ ತಿಳಿಸಿದ್ದಾರೆ. ಕೇವಲ ಮೂವತ್ತು ಜನ ರೈತರಿಗೆ ಮಾತ್ರ ಪ್ರವೇಶವಿದೆ. ಪ್ರಾತ್ಯಕ್ಷಿಕೆ ಮೂಲಕ ರೈತರಿಗೆ ಮಾಹಿತಿ ನೀಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ 08359 225080 ಸಂಪರ್ಕಿಸಲು ಕೋರಿದ್ದಾರೆ.

ಕಿಡಿಗೇಡಿಗಳಿಂದ ಮರೇಮ್ಮ ಮೂರ್ತಿ ಭಗ್ನ

• ಉದಯವಾಹಿನಿ, ವಡಗೇರಾ

ಉದಯವಾಹಿನಿ ಚಿತ್ರ

ಯಾದಗಿರಿ ಮಠಕ್ಷೇತ್ರದ ವ್ಯಾಪ್ತಿಯ ಖಾನಾಪುರ ಗ್ರಾಮದ ತಡಿಬಿಡಿ ಹತ್ತಿಗೂಡುರ ಮುಖ್ಯ ರಸ್ತೆಗೆ ಹೊಂದಿಕೊಂಡಿರುವ ಹೊರ ವಲಯದಲ್ಲಿರುವ ಸೀಮಿ ಮರೇಮ್ಮ ದೇವಿಯ ಮೂರ್ತಿಯನ್ನು ಯಾರೂ ಕಿಡಿಗೇಡಿಗಳು ಬೆಂಕಿ ಹಚ್ಚಿ ಸುಟ್ಟು ಮೂರ್ತಿಯನ್ನು ಹೊರಗಡೆ ಎಲ್ಲೆಂದರಲ್ಲಿ ಚೆಲ್ಲಾಪಿಲ್ಲಿಯಾಗಿ ಬಿಸಾಡಿ ಹೋಗಿ ಭಕ್ತರ ಭಾವನೆಗಳಿಗೆ ಧಕ್ಕೆ ಉಂಟು ಮಾಡಿದ್ದಾರೆ. ಯಾರೋ ಉದ್ದೇಶ ಪೂರ್ವಕವಾಗಿಯೇ ಈ ಕೃತ್ಯವೇಸಗಿದ್ದಾರೆ ಎಂದು ಖಾನಾಪುರ ಗ್ರಾಮಸ್ಥರು ಆರೋಪಿಸಿದ್ದಾರೆ. ಈ ಕುರಿತು ವಡಗೇರಾ ಪೊಲೀಸ್ ಠಾಣೆಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು ವಡಗೇರಾ ಪೊಲೀಸ್ ಠಾಣೆಯಲ್ಲಿ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಸ್ ದಾಖಲಿಸಿಕೊಂಡಿದ್ದು ತನಿಖೆ ಕೈಗೊಂಡಿದ್ದಾರೆ ಎಂದು ತಿಳಿದು ಬಂದಿದೆ ಕೂಡಲೇ ತಪ್ಪಿಸ್ತರನ್ನು ಹುಡುಕಿ ಬಂದಿಸುವಂತೆ ಖಾನಾಪುರ ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಹನಿ ಟ್ರ್ಯಾಪ್‌ಗೆ ಬೆದರಿದ ಗ್ರಾ.ಪಂ. ಸದಸ್ಯ; ಆತ್ಮಹತ್ಯೆಗೆ ಯತ್ನ

• ಉದಯವಾಹಿನಿ, ಚಿತ್ರದುರ್ಗ

ಮಹಿಳೆ ಜೊತೆ ಅಕ್ರಮ ಸಂಬಂಧ ಬೆಳೆಸಿದ್ದ ಗ್ರಾಮ ಪಂಚಾಯಿತಿ ಸದಸ್ಯ ಇದೀಗ ಹನಿ ಟ್ರ್ಯಾಪ್‌ಗೆ ಒಳಗಾಗಿ ಆತ್ಮಹತ್ಯೆಗೆ ಯತ್ನಿಸಿದ ಘಟನೆ ಚಿತ್ರದುರ್ಗದಲ್ಲಿ ನಡೆದಿದೆ. ಹಿರೇಗುಂಟನೂರು ಗ್ರಾಮ ಪಂಚಾಯತಿ ಸದಸ್ಯ ಮಂಜುನಾಥ್ ಹನಿ ಟ್ರ್ಯಾಪ್‌ಗೆ ಒಳಗಾದ ವ್ಯಕ್ತಿ. ಹೌದು, ಚಾಲಾಕಿ ಮಹಿಳೆ ಕಳೆದ 9 ವರ್ಷಗಳಿಂದ ಮಂಜುನಾಥ್ ಜತೆಗೆ ಸಂಬಂಧ ಬೆಳೆಸಿಕೊಂಡಿದ್ದಳು. ಈ ಮಧ್ಯೆ 35 ಲಕ್ಷ ರೂ. ವಂಚಿಸಿದ್ದಲ್ಲದೆ, ಇದೀಗ ನನಗೂ ನಿನಗೂ ಸಂಬಂಧ ಇಲ್ಲವೆಂದು ಛಾಪಾ ಕಾಗದದಲ್ಲಿ ಬರೆಸಿಕೊಂಡಿದ್ದಾಳೆ. ಅಲ್ಲದೆ ವಿಡಿಯೋ ಮಾಡಿಟ್ಟುಕೊಂಡು ಹನಿಟ್ರ್ಯಾಪ್ ಕೂಡ ಮಾಡಿದ್ದಾಳೆ.

ಇದರಿಂದ ನೊಂದ ಮಂಜುನಾಥ್ ಆತ್ಮಹತ್ಯೆಗೆ ಯತ್ನಿಸಿದ್ದಾರೆ.'ಚಾಲಾಕಿ ಮಹಿಳೆ ಮೂರು ಮೊಬೈಲ್ ಫೋನ್ ಬಳಸುತ್ತಿದ್ದಳು. ಇದನ್ನು ಗಮನಿಸಿದ ಮಂಜುನಾಥ್, ಮಹಿಳೆಯ ಫೋನ್ ಪರಿಶೀಲಿಸಿದ್ದಾರೆ. ಆಗ ಕಾಂಟ್ಯಾಕ್ಟ್ ಲೀಸ್ಟ್‌ನಲ್ಲಿ ಹಲವು ಪುರುಷರ ನಂಬರ್ ಕಂಡು ಅನುಮಾನದಿಂದ ಪ್ರಶ್ನಿಸಿದ್ದಾರೆ.

ಈ ವೇಳೆ ಮಂಜುನಾಥ್ ಈ ಹಿಂದೆ ನೀಡಿದ್ದ ಹಣವನ್ನು ವಾಪಾಸ್ ಕೇಳಿದ್ದಾರೆ. ಆಗ ಮಹಿಳೆ ವಿಡಿಯೋ ಮುಂದಿಟ್ಟು ಬೆದರಿಕೆ ಹಾಕಿದ್ದಾಳೆ. ಮರ್ಯಾದೆಗೆ ಅಂಜಿಕೊಂಡು ಮಾತ್ರೆ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿರುವ ಮಂಜುನಾಥ್, 'ನನಗೆ ಆಕೆಯಿಂದ ಮುಕ್ತಿ ಕೊಡಿ' ಎಂದು ಮನವಿ ಮಾಡುತ್ತಿದ್ದಾರೆ.

• ಅಪ್ಪ–ಮಗನ ಕರ್ಮಕಾಂಡ ದೊಡ್ಡವರ ಕಿವಿ ಮುಟ್ಟಿಸಲು ದೆಹಲಿ ವಿಮಾನದ ಟಿಕೆಟ್ ಬುಕ್ ಮಾಡಿದ್ದೇನೆ; ಯತ್ನಾಳ್

ತಂದೆ–ಮಕ್ಕಳ ವಿರುದ್ಧ ದೂರು ನೀಡಲೆಂದೇ ದೆಹಲಿ ಪ್ರವಾಸ

• ಉದಯವಾಹಿನಿ, ವಿಜಯಪುರ

ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಮತ್ತು ರಾಜ್ಯ ಬಿಜೆಪಿ ಅಧ್ಯಕ್ಷ ಬಿವೈ ವಿಜಯೇಂದ್ರ ವಿರುದ್ಧದ ತಮ್ಮ ವಾಗ್ದಾಳಿಯನ್ನು ಮುಂದುವೆಸಿರುವ ವಿಜಯಪುರ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್, ಹೈಕಮಾಂಡ್‌ಗೆ ತಂದೆ–ಮಕ್ಕಳ ವಿರುದ್ಧ ದೂರು ನೀಡಲೆಂದೇ ದೆಹಲಿ ಪ್ರವಾಸ ಹಮ್ಮಿಕೊಂಡಿರುವುದಾಗಿ ಸ್ಪಷ್ಟಪಡಿಸಿದ್ದಾರೆ. ನಗರದಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಬಸನಗೌಡ ಪಾಟೀಲ್ ಯತ್ನಾಳ್, ಅಪ್ಪ–ಮಗನ ಕರ್ಮ ಕಾಂಡದ ಬಗ್ಗೆ ಹೈಕ ಮಾಂಡ್‌ಗೆ ದೂರು ನೀಡಲೆಂದು ಮಂಗಳವಾರ ದೆಹಲಿಗೆ ಪ್ರಯಾಣ ಬೆಳೆ ಸುತ್ತಿರುವುದಾಗಿ ತಿಳಿಸಿದರು. ಈ ಮೂಲಕ ಹೈಕಮಾಂಡ್‌ಗೆ ಬಿಎಸ್ ಯಡಿಯೂರಪ್ಪ, ಬಿವೈ ವಿಜಯೇಂದ್ರ ವಿರುದ್ಧ ದೂರು ನೀಡುವುದಾಗಿ ಯತ್ನಾಳ್ ಖಚಿತಪಡಿಸಿದರು.

ಪಕ್ಷಕ್ಕೆ ಭ್ರಷ್ಟಾಚಾರ ಕುಟುಂಬ ಬೇಕೆ ಅಥವಾ ಪ್ರಾಮಾಣಿಕರು ಹಾಗೂ ಪಕ್ಷ ನಿಷ್ಠ ಕಾರ್ಯಕರ್ತರು ಬೇಕೆ ಎಂದು ನಾವು ಹೈಕಮಾಂಡ್‌ನ್ನು ಕೇಳುತ್ತೇವೆ.

ರಾಜ್ಯ ಬಿಜೆಪಿಯಲ್ಲಿ ಕುಟುಂಬ ರಾಜಕಾರಣ ಅಂತ್ಯವಾಗಬೇಕು ಎಂಬ ನಮ್ಮ ಬೇಡಿಕೆಗೆ ಹೈಕಮಾಂಡ್ ಮನ್ನಣೆ ನೀಡುವ ನಂಬಿಕೆ ಇದೆ. ಹಿಂದುತ್ವವಾದಿ ವ್ಯಕ್ತಿಗಳ ಕೈಯ್ಯಲ್ಲಿ ರಾಜ್ಯ ಬಿಜೆಪಿ ನಾಯಕತ್ವ ಕೊಡಬೇಕು ಎಂಬ ನಮ್ಮ ಆಗ್ರಹವನ್ನು ಹೈಕಮಾಂಡ್ ಆಲಿಸಲಿದೆ ಎಂಬ ವಿಶ್ವಾಸವಿದೆ. ಎಂದು ಯತ್ನಾಳ್ ಇದೇ ವೇಳೆ ಭರವಸೆ ವ್ಯಕ್ತಪಡಿಸಿದರು. ವಿಜಯೇಂದ್ರ ಅವರನ್ನೇ ರಾಜ್ಯ ಅಧ್ಯಕ್ಷರಾಗಿ ಮುಂದುವರೆಸಿದರೆ, ರಾಜ್ಯದಲ್ಲಿ ಬಿಜೆಪಿ ಉಳಿಯುವುದಿಲ್ಲ ಎಂಬುದು ಹೈಕಮಾಂಡ್‌ಗೆ ಮನವರಿಕೆಯಾಗಿದೆ. ಹೀಗಾಗಿ ರಾಜ್ಯಾಧ್ಯಕ್ಷರ ಬದಲಾವಣೆ ಖಚಿತವಾಗಿದ್ದು, ನಾನೇ ರಾಜ್ಯಾಧ್ಯಕ್ಷನಾಗಿ ಆಯ್ಕೆ ಯಾಗುತ್ತೇನೆ. ಎಂದು ಬಸನ ಗೌಡ ಪಾಟೀಲ್ ಯತ್ನಾಳ್ ನುಡಿದರು. ನಾವು ದೆಹಲಿಗೆ ನಿಯೋಗ ಕರೆದೊಯ್ಯಲಿದ್ದು, ಹೈಕಮಾಂಡ್‌ಗೆ ಪಕ್ಷದ ರಾಜ್ಯ ಘಟಕದಲ್ಲಿ ಆಗುತ್ತಿರುವ ಬೆಳವಣಿಗೆಗಳ ಬಗ್ಗೆ ಮನವರಿಕೆ ಮಾಡಿ ಕೊಡುತ್ತೇವೆ. ಅಲ್ಲದೇ ತಮ್ಮದು ತಟಸ್ಥ ಬಣ ಎಂದು ಎರ ಡೂ ಕಡೆ ಆಟ ಆಡುತ್ತಿರುವವರು ಈಗ ತಮ್ಮನ್ನು ನಿಷ್ಠಾವಂತ ಎಂದು ಕರೆದುಕೊಳ್ಳುತ್ತಿದ್ದು, ಈ ಕುರಿತೂ ಹೈಕಮಾಂಡ್ ಜೊತೆ ಚರ್ಚಿಸಲಿದ್ದೇವೆ. ಎಂದು ಯತ್ನಾಳ್ ಸ್ಪಷ್ಟಪಡಿಸಿದರು. ರಾಜ್ಯದಲ್ಲಿ ಬಿಎಸ್‌ವೈ ಕುಟುಂಬ ಮತ್ತು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ನಡುವೆ ಅಡ್ಜೆಸ್ಟ್‌ಮೆಂಟ್ ರಾಜಕಾರಣ ಇದೆ. ಇದೇ ಕಾರಣಕ್ಕೆ ಡಿಕೆಶಿ ಹೀನಾಯವಾಗಿ ಬೈದರೂ ಬಿವೈ ವಿಜಯೇಂದ್ರ ಯಾವುದೇ ಪ್ರತಿಕ್ರಿಯೆ ಕೊಡುವು ದಿಲ್ಲ. ಬಿವೈ ವಿಜಯೇಂದ್ರಗೆ ದೊರೆತಿರುವ ಶಾಸಕ ಸ್ಥಾನ ನಾನು ಕೊಟ್ಟಿರುವ ಭಿಕ್ಷೆ ಎಂದು ಡಿಕೆ ಶಿವಕುಮಾರ್ ಹೇಳಿದರೂ, ವಿಜಯೇಂದ್ರ ತುಟಿ ಬಿಚ್ಚುವುದಿಲ್ಲ ಎಂದು ಯತ್ನಾಳ್ ಇದೇ ವೇಳೆ ತೀವ್ರವಾಗಿ ತರಾಟೆಗೆ ತೆಗೆದುಕೊಂಡರು.

ಡಿಕೆ ಶಿವಕುಮಾರ್ ಯಡಿಯೂರಪ್ಪ ಹಾಗೂ ಅವರ ಮಗ ವಿಜಯೇಂದ್ರಗೆ ಭಯಪಡಿಸಿ ಬಿಟ್ಟಿದ್ದಾರೆ. ಪೋಕ್ಸೋ ಹಗರಣ, ನಕಲಿ ಸಹಿ ಹಗರಣದ ಭಯದಲ್ಲಿ ಬಿಎಸ್‌ವೈ ಮತ್ತು ಬಿವೈ ವಿಜಯೇಂದ್ರ ಅಡ್ಜಸ್ಟ್‌ಮೆಂಟ್ ರಾಜಕಾರಣದ ಮೊರೆ ಹೋಗಿದ್ದಾರೆ.. ಎಂದು ಬಸನಗೌಡ ಪಾಟೀಲ್ ಯತ್ನಾಳ್ ಗಂಭೀರ ಆರೋಪ ಮಾಡಿದರು.

ಒಟ್ಟಿನಲ್ಲಿ ಬಿವೈ ವಿಜಯೇಂದ್ರ ವಿರುದ್ಧ ದೂರು ನೀಡಲೆಂದೇ ತಾವು ದೆಹಲಿ ಪ್ರವಾಸ ಕೈಗೊಳ್ಳುತ್ತಿರುವುದಾಗಿ ಹೇಳುವ ಮೂಲಕ, ಬಸನಗೌಡ ಪಾಟೀಲ್ ಯತ್ನಾಳ್ ಅವರು ರಾಜ್ಯ ಬಿಜೆಪಿಯಲ್ಲಿ ಹೊಸ ಸಂಚಲಕ್ಕೆ ಕಾರಣರಾಗಿದ್ದಾರೆ ಎಂದು ಹೇಳಬಹುದು.

> ವಿಜಯಪುರದಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್, ಅಪ್ಪ–ಮಗನ ಕರ್ಮಕಾಂಡದ ಬಗ್ಗೆ ಹೈಕಮಾಂಡ್‌ಗೆ ದೂರು ನೀಡಲೆಂದು ಮಂಗಳವಾರ ದೆಹ ಲಿಗೆ ಪ್ರಯಾಣ ಬೆಳೆಸುತ್ತಿರುವುದಾಗಿ
> –ಬಸನಗೌಡ ಪಾಟೀಲ್ ಯತ್ನಾಳ್, ಬಿಜೆಪಿ ಶಾಸಕ

> **ಭ್ರಷ್ಟಾಚಾರ ಕುಟುಂಬ ಬೇಕೆ?**
> ಈ ಮೂಲಕ ಹೈಕಮಾಂಡ್‌ಗೆ ಬಿಎಸ್ ಯಡಿಯೂರಪ್ಪ ಮತ್ತು ಬಿವೈ ವಿಜಯೇಂದ್ರ ವಿರುದ್ಧ ದೂರು ನೀಡುವುದಾಗಿ ಯತ್ನಾಳ್ ಖಚಿತಪಡಿಸಿದರು. ಪಕ್ಷಕ್ಕೆ ಭ್ರಷ್ಟಾಚಾರ ಕುಟುಂಬ ಬೇಕೆ? ಅಥವಾ ಪ್ರಾಮಾಣಿಕರು ಹಾಗೂ ಪಕ್ಷ ನಿಷ್ಠ ಕಾರ್ಯಕರ್ತರು ಬೇಕೆ? ಎಂದು ನಾವು ಹೈಕಮಾಂಡ್‌ನ್ನು ಕೇಳುತ್ತೇವೆ. ಎಂದು ಯತ್ನಾಳ್ ಹೇಳಿರುವುದು ಗಮನ ಸೆಳೆದಿದೆ.

ಸಂಸ್ಕೃತಿ ಉಳಿಸಿ ಬೆಳೆಸುತ್ತಿರುವ ಧರ್ಮಸ್ಥಳ ಸಂಸ್ಥೆ

• ವರದಿ ಶಿವರಾಜಕುಮಾರ ವಾಲಿಕಾರ

• ಉದಯವಾಹಿನಿ, ಇಂಡಿ

ಉದಯವಾಹಿನಿ ಚಿತ್ರ

ಇಂಡಿ ಮಹಿಳಾ ಶಕ್ತಿಯ ಪ್ರತೀಕವಾಗಿರುವ ಧರ್ಮಸ್ಥಳ ಸಂಸ್ಥೆಯು ಗ್ರಾಮೀಣ ಪ್ರದೇಶದ ಶ್ರೀ ಸಾಮಾನ್ಯರಲ್ಲಿ ಧರ್ಮ ಜಾಗೃತಿ ಮೂಡಿಸಿ ನಮ್ಮ ಸಂಸ್ಕೃತಿ ಪರಂಪರೆಯನ್ನು ಉಳಿಸಿ ಬೆಳೆಸುತ್ತಿದೆ ಎಂದು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ತಾಲ್ಲೂಕಾ ಯೋಜನಾಧಿಕಾರಿ ನಟರಾಜ ಎಲ್.ಎಂ ಹೇಳಿದರು.

ತಾಲ್ಲೂಕಿನ ಲಚ್ಯಾಣ ಗ್ರಾಮದ ಶ್ರೀ ಸಿದ್ಧಲಿಂಗಮಹಾರಾಜರ ಕಮರಿ ಮಠದ ಆವರಣದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಹಾಗೂ ರುಡ್ ಸೆಟ್ ಸಂಸ್ಥೆ ವಿಜಯಪುರ ಸಹಭಾಗಿತ್ವದಲ್ಲಿ ಹಮ್ಮಿಕೊಂಡ ಸೃಜನಶೀಲ ಕಾರ್ಯಕ್ರಮದಲ್ಲಿ ಮೃದು ಗೊಂಬೆಗಳ ತಯಾರಿಕೆ ಹಾಗೂ ಮಾರಾಟ ತರಬೇತಿ ಸಮಾರೊಪ ಸಮಾರಂಭದಲ್ಲಿ ಪ್ರಮಾಣ ಪತ್ರ ವಿತರಿಸಿ ಮಾತನಾಡಿದರು.

ಸ್ವತಂತ್ರವಾಗಿ ಉದ್ಯೋಗ ಮಾಡುವ ಮೂಲಕ ಸ್ವಾವಲಂಬಿ ಬದುಕು ಕಟ್ಟಿ ಆರ್ಥಿಕವಾಗಿ ಸಬಲರಾಗಬೇಕು ಎಂದರು. ನಮ್ಮ ಧರ್ಮಸ್ಥಳದ ಧರ್ಮಾಧಿಕಾರಿಗಳಾದ ಡಾ. ವಿರೇಂದ್ರ ಹೆಗ್ಗಡೆಯವರ ಹಾಗೂ ಮಾತೊ ಶ್ರ

ಜಾಗತಿಕ ತೆರಿಗೆ ಯುದ್ಧ ಶುರು ಮಾಡಿದ ಡೊನಾಲ್ಡ್ ಟ್ರಂಪ್

ಅಮೆರಿಕದ ನೂತನ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದಂತೆ ತೆರಿಗೆ ಯುದ್ಧವನ್ನು ಶುರು ಮಾಡಿದ್ದಾರೆ



ಟ್ರಂಪ್ ಜೊತೆ ಟ್ರುಡೋ ಟಾಕ್, ಬೆಲೆ ಏರಿಕೆ

ಕೆನಡಾ, ಮೆಕ್ಸಿಕೋ, ಚೀನಾದಿಂದ ಪ್ರತೀಕಾರ!

ಹೌದು, ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಜಾಗತಿಕ ತೆರಿಗೆ ಯುದ್ಧವನ್ನು ಶುರುಮಾಡಿದ್ದಾರೆ. ಇದಕ್ಕೆ ಮೆಕ್ಸಿಕೋ, ಕೆನಡಾ ಮತ್ತು ಚೀನಾ ತಿರುಗೇಟು ನೀಡಲು ಮುಂದಾಗಿವೆ. ಟ್ರಂಪ್ ಆದೇಶದ ಬೆನ್ನಲ್ಲೇ ಕೆನಡಾ ಪ್ರಧಾನಿ ಜಸ್ಟಿನ್ ಟ್ರುಡೋ, ಅಮೆರಿಕದ ಕೆಲವು ಆಯ್ದ ಸರಕುಗಳ ಮೇಲೆ ಶೇಕಡ 25 ಸುಂಕ ಹೇರುವುದಾಗಿ ಪ್ರಕಟಿಸಿದ್ದಾರೆ. ಇತ್ತ ಮೆಕ್ಸಿಕೋ ಕೂಡ ಅಮೆರಿಕದ ವಿರುದ್ಧ ಪ್ರತೀಕಾರ ತೀರಿಸಿಕೊಳ್ಳುವುದಾಗಿ ಘೋಷಿಸಿದ್ದು, ಅಮೆರಿಕದ ಉಕ್ಕು, ಬರ್ಬೋನ್ ಹಾಗೂ ಹೈನು ಉತ್ಪನ್ನಗಳನ್ನು ಮೆಕ್ಸಿಕೋ ಟಾರ್ಗೆಟ್ ಮಾಡಿದೆ. ಚೀನಾ ನಮ್ಮ ಹಕ್ಕುಗಳು ಮತ್ತು ಹಿತಾಸಕ್ತಿಗಳನ್ನು ರಕ್ಷಿಸಲು ಅಷ್ಟೇ ನಿರ್ಣಾಯಕವಾದ ಕ್ರಮಗಳನ್ನು ಕೈಗೊಳ್ಳುವುದಾಗಿ ಪ್ರಕಟಿಸಿದೆ. ಇದರ ನಡುವೆಯೇ ಯುರೋಪಿಯನ್ ಒಕ್ಕೂಟದ ಮೇಲೂ ಟ್ರಂಪ್ ಕಣ್ಣಾಕಿದ್ದು, ಅದರ ಮೇಲೂ ತೆರಿಗೆ ವಿಧಿಸುವುದಾಗಿ ಹೇಳಿದ್ದಾರೆ.

ವಾಷಿಂಗ್ಟನ್ ಡಿಸಿ ಅಮೆರಿಕದ ನೂತನ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದಂತೆ ತೆರಿಗೆ ಯುದ್ಧವನ್ನು ಶುರು ಮಾಡಿದ್ದಾರೆ. 'ಅಮೆರಿಕ ಫಸ್ಟ್' ನೀತಿಗೆ ಅನುಗುಣವಾಗಿ ದೇಶದ ಆರ್ಥಿಕ ಹಿತಾಸಕ್ತಿಯ ರಕ್ಷಣೆಗೆ ಬದ್ಧ ಎಂದು ಘೋಷಿಸಿರುವ ಟ್ರಂಪ್, ಮೆಕ್ಸಿಕೋ, ಕೆನಡಾದಿಂದ ಆಮದು ಮಾಡಿಕೊಳ್ಳುವ ಸರಕುಗಳ ಮೇಲೆ ಶೇ.25ರಷ್ಟು ತೆರಿಗೆ, ಮತ್ತು ಚೀನಾದಿಂದ ಆಮದು ಮಾಡಿಕೊಳ್ಳುವ ಸರಕುಗಳಿಗೆ ಶೇ.10ರಷ್ಟು ಹೇರುವ ಆದೇಶಕ್ಕೆ ಸಹಿ ಹಾಕಿದ್ದಾರೆ. ಇದರ ಬೆನ್ನಲ್ಲೇ ಯುರೋಪಿಯನ್ ಯೂನಿಯನ್ ಮೇಲೂ ತೆರಿಗೆ ವಿಧಿಸುವುದಾಗಿ ಟ್ರಂಪ್ ಹೇಳಿರುವುದು ಜಾಗತಿಕ ಆರ್ಥಿಕತೆ ಅಲುಗಾಡುವಂತೆ ಮಾಡಿದೆ. ಟ್ರಂಪ್ ವಿಧಿಸಿದ ಸುಂಕದಿಂದ ರೊಚ್ಚಿಗೆದ್ದಿರುವ ರಾಷ್ಟ್ರಗಳು ಪ್ರತೀಕಾರದ ಕ್ರಮವನ್ನು ಕೂಡ ಘೋಷಿಸಿವೆ. ಇದರ ಪರಿಣಾಮ ಜಾಗತಿಕ ಷೇರುಪೇಟೆ ಮೇಲಾಗಿದ್ದು, ಸೆನ್ಸೆಕ್ಸ್ ಪಾತಾಳಕ್ಕೆ ಕುಸಿದಿದೆ.

ಅಮೆರಿಕದ ವಿರುದ್ಧ ಪ್ರತೀಕಾರ

ಟ್ರಂಪ್ ಜೊತೆ ಟ್ರುಡೋ ಟಾಕ್: ತಮ್ಮ ಆದೇಶದ ಬೆನ್ನಲ್ಲೇ ಕೆನಡಾ ಪ್ರಧಾನಿ ಜಸ್ಟಿನ್ ಟ್ರುಡೋ ಅವರ ಜೊತೆ ಡೊನಾಲ್ಡ್ ಟ್ರಂಪ್ ಮಾತುಕತೆ ನಡೆಸಿದ್ದಾರೆ. ಈ ಆದೇಶದಿಂದ ಕೆನಡಾಕ್ಕೆ ಒಂದಿಷ್ಟು ವಿನಾಯಿತಿಗಳನ್ನು ನೀಡುವ ಬಗ್ಗೆ ಟ್ರಂಪ್ ಮಾತನಾಡಿದ್ದಾರೆ ಎಂದು ಹೇಳಲಾಗಿದೆ. ಆದರೆ, ಯಾವುದನ್ನೂ ಕೂಡ ಖಚಿತವಾಗಿ ಟ್ರಂಪ್ ಹೇಳಿಲ್ಲ ಎನ್ನಲಾಗಿದೆ. ಮಾತುಕತೆಯಲ್ಲಿ ಟ್ರಂಪ್ ಮುಂದೆ ಟ್ರುಡೋ ತಮ್ಮ ಕಳವಳವನ್ನು ವ್ಯಕ್ತಪಡಿಸಿದ್ದಾರೆ. ಟ್ರಂಪ್ ಆದೇಶದಿಂದ ಅಮೆರಿಕದಲ್ಲಿ ಹಲವು ವಸ್ತುಗಳ ಬೆಲೆಯೂ ಏರಿಕೆಯಾಗಿದ್ದು, ಎಲೆಕ್ಟ್ರಾನಿಕ್ಸ್ ವಸ್ತುಗಳು, ವಾಹನಗಳು ಮತ್ತು ಕೃಷಿ ಉಪಕರಣಗಳ ಬೆಲೆ ಭಾರೀ ಪ್ರಮಾಣದಲ್ಲಿ ಏರಿಕೆಯಾಗುವ ನಿರೀಕ್ಷೆಯಿದೆ. ಚೀನಾದಿಂದ ಆಮದು ಮಾಡಿಕೊಳ್ಳುವ ಸ್ಮಾರ್ಟ್‌ಫೋನ್, ಲ್ಯಾಪ್‌ಟಾಪ್‌ಗಳ ಬೆಲೆಯೂ ಏರಲಿದ್ದು, ಮೆಕ್ಸಿಕೋದಿಂದ ಬರುವ ಕಾರುಗಳು, ಆಹಾರ ಉತ್ಪನ್ನಗಳ ದರವೂ ಗಮನಾರ್ಹ ಏರಿಕೆ ಕಾಣಲಿದೆ.

ಯುರೋಪಿಯನ್ ಒಕ್ಕೂಟಕ್ಕೂ ಟ್ರಂಪ್ ಶಾಕ್!: ಇತ್ತ ಯುರೋಪಿಯನ್ ಒಕ್ಕೂಟದ ಮೇಲೂ ಕಣ್ಣಾಕಿರುವ ಡೊನಾಲ್ಡ್ ಟ್ರಂಪ್, ಶೀಘ್ರದಲ್ಲಿ ಯುರೋಪಿಯನ್ ಯುನಿಯನ್ ಮೇಲೆ ಟ್ಯಾರಿಫ್ ವಿಧಿಸುವುದಾಗಿ ಹೇಳಿದ್ದಾರೆ. ಆದರೆ, ಬ್ರಿಟನ್‌ಗೆ ರಿಲೀಫ್ ನೀಡಿರುವ ಟ್ರಂಪ್, ಸದ್ಯಕ್ಕೆ ಇಂಗ್ಲಿಷ್ ರಾಷ್ಟ್ರ ಮೇಲೆ ಸುಂಕ ವಿಧಿಸುವುದಿಲ್ಲ ಎಂದು ಹೇಳಿದ್ದಾರೆ. ಇದರ ಜೊತೆ ಜೊತೆಗೂ ಭಾರತದ ಮೇಲೆ ಸುಂಕ ವಿಧಿಸುವುದಾಗಿ ಹೇಳಿದ್ದ ಟ್ರಂಪ್ ತಮ್ಮ ನಿರ್ಧಾರದಿಂದ ಹಿಂದೆ ಸರಿದಿದ್ದಾರೆ. ಇದಕ್ಕೆ ಶೀಘ್ರದಲ್ಲೇ ಅಮೆರಿಕಕ್ಕೆ ಮೋದಿ ಭೇಟಿ ನೀಡುತ್ತಿರುವುದು ಕಾರಣ ಎನ್ನಲಾಗುತ್ತಿದೆ. ಮೋದಿ ಅಮೆರಿಕದ ಭೇಟಿ ಬಳಿಕ ಭಾರತದ ಮೇಲಿನ ಸುಂಕ ನಿರ್ಧಾರವಾಗುವ ನಿರೀಕ್ಷೆ ಇದೆ.

ನೋವು ಅನಿವಾರ್ಯ ಎಂದ ಟ್ರಂಪ್!: ಈ ಎಲ್ಲಾ ಬೆಳವಣಿಗೆಗಳ ನಡುವೆ ತಮ್ಮ ನಿರ್ಧಾರದಿಂದ ಹಿಂದೆ ಸರಿಯಲು ಟ್ರಂಪ್ ಒಪ್ಪಿಲ್ಲ. ಹೊಸ ಸುಂಕ ನೀತಿಯು ಅಮೆರಿಕನ್ನರಿಗೆ ಆರ್ಥಿಕ ನೋವು ನೀಡಲಿದೆ ಎಂದು ಹೇಳಿರುವ ಡೊನಾಲ್ಡ್ ಟ್ರಂಪ್, ಅಮೆರಿಕದ ಹಿತಾಸಕ್ತಿಗಳನ್ನು ಸುರಕ್ಷಿತಗೊಳಿಸಲು ನಾವು ಯೋಗ್ಯ ಬೆಲೆ ತೆರಬೇಕಾಗಿರುವುದು ಅನಿವಾರ್ಯ ಎಂದು ಹೇಳುವ ಮೂಲಕ ಏನೇ ಆದರೂ ತಮ್ಮ ನಿರ್ಧಾರದಿಂದ ಹಿಂದೆ ಸರಿಯಲ್ಲ ಎಂದಿದ್ದಾರೆ. ಒಟ್ಟಿನಲ್ಲಿ, ಡೊನಾಲ್ಡ್ ಟ್ರಂಪ್ ಅವರು ತಮ್ಮ ಸುಂಕ ಯುದ್ಧದಲ್ಲಿ ಹಲವು ದೇಶಗಳನ್ನು ಟಾರ್ಗೆಟ್ ಮಾಡುತ್ತಿದ್ದಾರೆ. ಆದರೆ, ಭಾರತದ ಬಗ್ಗೆ ಇನ್ನೂ ಖಚಿತ ನಿರ್ಧಾರ ತೆಗೆದುಕೊಂಡಿಲ್ಲ ಎಂಬುದನ್ನು ಇಲ್ಲಿ ಗಮನಿಸಬೇಕಿದೆ. ಟ್ರಂಪ್ ನಿರ್ಧಾರದಿಂದ ಜಾಗತಿಕ ಆರ್ಥಿಕ ವ್ಯವಸ್ಥೆ ಅಲುಗಾಡುತ್ತಿದ್ದು,

ಷೇರು ಮಾರುಕಟ್ಟೆ ಧ್ವಂಸ, ಕಂಪನಿಗಳ ಆತಂಕ!

ಟ್ರಂಪ್ ನಿರ್ಧಾರ ಹಾಗೂ ಮೂರು ದೇಶಗಳ ಪ್ರತೀಕಾರದ ಮಾತು ಷೇರು ಮಾರುಕಟ್ಟೆ ಮೇಲೆ ಪರಿಣಾಮ ಬೀರಿದೆ. ಅಮೆರಿಕ, ಯುರೋಪಿಯನ್, ಏಷ್ಯನ್ ಮಾರುಕಟ್ಟೆಗಳಲ್ಲಿ ನೆಗೆಟಿವ್ ಟ್ರೆಂಡ್ ಏರಿಕೆಯಾಗಿದೆ. ಭಾರತದ ನಿಫ್ಟಿ ಹಾಗೂ ಸೆನ್ಸೆಕ್ಸ್ ಸೂಚ್ಯಂಕ ಕೂಡ ಸೋಮವಾರ ಇಳಿಕೆ ಕಂಡಿದೆ. ಇದರ ನಡುವೆ ಡಾಲರ್ ಸೂಚ್ಯಂಕ ಭಾರೀ ಪ್ರಮಾಣದಲ್ಲಿ ಏರಿಕೆಯಾಗಿದ್ದು, ಪೆಸೋ, ಯುಹಾನ್, ಕೆನಡಿಯನ್ ಡಾಲರ್ ದರ ಕುಸಿತ ಕಂಡಿದೆ. ಭಾರತದ ರೂಪಾಯಿ ದರ ಕೂಡ ದಾಖಲೆಯ ಮಟ್ಟದಲ್ಲಿ ಕುಸಿದಿದೆ. ಟ್ರಂಪ್ ಆದೇಶಕ್ಕೆ ಅಮೆರಿಕದ ಉತ್ಪಾದಕ ಕಂಪನಿಗಳು ಕಳವಳವನ್ನು ವ್ಯಕ್ತಪಡಿಸಿವೆ. ಅದರಲ್ಲೂ ಮೆಕ್ಸಿಕೋ, ಚೀನಾದಿಂದ ಉತ್ಪನ್ನಗಳನ್ನು ಆಮದು ಮಾಡಿಕೊಳ್ಳುವ ಕಂಪನಿಗಳ ಮೇಲೆ ಇದರ ನೇರ ಪರಿಣಾಮ ಉಂಟಾಗಲಿದ್ದು, ಇದರಿಂದ ಉದ್ಯೋಗ ಕಡಿತ ಹಾಗೂ ಉತ್ಪಾದನೆಯನ್ನು ಬೇರೆ ದೇಶಕ್ಕೆ ಸ್ಥಳಾಂತರಿಸಬೇಕಾಗುತ್ತದೆ ಎಂಬ ಎಚ್ಚರಿಕೆಯನ್ನು ನೀಡಿವೆ.

ತಮಿಳುನಾಡು ಸಂಸದನ ಪ್ರಸ್ತಾಪಕ್ಕೆ ದೇವೇಗೌಡರ ವಿರೋಧ!

ರಾಜ್ಯ ಸಭೆಯಲ್ಲಿ ಈ ಬಗ್ಗೆ ಚರ್ಚೆ

ಹೊಸದಿಲ್ಲಿ: ಬೆಂಗಳೂರು ಬಳಿ 2ನೇ ಅಂತಾರಾಷ್ಟ್ರೀಯ ನಿರ್ಮಾಣಕ್ಕೆ ಕರ್ನಾಟಕ ಹಾಗೂ ತಮಿಳುನಾಡು ನಡುವೆ ಸ್ಪರ್ಧೆ ನಡೆಯುತ್ತಿದೆ. ಇದರ ನಡುವೆಯೇ ರಾಜ್ಯ ಸಭೆಯಲ್ಲಿ ಈ ಬಗ್ಗೆ ಚರ್ಚೆಯಾಗಿದೆ. ಸಂಸತ್‌ನ ಬಜೆಟ್ ಅಧಿವೇಶನದ ಮೂರನೇ ದಿನ ರಾಜ್ಯಸಭೆಯಲ್ಲಿ ತಮಿಳುನಾಡಿನ ಎಐಎಡಿಎಂಕೆ ಸಂಸದ ಡಾ ಎಂ ತಂಬಿದುರೈ ಈ ವಿಚಾರವನ್ನು ಪ್ರಸ್ತಾಪಿಸಿ, ಹೊಸೂರು ಬಳಿ ವಿಮಾನ ನಿಲ್ದಾಣಕ್ಕೆ ಅನುಮತಿ ನೀಡಿ ಎಂದರು. ಇದಕ್ಕೆ ಮಾಜಿ ಪ್ರಧಾನಿ ಎಚ್‌ಡಿ ದೇವೇಗೌಡ ಅವರು ವಿರೋಧ ವ್ಯಕ್ತಪಡಿಸಿ, ಕರ್ನಾಟಕ ಸರ್ಕಾರ ಕೂಡ ಏರ್‌ಪೋರ್ಟ್ ನಿರ್ಮಾಣಕ್ಕೆ ಮುಂದಾಗಿದೆ, ಕರ್ನಾಟಕ ಸರ್ಕಾರದ ಮನವಿಯನ್ನು ಪರಿಗಣಿಸಿ ಎಂದು ಹೇಳಿದರು.

ಈ ವೇಳೆ ಮಾತನಾಡಿದ ಡಾ ಎಂ ತಂಬಿದುರೈ, ಬೆಂಗಳೂರು ಏರ್‌ಪೋರ್ಟ್‌ನಲ್ಲಿ ಏರ್ ಟ್ರಾಫಿಕ್ ಬಹಳಷ್ಟು ಹೆಚ್ಚಾಗಿದೆ. ಆದ್ದರಿಂದ ಬೆಂಗಳೂರಿಗೆ ಹತ್ತಿರದಲ್ಲಿರುವ ಹೊಸೂರು ಬಳಿ ವಿಮಾನ ನಿಲ್ದಾಣ ನಿರ್ಮಿಸಬೇಕು ಎಂಬ ಬೇಡಿಕೆ ಹೆಚ್ಚಾಗಿದೆ. ಆದರೆ, ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಸಮಸ್ಯೆ ಆಗುತ್ತಿದೆ. 25 ವರ್ಷಗಳ ಕಾಲ ಬೇರೆ ಏರ್‌ಪೋರ್ಟ್ ನಿರ್ಮಿಸಬಾರದು ಎಂಬ ನಿಯಮದಿಂದ ಸಮಸ್ಯೆಯಾಗುತ್ತಿದೆ. ಈಗಾಗಲೇ ದಿಲ್ಲಿ ಮತ್ತು ಹೈದ್ರಾಬಾದ್‌ನಲ್ಲಿ ಈ ನಿಯಮದಿಂದ ವಿನಾಯಿತಿ ನೀಡಿ ಹೊಸ ಇಂಟರ್‌ನ್ಯಾಷನಲ್ ಏರ್‌ಪೋರ್ಟ್ ನಿರ್ಮಿಸಲಾಗುತ್ತಿದೆ. ಅದೇ ರೀತಿ ಹೊಸೂರಿನಲ್ಲಿ ತಮಿಳುನಾಡು ಸರ್ಕಾರದಿಂದ ವಿಮಾನ ನಿಲ್ದಾಣ ನಿರ್ಮಿಸಲು ಅನುಮತಿ ನೀಡಬೇಕು ಎಂದು ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ನಾಗರಿಕ ವಿಮಾನಯಾನ ಸಚಿವ ಕೆ ರಾಮಮೋಹನ್ ನಾಯ್ಡು, ಎಲ್ಲಿ ಬೇಡಿಕೆಯಿರುತ್ತದೋ ಅಲ್ಲಿ ವಿಮಾನ ನಿಲ್ದಾಣ ನಿರ್ಮಿಸಲು ನಾವು ಬದ್ಧವಾಗಿದ್ದೇವೆ. ಆದರೆ, ಇಲ್ಲಿ 150 ಕಿಮೀ ಅಂತರದಲ್ಲಿ ಹೊಸ ಏರ್‌ಪೋರ್ಟ್ ನಿರ್ಮಾಣ ಆಗಬಾರದು ಎಂಬ ಒಪ್ಪಂದ ಈಗಾಗಲೇ ಜಾರಿಯಲ್ಲಿದೆ. ಹೊಸೂರು ಬೆಂಗಳೂರು ವಿಮಾನ ನಿಲ್ದಾಣದ 150 ಕಿಮೀ ವ್ಯಾಪ್ತಿಯಲ್ಲಿಯೇ ಬರುವುದರಿಂದ ಇದು ಸವಾಲಿನ ಕೆಲಸ, ತಮಿಳುನಾಡು ಸರ್ಕಾರ ಅಲ್ಲಿಯೇ ವಿಮಾನ ನಿಲ್ದಾಣ ನಿರ್ಮಿಸಲು ಮುಂದಾಗಿದೆ. ಅದಕ್ಕೆ ಕೇಂದ್ರ ಕೂಡ ಸಹಕಾರ ನೀಡಲಿದೆ ಎಂದರು.

ವಿಮಾನ ಅಪಘಾತದ್ದು ಎಂಬ ಫೋಟೋ ವೈರಲ್



ಹೊಸದಿಲ್ಲಿ: ಅಮೆರಿಕದ ವಾಷಿಂಗ್ಟನ್ ಡಿಸಿಯಲ್ಲಿ ಇತ್ತೀಚೆಗೆ ನಡೆದ ವಿಮಾನದ ಭೀಕರ ಅಪಘಾತದ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಹಲವು ಫೋಟೋಗಳು ಹರಿದಾಡುತ್ತಿವೆ. ಆದರೆ, ಫೋಟೋ ಹಳೆಯದಾಗಿದ್ದು, ದಿಕ್ಕುತಪ್ಪಿಸುವ ಉದ್ದೇಶದಿಂದ ಹಂಚಿಕೊಳ್ಳಲಾಗುತ್ತಿದೆ ಎಂದು ಸಜಗ್ ತನಿಖೆಯಲ್ಲಿ ದೃಢವಾಗಿದೆ.

ಜನವರಿ 30 ರಂದು ವಾಷಿಂಗ್ಟನ್ ಡಿಸಿಯಲ್ಲಿ ಒಂದು ಭೀಕರ ದುರಂತ ಸಂಭವಿಸಿತು. ಕಾನ್ಸಾಸ್ ನಿಂದ ಬರುತ್ತಿದ್ದ ಪ್ರಯಾಣಿಕ ವಿಮಾನವು ಸೇನಾ ಹೆಲಿಕಾಪ್ಟರ್‌ಗೆ ಡಿಕ್ಕಿ ಹೊಡೆಯಿತು.

ಈ ಡಿಕ್ಕಿಯ ತೀವ್ರತೆಯಿಂದಾಗಿ ವಿಮಾನದಲ್ಲಿದ್ದ 64 ಪ್ರಯಾಣಿಕರು ಮತ್ತು ಹೆಲಿಕಾಪ್ಟರ್‌ನಲ್ಲಿದ್ದ 3 ಸೇನಾ ಸಿಬ್ಬಂದಿ ಸಾವನ್ನಪ್ಪಿದರು. ಘಟನೆಯ ಕೆಲವು ಫೋಟೋ ಮತ್ತು ವೀಡಿಯೊಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದವು. ಆದರೆ, ಕೆಲವು ಬಳಕೆದಾರರು ಹಂಚಿಕೊಂಡ ವಿಮಾನ ಅಪಘಾತದ ಫೋಟೋವು ವಾಷಿಂಗ್ಟನ್ ಡಿಸಿ ಘಟನೆಯದ್ದಲ್ಲ ಎಂದು ತಿಳಿದುಬಂದಿದೆ. ಎಂಬ ಟ್ವೀಟರ್ (ಎಕ್ಸ್) ಬಳಕೆದಾರರು ವಿಮಾನ ಅಪಘಾತದ ಫೋಟೋವನ್ನು ಹಂಚಿಕೊಂಡು, ವಾಷಿಂಗ್ಟನ್ ಡಿಸಿ ಬಳಿ ಸೇನಾ ಹೆಲಿಕಾಪ್ಟರ್ ಮತ್ತು ಪ್ರಯಾಣಿಕ ವಿಮಾನ ಡಿಕ್ಕಿ ಹೊಡೆದ ಪರಿಣಾಮ 27 ಜನರ ಮೃತದೇಹಗಳನ್ನು ನಾವು ವಶಪಡಿಸಿಕೊಂಡಿದ್ದೇವೆ ಎಂದು ಬರೆದಿದ್ದರು.

ಮಹಾಕುಂಭ ಮೇಳ ಕಾಲ್ತುಳಿತ ದುರ್ಘಟನೆ ಚರ್ಚೆಗೆ ಪಟ್ಟು

ರಾಜ್ಯ ಸಭೆಯಲ್ಲಿ ವಿಪಕ್ಷಗಳ ಪ್ರತಿಭಟನೆ

ಹೊಸದಿಲ್ಲಿ: ಉತ್ತರ ಪ್ರದೇಶದ ಪ್ರಯಾಗರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭ ಮೇಳದಲ್ಲಿ ನಡೆದ ಕಾಲ್ತುಳಿತ ದುರ್ಘಟನೆ, ಸಂಸತ್ತಿನ ಬಜೆಟ್ ಅಧಿವೇಶನದಲ್ಲೂ ಪ್ರತಿಧ್ವನಿಸಿದೆ. ಕಾಲ್ತುಳಿದ ದುರ್ಘಟನೆ ಬಗ್ಗೆ ಚರ್ಚೆಗೆ ಅವಕಾಶ ನೀಡಬೇಕು ಮತ್ತು ಕೇಂದ್ರ ಸರ್ಕಾರ ಈ ಕುರಿತು ಸ್ಪಷ್ಟನೆ ನೀಡಬೇಕು ಎಂದು ವಿಪಕ್ಷಗಳು ಪಟ್ಟು ಹಿಡಿದಿದ್ದು, ಲೋಕಸಭೆ ಮತ್ತು ರಾಜ್ಯಸಭೆ ಎರಡರಲ್ಲೂ ವಿರೋಧ ಪಕ್ಷದ ಸಂಸದರು ಘೋಷಣೆಗಳನ್ನು ಕೂಗಿ ಪ್ರತಿಭಟನೆ ನಡೆಸಿದ್ದಾರೆ.

(ಫೆ.3-ಸೋಮವಾರ) ಬಜೆಟ್ ಅಧಿವೇಶನದ ಎರಡನೇ ದಿನದ ಕಲಪ ಆರಂಭವಾಗುತ್ತಿದ್ದಂತೇ, ಲೋಕಸಭೆ ಮತ್ತು ರಾಜ್ಯಸಭೆ ಎರಡರಲ್ಲೂ ವಿರೋಧ ಪಕ್ಷದ ಸಂಸದರು ಮಹಾಕುಂಭ ಮೇಳದ ಕಾಲ್ತುಳಿತ ಪ್ರಕರಣದ ಬಗ್ಗೆ ಚರ್ಚೆಗೆ ಅವಕಾಶ ನೀಡಬೇಕು ಎಂದು ಪಟ್ಟು ಹಿಡಿದರು.

ದುರಂತದಲ್ಲಿ ಸುಮಾರು 30 ಜನರು ಸಾವನ್ನಪ್ಪಿದ್ದು, 60ಕ್ಕೂ ಹೆಚ್ಚು ಜನರ ಗಂಭೀರವಾಗಿ ಗಾಯಗೊಂಡಿದ್ದಾರೆ. ಈ ಘಟನೆಯ ಬಗ್ಗೆ ಕೇಂದ್ರ ಮತ್ತು ಉತ್ತರ ಪ್ರದೇಶ ರಾಜ್ಯ ಸರ್ಕಾರದ ನಿರ್ವಹಣೆಯನ್ನು ವಿರೋಧ ಪಕ್ಷಗಳು ಖಂಡಿಸಿದವು. ಲೋಕಸಭೆಯಲ್ಲಿ ಈ ವಿಚಾರವಾಗಿ ಗದ್ದಲವೇರ್ಪಟ್ಟಾಗ, ಸ್ಪೀಕರ್ ಓಂ ಬಿರ್ಲಾ ಅವರು, ಜನರು ನಿಮ್ಮನ್ನು ಟೇಬಲ್ ಒಡೆಯಲು, ಘೋಷಣೆ ಕೂಗಲು ಮತ್ತು ಸದನದ ಕಲಾಪಗಳಿಗೆ ಅಡ್ಡಿಪಡಿಸಲು ಆಯ್ಕೆ ಮಾಡಿಲ್ಲ, ಚರ್ಚೆ ನಡೆಸಲು ಆಯ್ಕೆ ಮಾಡಿದ್ದಾರೆ. ಎಂದು ಮಾರ್ಮಿಕವಾಗಿ ಹೇಳಿದರು. ರಾಜ್ಯಸಭೆಯಲ್ಲೂ ಇದೇ ರೀತಿಯ ಗದ್ದಲ ಉಂಟಾಗಿ, ವಿರೋಧ ಪಕ್ಷದ ಸದಸ್ಯರು ಸದನದಿಂದ ಹೊರನಡೆದರು. ಸಭಾಪತಿ ಜಗದೀಪ್ ಧನ್ಕರ್ ಅವರ ಪದೇ ಪದೇ ಮನವಿಗೂ ಓಗೊಡದ ವಿಪಕ್ಷ ಸದಸ್ಯರು, ಕೇಂದ್ರ ಮತ್ತು ಉತ್ತರ ಪ್ರದೇಶ ರಾಜ್ಯ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಾ ಕಲಾಪದಿಂದ ಹೊರನಡೆದರು.

ಲೋಕಸಭೆ ಮತ್ತು ರಾಜ್ಯಸಭೆಯಲ್ಲಿ ಪ್ರಮುಖವಾಗಿ ಸಮಾಜವಾದಿ ಪಕ್ಷ ಮತ್ತು ಕಾಂಗ್ರೇಸ್ ಸದಸ್ಯರು, ಪ್ರಯಾಗರಾಜ್ ಮಹಾಕುಂಭ ಮೇಳದಲ್ಲಿ ಸಂಭವಿಸಿದ ಕಾಲ್ತುಳಿತ ದುರಂತದ ಬಗ್ಗೆ ಚರ್ಚೆಗೆ ಪಟ್ಟು ಹಿಡಿದಿದ್ದು ಕಂಡುಬಂದಿತು. ಕೇಂದ್ರ ಮತ್ತು ಉತ್ತರ ಪ್ರದೇಶ ರಾಜ್ಯ ಸರ್ಕಾರ ಕಾಲ್ತುಳಿತ ದುರಂತದ ನೈತಿಕ ಜವಾಬ್ದಾರಿಯನ್ನು ಹೊರಲು ಹಿಂದೇಟು ಹಾಕುತ್ತಿವೆ ಎಂದು ಆರೋಪಿಸಿ ಈ ಪಕ್ಷಗಳ ಸದಸ್ಯರು ಪ್ರತಿಭಟನೆ ನಡೆಸಿದರು.

ತೆರಿಗೆ ವಿಧಿಸುತ್ತಿರುವುದಕ್ಕೆ ವ್ಯಾಪಾರಿಗಳು ಅಸಮಾಧಾನ!

ಕೊಚ್ಚಿ: ಕೇರಳದಲ್ಲಿ ಹೆಚ್ಚು ಬಳಸಲಾಗುವ ಮಾಗಿದ ಬಾಳೆ ಹಣ್ಣಿನಿಂದ ತಯಾರಿಸುವ ಎತ್ತಕ್ಕ ಅಪ್ಪಂ ಕುರುಕಲು ತಿಂಡಿ ಮೇಲೆ ಶೇ.18 ಜಿಎಸ್‌ಟಿ ವಿಧಿಸಿರುವ ವಿಚಾರ ಭಾರಿ ಚರ್ಚೆಗೆ ಗ್ರಾಸವಾಗಿದೆ.

ಕೇರಳದಲ್ಲಿ ಪಳಂಪೊರಿ ಖಾದ್ಯವು ಬಾಳೆ ಹಣ್ಣಿನಿಂದ ತಯಾರಿಸಲಾಗುತ್ತದೆ. ಹೆಚ್ಚಾಗಿ ಸಂಜೆಯ ವೇಳೆ ಚಹಾ ಅಥವಾ ಕಾಫಿ ಸಮಯದಲ್ಲಿ ಕುರುಕುಲು ತಿಂಡಿಯನ್ನು ಬಳಸಲಾಗುತ್ತದೆ. ಸಣ್ಣ ಪ್ರಮಾಣದ ಆಹಾರ ಪದಾರ್ಥಕ್ಕೆ ಶೇ.18ರಷ್ಟು ಜಿಎಸ್‌ಟಿ ವಿಧಿಸಿರುವುದು ಗ್ರಾಹಕರು ಮಾತ್ರವಲ್ಲ ವ್ಯಾಪಾರಿಗಳ ಆಕ್ರೋಶಕ್ಕೆ ಕಾರಣವಾಗಿದೆ.

ಕೇರಳದಲ್ಲಿ ಹೆಚ್ಚು ಪ್ರಸಿದ್ಧಿಯಲ್ಲಿರುವ ಪಳಂಪೊರಿ ಅಥವಾ ಅಡ, ಉಂಡಮ ಉಂಡಂ ಪೊರಿ, ಮಂಡಾ, ಕೊಟ್ಟಿಯಪ್ಪಂ ಸೇರಿದಂತೆ ಬಹುತೇಕ ಕುರುಕುಲ ತಿಂಗಳ ಮೇಲೆ ಶೇ.18ರಷ್ಟು ತೆರಿಗೆ ವಿಧಿಸುತ್ತಿರುವುದಕ್ಕೆ ವ್ಯಾಪಾರಿಗಳು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಪಳಂಪೊರಿ ಊಖಓ ಕೋಡ್ ಹೊಂದಿಲ್ಲ. ನಿರ್ದಿಷ್ಟ ವರ್ಗೀಕರಣಗಳಿಲ್ಲದ ಉತ್ಪನ್ನಗಳು ಹೆಚ್ಚಿನ ತೆರಿಗೆ ವಿಭಾಗಕ್ಕೆ ಸೇರ್ಪಡೆಯಾಗುತ್ತವೆ. ಹೀಗಾಗಿ ಪಳಂಪೊರಿ ಖಾದ್ಯಕ್ಕೆ ಶೇ.18 ಜಿಎಸ್‌ಟಿ ಕಡಿತವಾಗಿದೆ ಎಂದು ವರದಿಯಾಗಿದೆ. ಕೇವಲ 6-8 ತಾಸು ಉಳಿಯುವ ಹಲವಾರು ಖಾದ್ಯಗಳು ಹೆಚ್ಚಿನ ತೆರಿಗೆ ವ್ಯಾಪ್ತಿಗೆ ಸೇರ್ಪಡೆಯಾಗಿವೆ. ಇವುಗಳನ್ನು ಜಿಎಸ್‌ಟಿ ವ್ಯಾಪ್ತಿಯಲ್ಲಿ ಹೇಗೆ ವಿಭಾಗಿಸಲಾಗಿದೆ

ಟಾಕ್ಸಿಕ್ ಚಿತ್ರೀಕರಣ ಚುರುಕು

ಯಶ್, ನಾಲ್ವರು ನಾಯಕಿಯರು ಬೆಂಗಳೂರಿನಲ್ಲಿ ಶೂಟಿಂಗ್!

ತೀವ್ರ ನಿರೀಕ್ಷೆ ಹುಟ್ಟುಹಾಕಿರುವ ರಾಕಿಂಗ್ ಸ್ಟಾರ್ ಯಶ್ ಅಭಿನಯದ ಟಾಕ್ಸಿಕ್ ಚಿತ್ರದ ಚಿತ್ರೀಕರಣ ಭರದಿಂದ ಸಾಗುತ್ತಿದೆ. ಚಿತ್ರಕ್ಕೆ ಮಲಯಾಳಂನ ಗೀತು ಮೋಹನ್‌ದಾಸ್ ಆಯಕ್ಷನ್ ಕಟ್ ಹೇಳಿದ್ದು, ಮುಂಬೈ ಮತ್ತು ಗೋವಾದಲ್ಲಿ ಚಿತ್ರೀಕರಣ ಪೂರೈಸಿದ ನಂತರ ಇದೀಗ ಚಿತ್ರತಂಡ ಬೆಂಗಳೂರಿನಲ್ಲಿ ಚಿತ್ರೀಕರಣ ಪ್ರಾರಂಭಿಸಿದೆ.

ಟಾಕ್ಸಿಕ್ ಚಿತ್ರಕ್ಕಾಗಿ ಒಂದಾಗಿರುವ ಬಾಲಿವುಡ್ ನಟಿ ಕಿಯಾರಾ ಅಡ್ವಾಣಿ, ನಯನತಾರಾ, ತಾರಾ ಸುತಾರಿಯಾ ಮತ್ತು ಹುಮಾ ಖುರೇಷಿ ಇದೀಗ ಉದ್ಯಾನ ನಗರಿಯಲ್ಲಿ ಒಟ್ಟಾಗಿ ಚಿತ್ರೀಕರಣದಲ್ಲಿ ಪಾಲ್ಗೊಂಡಿದ್ದಾರೆ ಎನ್ನಲಾಗಿದೆ. ಈ ಹಿಂದೆ ಎಲ್ಲರೂ ತಮ್ಮ ಕೆಲವು ಭಾಗಗಳನ್ನು ಚಿತ್ರೀಕರಣ ನಡೆಸಿದ್ದು, ಇದೀಗ ಒಟ್ಟಾಗಿ ಬೆಂಗಳೂರಿನಲ್ಲಿ ಚಿತ್ರೀಕರಣ ನಡೆಸುತ್ತಿದ್ದಾರೆ ಎನ್ನಲಾಗಿದೆ.

ಸೆಟ್‌ನಲ್ಲಿ ಎಲ್ಲರೂ ಉತ್ತಮ ಬಾಂಧವ್ಯದಿಂದ ಇರುವುದಾಗಿ ಮೂಲಗಳು ತಿಳಿಸಿವೆ. ಇತ್ತೀಚೆಗೆ ಹುಮಾ ಖುರೇಷಿ ಅವರು ತಮ್ಮ ಪುಸ್ತಕ ಝೀಬಾವನ್ನು ಬಿಡುಗಡೆ ಮಾಡಿದ್ದಾರೆ. ಟಾಕ್ಸಿಕ್ ಚಿತ್ರದ ಎಲ್ಲಾ ಪಾತ್ರವರ್ಗಗಳಿಗೆ ತನ್ನ ಪುಸ್ತಕದ ಪ್ರತಿಗಳನ್ನು ಉಡುಗೊರೆಯಾಗಿ ನೀಡಿದ್ದಾರೆ. ಕಿಯಾರಾ ಅಡ್ವಾಣಿ ಮತ್ತು ತಾರಾ ಸುತಾರಿಯಾ ಅವರು ತಮ್ಮ ಸಾಮಾಜಿಕ ಮಾಧ್ಯಮ ವೇದಿಕೆಗಳಲ್ಲಿ ಹುಮಾ ಅವರ ಈ ಕೆಲಸಕ್ಕೆ ಮೆಚ್ಚುಗೆ ಸೂಚಿಸಿದ್ದಾರೆ. ಬಹು ತಾರಾಗಣವನ್ನು ಹೊಂದಿರುವ ಟಾಕ್ಸಿಕ್ ಚಿತ್ರದ ಚಿತ್ರೀಕರಣ ಕ್ಷಿಪ್ರಗತಿಯಲ್ಲಿ ಸಾಗುತ್ತಿದ್ದು, 2025ರ ಕೊನೆಯಲ್ಲಿ ಬಿಡುಗಡೆ ಮಾಡುವ ಗುರಿಯನ್ನು ಚಿತ್ರತಂಡ ಹೊಂದಿರಬಹುದು ಎಂದು ಹೇಳಲಾಗಿದೆ. ಆದರೆ, ಚಿತ್ರತಂಡ ಈ ಬಗ್ಗೆ ಯಾವುದೇ ಮಾಹಿತಿಯನ್ನು ನೀಡಿಲ್ಲ. ಬ್ರಿಟಿಷ್ ನಟರಾದ ಡ್ಯಾರೆಲ್ ಡಿ'ಸಿಲ್ವಾ ಮತ್ತು ಬೆನೆಡಿಕ್ಟ್ ಗ್ಯಾರೆಟ್ ಅವರು ಟಾಕ್ಸಿಕ್‌ನಲ್ಲಿ ನಟಿಸುತ್ತಿದ್ದು, ಇದು ಚಿತ್ರಕ್ಕೆ ಅಂತರರಾಷ್ಟ್ರೀಯ ಮಟ್ಟದಲ್ಲಿ ಆಕರ್ಷಣೆಯನ್ನು ಮತ್ತಷ್ಟು ಹೆಚ್ಚಿಸಿದೆ. ಚಿತ್ರಕ್ಕೆ ರಾಜೀವ್ ರವಿ ಅವರ ಛಾಯಾಗ್ರಹಣ ಮಾಡಿದ್ದು, ಪ್ರಮುಖ ಆಕ್ಷನ್ ಸೀಕ್ವೆನ್ಸ್‌ಗಳು ಈ ಕಥಾಹಂದರದ ಭಾಗವಾಗಿದೆ.

ನಯನಾ ಕಿರುತೆರೆಯಿಂದ ಬ್ಯಾನ್!

ಧಾರಾವಾಹಿ ಬಿಡುವ ನಿರ್ಧಾರ

ಪಾಪ ಪಾಂಡು ಹಾಗೂ ಗಿಣಿರಾಮದಂತಹ ಸೂಪರ್ ಹಿಟ್ ಧಾರಾವಾಹಿಗಳಲ್ಲಿ ನಟಿಸಿದ್ದ ನಯನಾ ನಾಗರಾಜ್ ಅವರನ್ನು ಕಿರುತೆರೆಯ ಎಲ್ಲಾ ಕಾರ್ಯಕ್ರಮಗಳಿಂದ ಬ್ಯಾನ್ ಮಾಡಲಾಗಿದೆ.

ಗಿಣಿರಾಮ ಧಾರಾವಾಹಿಯಲ್ಲಿ ಮುಖ್ಯಪಾತ್ರದಲ್ಲಿ ಕಾಣಿಸಿಕೊಂಡಿದ್ದ ನಯನಾ ನಾಗರಾಜ್ ಅವರನ್ನು ಕಳೆದ ವರ್ಷ ಧಾರಾವಾಹಿಗಳಿಂದ ಬ್ಯಾನ್ ಮಾಡಲಾಗಿದೆಯಂತೆ. ಈ ವಿಚಾರವನ್ನು ಸ್ವತಃ ನಯನಾ ನಾಗರಾಜ್ ಇತ್ತೀಚೆಗೆ ಖಾಸಗಿ ಮಾಧ್ಯಮಕ್ಕೆ ನೀಡಿದ ಸಂದರ್ಶನದಲ್ಲಿ ಹೇಳಿಕೊಂಡಿದ್ದಾರೆ.

ತಾವು ನಟಿಸುತ್ತಿದ್ದ ಧಾರಾವಾಹಿ ತಂಡದಲ್ಲಿ ವ್ಯಕ್ತಿಯೊಬ್ಬನಿಂದ ಮಾನಸಿಕ ಹಿಂಸೆಯಾಗುತ್ತಿತ್ತು. ಆತನ ಕಮೆಂಟ್‌ಗೆ ಎದುರೇಟು ಕೊಟ್ಟಿದ್ದಕ್ಕೆ ಆತ ಒಂದು ವರ್ಷ ನನ್ನ ಬದುಕನ್ನು ನರಕ ಮಾಡಿದ. ಹೀಗಾಗಿ ಆತನ ಮೇಲೆ ವಾಹಿನಿಗೆ ದೂರು ನೀಡಿದೆ. ಇದರಿಂದ ಹಿಂಸೆ ಇನ್ನಷ್ಟು ಜಾಸ್ತಿ ಆಯ್ತು. ಬಳಿಕ ಧಾರಾವಾಹಿ ಬಿಡುವ ನಿರ್ಧಾರ ಮಾಡಿದೆ. ಕೊನೆಗೆ ಧಾರಾವಾಹಿ ಕಥೆ ಅಂತ್ಯಗೊಳಿಸಲಾಯಿತು. ಇದರಿಂದ ತಮ್ಮ ಧಾರಾವಾಹಿಗೆ ಕೋಟ್ಯಂತರ ರೂಪಾಯಿ ನಷ್ಟವಾಗಿತು ಎಂದು ಆರೋಪಿಸಿ ನನ್ನ ವಿರುದ್ಧ ದೂರು ನೀಡಿದರು. ಇದೇ ಕಾರಣದಿಂದ ನಾನು ಧಾರಾವಾಹಿ ಮಾಡದಂತೆ ನಿಷೇಧ ವಿಧಿಸಲಾಯಿತು ಎಂದು ನಟಿ ನಯನಾ ಹೇಳಿಕೊಂಡಿದ್ದಾರೆ.

ಗ್ಯಾಮಿ ರೆಡ್ ಕಾರ್ಪೆಟ್‌ನಲ್ಲಿ ಸಂಪೂರ್ಣ ಬೆತ್ತಲಾದ ಬಿಯಾಂಕಾ

ಅಲ್ಲಿದ್ದ ಅನೇಕರಿಗೆ ಮುಜುಗರ

ಅಮೆರಿಕದ ಜನಪ್ರಿಯ ರ‍್ಯಾಪ್ ಗಾಯಕ ಕಾನ್ಯೇ ವೆಸ್ಟ್ ಅವರು ಒಂದಷ್ಟು ವಿವಾದಗಳನ್ನು ಮಾಡಿಕೊಂಡಿದ್ದಾರೆ. ಆ ವಿವಾದಗಳ ಸಾಲಿಗೆ ಈಗ ಹೊಸದೊಂದು ಸೇರಿಕೊಂಡಿದೆ. ಫೆಬ್ರವರಿ 2ರಂದು ನಡೆದ ಗ್ಯಾಮಿ ಅವಾರ್ಡ್ ಸಮಾರಂಭದಲ್ಲಿ ಕಾನ್ಯೇ ವೆಸ್ಟ್ ಅವರು ಪತ್ನಿ ಬಿಯಾಂಕಾ ಸೆನ್ಸೊರಿ ಜೊತೆ ಕಾಣಿಸಿಕೊಂಡರು. ಈ ವೇಳೆ ಬಿಯಾಂಕಾ ಅವರು ಸಂಪೂರ್ಣ ಬೆತ್ತಲಾದರು! ಈ ಘಟನೆಯಿಂದ ಅಲ್ಲಿದ್ದ ಅನೇಕರಿಗೆ ಮುಜುಗರ ಆಯಿತು. ಕೂಡಲೇ ಕಾನ್ಯೇ ವೆಸ್ಟ್ ಮತ್ತು ಬಿಯಾಂಕಾ ಸೆನ್ಸೊರಿ ಅವರನ್ನು ಅಲ್ಲಿಂದ ಹೊರಗೆ ಕಳಿಸಲಾಯಿತು.

ಅವಾರ್ಡ್ ಫಂಕ್ಷನ್ ಎಂದರೆ ರೆಡ್ ಕಾರ್ಪೆಟ್ ಇರಲೇಬೇಕು. ರೆಡ್ ಕಾರ್ಪೆಟ್ ಮೇಲೆ ಹೆಜ್ಜೆ ಹಾಕಿ ಪೋಸ್ ನೀಡುವ ಸೆಲೆಬ್ರಿಟಿಗಳು ಬಗೆಬಗೆಯ ಕಾಸ್ಟ್ಯೂಮ್ ಧರಿಸಿ ಬರುತ್ತಾರೆ. ಕೆಲವು ಸೆಲೆಬ್ರಿಟಿಗಳ ಬಟ್ಟೆಗಳು ತುಂಬ ಬೋಲ್ಡ್ ಆಗಿರುತ್ತವೆ. ಆದರೆ ಎಲ್ಲದಕ್ಕೂ ಇತಿ ಮಿತಿ ಇರಬೇಕು. ಕಾನ್ಯೇ ವೆಸ್ಟ್ ಪತ್ನಿ ಬಿಯಾಂಕಾ ಸೆನ್ಸೊರಿ ಅವರು ಆ ಎಲ್ಲಾ ಮಿತಿಗಳನ್ನು ಮೀರಿದ್ದಾರೆ.

ಮೊದಲು ರೆಡ್ ಕಾರ್ಪೆಟ್‌ಗೆ ಬರುವಾಗ ಬಿಯಾಂಕಾ ಸೆನ್ಸೊರಿ ಅವರು ದೊಡ್ಡದಾಗಿ ಕೋಟ್ ಧರಿಸಿದ್ದರು. ಮಾಧ್ಯಮಗಳ ಕ್ಯಾಮೆರಾ ಎದುರು ಬಂದು ನಿಂತ ಬಳಿಕ ಅವರು ಆ ಕೋಟ್ ಬಿಚ್ಚಿದರು. ಆಗ ಎಲ್ಲರಿಗೂ ಶಾಕ್ ಆಯಿತು. ಯಾಕೆಂದರೆ, ಪ್ಲಾಸ್ಟಿಕ್ ರೀತಿಯ ಸಂಪೂರ್ಣ ಪಾರದರ್ಶಕವಾದ ಉಡುಗೆಯನ್ನು ಧರಿಸಿ ಅವರು ಕಾಣಿಸಿಕೊಂಡರು. ಅವರು ಒಳಉಡುಪು ಕೂಡ ಧರಿಸಿರಲಿಲ್ಲ! ಪತ್ನಿಯ ಈ ಹುಚ್ಚಾಟಕ್ಕೆ ಕಾನ್ಯೇ ವೆಸ್ಟ್ ಕೂಡ ಸಾಥ್ ನೀಡಿದರು. ಆದರೆ ಈ ದಂಪತಿಯ ಅತಿರೇಕವನ್ನು ಆಯೋಜಕರು ಸಹಿಸಲಿಲ್ಲ. ಕೂಡಲೇ ಅವರಿಬ್ಬರನ್ನು ಹೊರಗೆ ಕಳಿಸಲಾಯಿತು ಎಂದು ವರದಿ ಆಗಿದೆ. ಸೋಶಿಯಲ್ ಮೀಡಿಯಾದಲ್ಲಿ ಬಿಯಾಂಕಾ ಅವರ ವಿರುದ್ಧ ಖಂಡನೆ ವ್ಯಕ್ತವಾಗುತ್ತಿದೆ. ಅವರನ್ನು ಬಂಧಿಸಬೇಕು ಎಂದು ಕೂಡ ನೆಟ್ಟಿಗರು ಒತ್ತಾಯಿಸಿದ್ದಾರೆ. ರೆಡ್ ಕಾರ್ಪೆಟ್‌ನಲ್ಲಿ ಬಿಯಾಂಕಾ ಬೆತ್ತಲಾದ ವಿಡಿಯೋ ವೈರಲ್ ಆಗಿದೆ.

ಸ್ಯಾಂಡಲ್‌ವುಡ್‌ಗೆ ಮಹಾನಟಿ ವಿನ್ನರ್ ಎಂಟ್ರಿ

ಪಳುಮಲೆಯ ಮಡಿಲಲ್ಲಿ ಎದೆ ನಡುಗಿಸಿದ ಪ್ರೇಮಕಥೆಯ ನಾಯಕನಾಗಿ ಕ್ರೇಜಿ ಕ್ವೀನ್ ರಕ್ಷಿತಾ ಸಹೋದರ ರಾಣಾರನ್ನು ಪರಿಚಯಿಸಿದ್ದ ಸ್ಟಾರ್ ಡೈರೆಕ್ಟರ್ ತರುಣ್ ಸುಧೀರ್ ಈಗ ನಾಯಕಿಯನ್ನು ಘೋಷಣೆ ಮಾಡಿದ್ದಾರೆ. 'ಕಾಟೇರ' ಯಶಸ್ಸಿನ ಬಳಿಕ ತರುಣ್ ಅವರು ಅಟ್ಲಾಂಟಾ ನಾಗೇಂದ್ರ ಎಂಬುವವರ ಜೊತೆಗೂಡಿ ನಿರ್ಮಿಸುತ್ತಿರುವ ಹೊಸ ಕಥೆಗೆ ಹೊಸ ನಾಯಕಿಯನ್ನು ಕರೆ ತಂದಿದ್ದಾರೆ.

ತರುಣ್ ಸುಧೀರ್ ಬಳಗದಲ್ಲಿ ಕೆಲಸ ಮಾಡಿರುವ ಪುನೀತ್ ರಂಗಸ್ವಾಮಿ ಎಂಬುವವರ ಚೊಚ್ಚಲ ನಿರ್ದೇಶನದಲ್ಲಿ ಮೂಡಿ ಬರುತ್ತಿರುವ ನೈಜ ಘಟನೆಯ ಪ್ರೇಮಕಥೆಯಲ್ಲಿ ಮೈಸೂರಿನ ಪ್ರಿಟಿ ಪ್ರಿಯಾಂಕಾ ಆಚಾರ್ ನಾಯಕಿಯಾಗಿ ನಟಿಸುತ್ತಿದ್ದಾರೆ. 'ಮಹಾನಟಿ' ಶೋ ವಿನ್ನರ್ ಪಟ್ಟ ಪಡೆದಿದ್ದ ಪ್ರಿಯಾಂಕಾ ಆಚಾರ್ ಅವರು ತರುಣ್ ನಿರ್ಮಾಣದ ಚಿತ್ರದಲ್ಲಿ ನಾಯಕಿಯಾಗಿ ಚಿತ್ರರಂಗಕ್ಕೆ ಮೊದಲ ಹೆಜ್ಜೆ ಇಡುತ್ತಿದ್ದಾರೆ.

'ಮಹಾನಟಿ' ಶೋ ಜಡ್ಜ್ ಆಗಿದ್ದಾಗ್ಲೇ ಪ್ರಿಯಾಂಕಾ ಅಭಿನಯವನ್ನು ತರುಣ್ ಸುಧೀರ್ ಮೆಚ್ಚಿಕೊಂಡಿದ್ದರು. ಇದೀಗ ಅವರದ್ದೇ ನಿರ್ಮಾಣದ ಚಿತ್ರದಲ್ಲಿ ಹೀರೋಯಿನ್ ಆಗಿ ನಟಿಸುವ ಬೊಂಬಾಟ್ ಚಾನ್ಸ್ ಪ್ರಿಯಾಂಕಾಗೆ ಸಿಕ್ಕಿದೆ. ಮೂಲತಃ ಮೈಸೂರಿನವರಾದ ಪ್ರಿಯಾಂಕಾ ನಟಿಯಬೇಕು ಎಂಬ ಕನಸಿತ್ತು. ಆ ಕನಸಿಗೆ ತರುಣ್ ಸಾಥ್ ಕೊಡುತ್ತಿದ್ದಾರೆ.

ಮಹಾ ಕುಂಭಮೇಳದಲ್ಲಿ ಭಾಗಿಯಾದ 'ಕೆಜಿಎಫ್ 2' ಕ್ವೀನ್

ಪ್ರಯಾಗ್‌ರಾಜ್ ಮಹಾ ಕುಂಭಮೇಳದಲ್ಲಿ ದಿನದಿಂದ ದಿನಕ್ಕೆ ಭಕ್ತಸಾಗರ ಹರಿದು ಬರುತ್ತಿದೆ. ಅಪಾರ ಸಂಖ್ಯೆಯಲ್ಲಿ ಕುಂಭ ಮೇಳದಲ್ಲಿ ಜನ ಭಾಗಿಯಾಗುತ್ತಿದ್ದಾರೆ. ಇದರ ನಡುವೆ 'ಕೆಜಿಎಫ್ 2' ನಟಿ ಶ್ರೀನಿಧಿ ಶೆಟ್ಟಿ ಅವರು ಮಾಸ್ಕ್ ಹಾಕಿಕೊಂಡೇ ಕುಂಭಮೇಳದಲ್ಲಿ ಭಾಗಿಯಾಗಿದ್ದಾರೆ. ತಮ್ಮ ಈ ಆಧ್ಯಾತ್ಮಿಕ ಅನುಭವನ್ನು ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ. ಮೌನಿ ಅಮಾವಾಸ್ಯೆಯಂದು ಮಹಾಕುಂಭ ಮೇಳದಲ್ಲಿನ ತ್ರಿವೇಣಿ ಸಂಗಮದಲ್ಲಿ ನಾನು ಪವಿತ್ರವಾದ ಸ್ನಾನ ಮಾಡುತ್ತೇನೆ ಎಂದು ಕನಸು ಮನಸಿನಲ್ಲಿಯೂ ಕೂಡ ಅಂದುಕೊಂಡಿರಲಿಲ್ಲ. ಈ ಅದ್ಭುತವಾದ ಅನುಭವವನ್ನು ನಾನು ಸಂಪೂರ್ಣವಾಗಿ ಅನುಭವಿಸಿದ್ದೇನೆ ಎಂದು ಬರೆದುಕೊಂಡಿದ್ದಾರೆ.

ಬದುಕು ಅಚ್ಚರಿಯ ಸಂತೆ ಈ ದೈವಿಕ ಅನುಗ್ರಹ ಮತ್ತು ಆಶೀರ್ವಾದದಿಂದ ನನ್ನ ಹೃದಯ ತುಂಬಿದೆ ಎಂದು ಹೇಳಿದ್ದಾರೆ. ಅಂದಹಾಗೆ, ಯಶ್‌ಗೆ ನಾಯಕಿಯಾಗಿ 'ಕೆಜಿಎಫ್' ಮತ್ತು 'ಕೆಜಿಎಫ್ 2' ಸಿನಿಮಾದಲ್ಲಿ ಅವರು ನಟಿಸಿದ್ದಾರೆ. ಈ ಚಿತ್ರದ ಸಕ್ಸಸ್ ಬಳಿಕ ತೆಲುಗು ಹಾಗೂ ತಮಿಳಿನಲ್ಲಿ ಬ್ಯುಸಿಯಾಗಿದ್ದಾರೆ. ಸದ್ಯ ನ್ಯಾಚುರಲ್ ಸ್ಟಾರ್ ನಾನಿಗೆ ನಾಯಕಿಯಾಗಿ 'ಹಿಟ್ 3' ಸಿನಿಮಾದಲ್ಲಿ ನಟಿಸಿದ್ದಾರೆ.

ಬೆಂಗಳೂರಿನ ಪಂದ್ಯಗಳಿಗೆ ಬುಮ್ರಾ ಚಾಂಪಿಯನ್ಸ್ ಟ್ರೋಫಿ ಕೈತಪ್ಪಿ ಹೋಗ್ತಾ?

ವೈದ್ಯಕೀಯ ತಂಡದಿಂದ ಕ್ಲೀನ್ ಚಿಟ್ ಪಡೆದರೆ ಮಾತ್ರ

ಐಸಿಸಿ ಚಾಂಪಿಯನ್ಸ್ ಟ್ರೋಫಿ ಇದೇ ಫೆಬ್ರವರಿ 19 ರಿಂದ ಆರಂಭವಾಗಲಿದೆ. ಈ ಟೂರ್ನಿಗೆ ಎಲ್ಲ ತಂಡಗಳನ್ನೂ ಪ್ರಕಟಿಸಲಾಗಿದೆ. ಇತ್ತೀಚೆಗಷ್ಟೇ ಬಿಸಿಸಿಐ ಕೂಡ 15 ಸದಸ್ಯರ ತಂಡವನ್ನು ಆಯ್ಕೆ ಮಾಡಿದ್ದು, ಇದರಲ್ಲಿ ವೇಗದ ಬೌಲರ್ ಜಸ್ಪ್ರೀತ್ ಬುಮ್ರಾ ಅವರ ಹೆಸರೂ ಸೇರಿದೆ. ಆದರೆ 2025ರ ಚಾಂಪಿಯನ್ಸ್ ಟ್ರೋಫಿಯಲ್ಲಿ ಜಸ್ಪ್ರೀತ್ ಬುಮ್ರಾ ಆಡುತ್ತಾರಾ ಅಥವಾ ಇಲ್ಲವಾ ಎಂಬುದು ಇನ್ನೂ ನಿರ್ಧಾರವಾಗಿಲ್ಲ. ವಾಸ್ತವವಾಗಿ, ಆಸ್ಟ್ರೇಲಿಯಾ ವಿರುದ್ಧದ ಕೊನೆಯ ಟೆಸ್ಟ್ ಪಂದ್ಯದ ಸಂದರ್ಭದಲ್ಲಿ ಗಾಯಗೊಂಡಿದ್ದ ಬುಮ್ರಾ ಅಂದಿನಿಂದ ತಂಡದಿಂದ ಹೊರಗಿದ್ದು, ವಿಶ್ರಾಂತಿಯಲ್ಲಿದ್ದಾರೆ. ಏತನ್ಮಧ್ಯೆ, ಬುಮ್ರಾ ಬಗ್ಗೆ ದೊಡ್ಡ ಅಪ್‌ಡೇಟ್ ಹೊರಬಿದ್ದಿದೆ.

ಬುಮ್ರಾ ಫಿಟ್ನೆಸ್ ಬಗ್ಗೆ ಬಿಗ್ ಅಪ್ಡೇಟ್

ಜಸ್ಪ್ರೀತ್ ಬುಮ್ರಾ ಪ್ರಸ್ತುತ ಬೆನ್ನುನೋವಿನ ಸಮಸ್ಯೆಯಿಂದ ಬಳಲುತ್ತಿದ್ದಾರೆ. ಹೀಗಾಗಿ ಬುಮ್ರಾ ಬೆಂಗಳೂರಿನ ರಾಷ್ಟ್ರೀಯ ಕ್ರಿಕೆಟ್ ಅಕಾಡೆಮಿಗೆ ಆಗಮನಿಸಿದ್ದು ಕನಿಷ್ಠ ಮೂರು ದಿನಗಳ ಕಾಲ ಇಲ್ಲಿಯೇ ಉಳಿಯಲಿದ್ದಾರೆ ಎಂದು ವರದಿಯಾಗಿದೆ. ಈ ಸಮಯದಲ್ಲಿ ಬಿಸಿಸಿಐನ ಸೆಂಟರ್ ಆಫ್ ಎಕ್ಸಲೆನ್ಸ್‌ನಲ್ಲಿ ವೈದ್ಯಕೀಯ ತಂಡದ ಮೇಲ್ವಿಚಾರಣೆಯಲ್ಲಿರುವ ಜಸ್ಪ್ರೀತ್ ಬುಮ್ರಾಗೆ ಇಲ್ಲಿಯೇ ಸ್ಕ್ಯಾನ್ ಕೂಡ ಮಾಡಲಾಗುತ್ತದೆ. ಇದರ ನಂತರ, ಸೆಂಟರ್ ಆಫ್ ಎಕ್ಸಲೆನ್ಸ್‌ನ ತಜ್ಞರು ತಮ್ಮ ವರದಿಯನ್ನು ರಾಷ್ಟ್ರೀಯ ಆಯ್ಕೆ ಸಮಿತಿಗೆ ಸಲ್ಲಿಸುತ್ತಾರೆ. ಬುಮ್ರಾ ವೈದ್ಯಕೀಯ ತಂಡದಿಂದ ಕ್ಲೀನ್ ಚಿಟ್ ಪಡೆದರೆ ಮಾತ್ರ ಚಾಂಪಿಯನ್ಸ್ ಟ್ರೋಫಿಯಲ್ಲಿ ಆಡಲು ಸಾಧ್ಯವಾಗುತ್ತದೆ.

ಇನ್ನು ಚಾಂಪಿಯನ್ಸ್ ಟ್ರೋಫಿಗೆ ಟೀಂ ಇಂಡಿಯಾವನ್ನು ಪ್ರಕಟಿಸುವ ಸಮಯದಲ್ಲಿ ಮಾತನಾಡಿದ್ದ ಮುಖ್ಯ ಆಯ್ಕೆಗಾರ ಅಜಿತ್ ಅಗರ್ಕರ್, 'ಬುಮ್ರಾ ಅವರಿಗೆ ಐದು ವಾರಗಳ ಕಾಲ ವಿಶ್ರಾಂತಿ ನೀಡಲಾಗಿದ್ದು, ಇಂಗ್ಲೆಂಡ್ ವಿರುದ್ಧದ ಮೊದಲ ಎರಡು ಏಕದಿನ ಪಂದ್ಯಗಳಿಗೆ ಅವರು ಲಭ್ಯರಿರುವುದಿಲ್ಲ ಎಂದು ಹೇಳಿದ್ದರು. ಅಂದರೆ, ಬುಮ್ರಾ ಬೇಗ ಚೇತರಿಸಿಕೊಂಡರೆ ಸರಣಿಯ ಕೊನೆಯ ಪಂದ್ಯದಲ್ಲಿ ಆಡಬಹುದು. ಅಥವಾ ನೇರವಾಗಿ ಅವರು ಚಾಂಪಿಯನ್ಸ್ ಟ್ರೋಫಿಯಲ್ಲಿ ಕಣಕ್ಕಿಳಿಯಬಹುದು. ಬಾರ್ಡರ್-ಗವಾಸ್ಕರ್ ಟ್ರೋಫಿ ಟೆಸ್ಟ್ ಸರಣಿಯ ಕೊನೆಯ ಪಂದ್ಯದ ಎರಡನೇ ದಿನದಂದು, ಜಸ್ಪ್ರೀತ್ ಬುಮ್ರಾ ಇದ್ದಕ್ಕಿದ್ದಂತೆ ಮೈದಾನದಿಂದ ನಿರ್ಗಮಿಸಿದ್ದರು. ಇದಾದ ನಂತರ ಅವರನ್ನು ಆಸ್ಪತ್ರೆಗೆ ಕರೆ ದೊಯ್ಯಲಾಗಿತ್ತು. ವಾಸ್ತವವಾಗಿ ಬುಮ್ರಾ ಈ ಸಮಸ್ಯೆಗೆ ತುತ್ತಾಗುತ್ತಿರುವುದು ಇದೇ ಮೊದಲಲ್ಲ. ಕಳೆದ ವರ್ಷವೂ ಕೂಡ ಬುಮ್ರಾ ನ್ಯೂಜಿಲೆಂಡ್‌ನ ಕ್ರೈಸ್ಟ್‌ಚರ್ಚ್‌ನಲ್ಲಿ ಬೆನ್ನಿನ ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದರು. ಅದಕ್ಕೂ ಮುನ್ನ ಜೂನ್ 2022 ರಲ್ಲಿ ಬೆನ್ನು ನೋವಿಗೆ ತುತ್ತಾಗಿದ್ದ ಬುಮ್ರಾ ದೀರ್ಘಕಾಲ ಮೈದಾನದಿಂದ ಹೊರಗುಳಿದಿದ್ದರು. ಇದೀಗ ಮತ್ತದೇ ಸಮಸ್ಯೆಯಿಂದ ಬಳಲುತ್ತಿರುವ ಬುಮ್ರಾ ಬೇಗ ಚೇತರಿಸಿಕೊಂಡು ಮೈದಾನಕ್ಕಿಳಿಯಲಿ ಎಂಬುದು ಅಭಿಮಾನಿಗಳ ಆಶಯವಾಗಿದೆ.

ವಿರಾಟ್ ಕೊಹ್ಲಿಯನ್ನು ಹಿಂದಿಕ್ಕಿದ ಡೇವಿಡ್ ವಾರ್ನರ್

ದುಬೈನಲ್ಲಿ ನಡೆಯುತ್ತಿರುವ ಇಂಟರ್‌ನ್ಯಾಷನಲ್ ಲೀಗ್ ಟಿ20 ಟೂರ್ನಿಯಲ್ಲಿ ಡೇವಿಡ್ ವಾರ್ನರ್ ಅಬ್ಬರಿಸಿದ್ದಾರೆ. ಭಾನುವಾರ ನಡೆದ ಅಬುಧಾಬಿ ನೈಟ್ ರೈಡರ್ಸ್ ವಿರುದ್ಧದ ಪಂದ್ಯದಲ್ಲಿ ದುಬೈ ಕ್ಯಾಪಿಟಲ್ಸ್ ಪರ ಆರಂಭಿಕನಾಗಿ ಕಣಕ್ಕಿಳಿದ ಡೇವಿಡ್ ವಾರ್ನರ್ 57 ಎಸೆತಗಳಲ್ಲಿ 1 ಸಿಕ್ಸ್ ಹಾಗೂ 12 ಫೋರ್‌ಗಳೊಂದಿಗೆ ಅಜೇಯ 93 ರನ್ ಚಚಿದ್ದಾರೆ. ಈ 93 ರನ್‌ಗಳೊಂದಿಗೆ ಡೇವಿಡ್ ವಾರ್ನರ್ ಟಿ20 ರನ್ ಸರದಾರರ ಪಟ್ಟಿಯಲ್ಲಿ 5ನೇ ಸ್ಥಾನಕ್ಕೇರಿದ್ದಾರೆ. ಅದು ಕೂಡ ರನ್ ಮೆಷಿನ್ ವಿರಾಟ್ ಕೊಹ್ಲಿಯನ್ನು ಹಿಂದಿಕ್ಕುವ ಮೂಲಕ ಎಂಬುದು ವಿಶೇಷ. ಅಂದರೆ ಟಿ20 ರನ್ ಸರದಾರರ ಟಾಪ-5 ಪಟ್ಟಿಯಲ್ಲಿ ಈ ಹಿಂದೆ ವಿರಾಟ್ ಕೊಹ್ಲಿ ಕಾಣಿಸಿಕೊಂಡಿದ್ದರು. 2007 ರಿಂದ 2024 ರವರೆಗೆ 382 ಟಿ20 ಇನಿಂಗ್ಸ್ ಆಡಿರುವ ವಿರಾಟ್ ಕೊಹ್ಲಿ 9 ಭರ್ಜರಿ ಶತಕ ಹಾಗೂ 97 ಅರ್ಧಶತಕಗಳೊಂದಿಗೆ ಒಟ್ಟು 12886 ರನ್ ಕಲೆಹಾಕಿದ್ದಾರೆ.

ಈ ಮೂಲಕ ಟಿ20 ಕ್ರಿಕೆಟ್‌ನಲ್ಲಿ ಅತ್ಯಧಿಕ ರನ್ ಕಲೆಹಾಕಿದ ಭಾರತೀಯ ಹಾಗೂ ವಿಶ್ವದ 5ನೇ ಬ್ಯಾಟರ್ ಎನಿಸಿಕೊಂಡಿದ್ದರು.

ಇದೀಗ ವಿರಾಟ್ ಕೊಹ್ಲಿಯನ್ನು ಹಿಂದಿಕ್ಕಿ ಡೇವಿಡ್ ವಾರ್ನರ್ ಐದನೇ ಸ್ಥಾನಕ್ಕೇರಿದ್ದಾರೆ. ಈವರೆಗೆ 397 ಟಿ20 ಇನಿಂಗ್ಸ್ ಆಡಿರುವ ವಾರ್ನರ್ 8 ಶತಕ ಹಾಗೂ 108 ಅರ್ಧಶತಕಗಳೊಂದಿಗೆ ಒಟ್ಟು 12909 ರನ್ ಕಲೆಹಾಕಿದ್ದಾರೆ. ಈ ಮೂಲಕ ಟಿ20 ಕ್ರಿಕೆಟ್‌ನಲ್ಲಿ ಅತ್ಯಧಿಕ ರನ್ ಗಳಿಸಿದ ಟಾಪ-5 ಬ್ಯಾಟರ್‌ಗಳ ಪಟ್ಟಿಯಲ್ಲಿ ಐದನೇ ಸ್ಥಾನ ಅಲಂಕರಿಸಿದ್ದಾರೆ. ಇನ್ನು ಟಿ20 ಕ್ರಿಕೆಟ್‌ನಲ್ಲಿ ಅತ್ಯಧಿಕ ರನ್ ಕಲೆಹಾಕಿದ ವಿಶ್ವದಾಖಲೆ ವೆಸ್ಟ್ ಇಂಡೀಸ್‌ನ ಕ್ರಿಸ್ ಗೇಲ್ ಹೆಸರಿನಲ್ಲಿದೆ. 2005 ರಿಂದ 2